25 December 2025 Thursday | SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಯಾರನ್ನೂ ದ್ವೇಷಿಸುವುದು ಬೇಡ, ಏಕೆಂದರೆ ಬದುಕು ಸಮಯ ಬಂದಾಗ ಪ್ರತಿಯೊಬ್ಬರಿಗೂ ಅವರವರ ತಪ್ಪನ್ನು ಎತ್ತಿ ತೋರಿಸುತ್ತದೆ!

-ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಯಾವುದೇ ಒಂದು ಸಂಬಂಧ ದೀರ್ಘಕಾಲ ಉಳಿಯಬೇಕೆಂದರೆ" ಕಣ್ಣ ಮುಂದೆ ಮಾತ್ರವಲ್ಲ ಬೆನ್ನ ಹಿಂದೆಯೂ ಪ್ರಾಮಾಣಿಕವಾಗಿರಬೇಕು.

ಮೈಲಾರ ಸಾವಿತ್ರಿಬಾಯಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 61 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಸಿಎಂ ಸಿದ್ದರಾಮಯ್ಯ ಕುರ್ಚಿ ಭದ್ರ

## ಅಧಿಕಾರ ಹಂಚಿಕೆ ಒಪ್ಪಂದ ಗೊತ್ತಿಲ್ಲ: ಸಚಿವ ಜಮೀರ್ ಅಹಮದ್

**ಮೈಸೂರು:** ಅಧಿಕಾರ ಹಂಚಿಕೆ ಒಪ್ಪಂದದ ಬಗ್ಗೆ ನನಗೆ ಗೊತ್ತಿಲ್ಲ. ಸದ್ಯಕ್ಕೆ ಮುಖ್ಯಮಂತ್ರಿ ಕುರ್ಚಿಯಲ್ಲಿ ಸಿದ್ದರಾಮಯ್ಯ ಭದ್ರವಾಗಿ ಕುಳಿತಿದ್ದಾರೆ ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ಹೇಳಿದರು.



ನಗರದಲ್ಲಿ ಪತ್ರಕರ್ತರೊಂದಿಗೆ ಬುಧವಾರ ಮಾತನಾಡಿದ ಅವರು, ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ಸಿದ್ದರಾಮಯ್ಯ ಅವರೇ ಹೇಳಿರುವಾಗ, ಮತ್ತೆ ಮತ್ತೆ ಆ ಚರ್ಚೆ ಏಕೆ ಎಂದು ಕೇಳಿದರು. ಸಿದ್ದರಾಮಯ್ಯ ಅವರೇ 2028ರ ವರೆಗೂ ಮುಖ್ಯಮಂತ್ರಿ ಆಗಿರುತ್ತಾರೆ. ಅವರನ್ನು ಕೆಳಗಿಳಿಸಲು ಹೈಕಮಾಂಡ್ ಬಿಟ್ಟರೆ ಬರ್‍ಯಾರಿಂದಲೂ ಸಾಧ್ಯವಿಲ್ಲ. ವರಿಷ್ಠರು ಮಾತ್ರ ತೀರ್ಮಾನಿಸಬಹುದು ಎಂದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೆಹಲಿಗೆ ಹೋಗಿರುವುದು ಇಲಾಖೆ ಕೆಲಸಕ್ಕಾಗಿ. ಅವರು ವರಿಷ್ಠರನ್ನೇನೂ ಭೇಟಿಯಾಗಿಲ್ಲ. ಅವರು ಸಿಎಂ ಆಗಬೇಕೆಂದು ಇಕ್ಬಾಲ್ ಹುಸೇನ್ ಹೇಳಿದ್ದಾರೆ. ಎಲ್ಲರೂ ಅವರವರ ಅಭಿಪ್ರಾಯ ಹೇಳಿತ್ತಾರೆ. ನನ್ನ ಅಭಿಪ್ರಾಯ ಹೇಳಿದ್ದೇನೆ. ಸಿದ್ದರಾಮಯ್ಯ ಅವರೇ ಸಿಎಂ ಕುರ್ಚಿಯಲ್ಲಿ ಮುಂದುವರಿಯುತ್ತಾರೆ. ಸಿಎಂ ಬದಲಾವಣೆ ಮಾಡಬೇಕಿರುವುದು ರಾಹುಲ್ ಗಾಂಧಿ, ಸೋನಿಯಾ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ. ಸದ್ಯ ಅಂಥ ಸನ್ನಿವೇಶವಿಲ್ಲ ಎಂದರು.

ತಮ್ಮ ಆಪ್ತಸಹಾಯಕ ಸರ್ಫರಾಜ್ ಮನೆ ಮೇಲೆ ಲೋಕಾಯುಕ್ತ ದಾಳಿ ಬಗ್ಗೆ ಪ್ರತಿಕ್ರಿಯಿಸಿದ ಅವರು, ನನಗೆ ಆ ಬಗ್ಗೆ ಮಾಹಿತಿ ಇಲ್ಲ. ಸರ್ಫರಾಜ್ ಅವರು ತಂದೆ ಕಾಲದಿಂದಲೂ ಶ್ರೀಮಂತರು. ಯಾಕೆ ದಾಳಿಯಾಗಿದೆ ಗೊತ್ತಿಲ್ಲ ಎಂದು ಹೇಳಿದರು.

# ಜಮೀರ್ ಆಪ್ತನಿಗೆ 'ಲೋಕಾ ಶಾಕ್'

## ಸಚಿವರ ಕಾರ್ಯದರ್ಶಿ ಸರ್ಫರಾಜ್‌ಗೆ ಸೇರಿದ 10 ಸ್ಥಳಗಳಲ್ಲಿ ದಾಳಿ

**ಬೆಂಗಳೂರು:** ಅಕ್ರಮ ಆಸ್ತಿ ಗಳಿಕೆ ಪ್ರಕರಣದಲ್ಲಿ ವಸತಿ ಸಚಿವ ಜಮೀರ್ ಅಹಮದ್ ಖಾನ್ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಮನೆಯೂ ಸೇರಿ ರಾಜ್ಯದ 10 ಸ್ಥಳಗಳಲ್ಲಿ ಲೋಕಾಯುಕ್ತ ಪೊಲೀಸರು ಬುಧವಾರ ದಾಳಿ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಏಳು, ವಸತಿ ಇಲಾಖೆಯ ಸಿಬ್ಬಂದಿ ಒಬ್ಬರ ಮನೆ ಮತ್ತು ಕೊಡಗಿನಲ್ಲಿ ಮೂರು ಸ್ಥಳ ಸೇರಿ ಒಟ್ಟು ಹತ್ತು ಕಡೆ ದಾಳಿ ನಡೆದಿದೆ. ಬೆಂಗಳೂರು ಲೋಕಾಯುಕ್ತ ಪೊಲೀಸ್ ವ್ಯಾಪ್ತಿಯಲ್ಲಿ ದಾಖಲಾಗಿದ್ದ ದೂರಿನ ಆಧಾರದಲ್ಲಿ ದಾಳಿ ನಡೆಸಲಾಗಿದೆ.

ಆದಾಯ ತೆರಿಗೆ ಇಲಾಖೆಯು ನೀಡಿದ್ದ ದೂರಿನ ಮೇಲೆ ಸಚಿವ ಜಮೀರ್ ಅಹಮದ್ ಖಾನ್ ಅವರ ಮನೆಯಲ್ಲಿ ಜಾರಿ ನಿರ್ದೇಶನಾಲಯದ ಅಧಿಕಾರಗಳು ಶೋಧ ನಡೆಸಿದ್ದರು. ಆಗ ಪತ್ತೆಯಾಗಿದ್ದ

ಪುಟ 2ಕ್ಕೆ

# ರಾಜ್ಯಕ್ಕೆ 40–45 ಟಿಎಂಸಿ ನೀರಿಗೆ ಬೇಡಿಕೆ

## ನದಿ ಜೋಡಣೆ ಯೋಜನೆ: ಡಿಸಿಎಂ ಡಿ.ಕೆ.ಶಿವಕುಮಾರ್ ಆಗ್ರಹ

**ನವದೆಹಲಿ:** ಕರ್ನಾಟಕ ರಾಜ್ಯಕ್ಕೆ ನದಿ ಜೋಡಣೆ ಯೋಜನೆಯಲ್ಲಿ ಕನಿಷ್ಠ 40–45 ಟಿಎಂಸಿ ನೀರನ್ನು ನೀಡಬೇಕು. ಗೋದಾವರಿ– ಕಾವೇರಿ ನದಿ ಜೋಡಣೆ ಯೋಜನೆಯಲ್ಲಿ ಹೆಚ್ಚುವರಿ 5 ಟಿಎಂಸಿ ನೀರನ್ನು ಭೀಮಾ ನದಿ ಪ್ರದೇಶಕ್ಕೆ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.



ದೆಹಲಿಯ ಕರ್ನಾಟಕ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನದಿ ಜೋಡಣೆ ವಿಚಾರವಾಗಿ ಕೇಂದ್ರ ಜಲಶಕ್ತಿ ಸಚಿವರ ನೇತೃತ್ವದಲ್ಲಿ ರಾಷ್ಟ್ರೀಯ ಜಲಅಭಿವೃದ್ಧಿ ಸಂಸ್ಥೆಯನ್ನು ರಚಿಸಲಾಗಿದೆ. ಎಲ್ಲಾ ರಾಜ್ಯಗಳು ಅದರ ಸದಸ್ಯರಾಗಿರುತ್ತವೆ. ಮಂಗಳವಾರ ಇದರ 24ನೇ ಸಭೆ ನಡೆಯಿತು. ನಮ್ಮ ರಾಜ್ಯಕ್ಕೆ ಸಂಬಂಧಿಸಿದಂತೆ ಗೋದಾವರಿ ಹಾಗೂ ಕಾವೇರಿ, ಬೇಡ್ತಿ ಹಾಗೂ ವರದಾ ನದಿ ಜೋಡಣೆ ಬಗ್ಗೆ ಚರ್ಚೆ ನಡೆದಿದೆ ಎಂದು ಹೇಳಿದರು.

ಗೋದಾವರಿ ಹಾಗೂ ಕಾವೇರಿ ನದಿ ಜೋಡಣೆ ಯೋಜನೆಯ ಮೊದಲ ಹಂತದಲ್ಲಿ 148 ಟಿಎಂಸಿ ನೀರನ್ನು ತಿರುಗಿಸಲಾಗುತ್ತಿದೆ. ಇದರಲ್ಲಿ ಕರ್ನಾಟಕಕ್ಕೆ ನಿಗದಿ ಮಾಡಿರುವುದು ಕೇವಲ 15.90 ಟಿಎಂಸಿ ನೀರು ಮಾತ್ರ. ನೀರನ್ನು ಯಾವ ಕಡೆ ನೀಡುತ್ತೀರಿ ಹಾಗೂ ಅದನ್ನು ಹೇಗೆ ಉಪಯೋಗಿಸಬೇಕು ಎಂಬ ಬೇಡಿಕೆ ಸಭೆಯ ಮುಂದಿಟ್ಟಿದ್ದೇವೆ ಎಂದು ಅವರು ತಿಳಿಸಿದರು.

ಬೇಡ್ತಿ ಹಾಗೂ ವರದಾ ನದಿ ಜೋಡಣೆ ನಮ್ಮ ರಾಜ್ಯದೊಳಗೆ ನಡೆಯಲಿದೆ. 18.50 ಟಿಎಂಸಿ ನೀರನ್ನು ಬಳಸಿಕೊಳ್ಳಲು ಅವಕಾಶ ಇದೆ. ಈ ಎರಡೂ ಯೋಜನೆಗಳಿಂದ ಕರ್ನಾಟಕಕ್ಕೆ ಒಟ್ಟು 34.40 ಟಿಎಂಸಿ ನೀರನ್ನು ನಿಗದಿ ಮಾಡಲಾಗಿದೆ. ಬೇಡ್ತಿ ಹಾಗೂ ವರದಾ ನದಿ

ಪುಟ 2ಕ್ಕೆ

# ಡಿಕೆಶಿ ಆಸೆಗೆ 'ರೆಡ್ ಸಿಗ್ನಲ್'?

## ಮುಖ್ಯಮಂತ್ರಿ ಗದ್ದುಗೆ ಲಾಬಿಗೆ ಸಿಗದ ಹೈಕಮಾಂಡ್ ಭೇಟಿ

**ಬೆಂಗಳೂರು:** ರಾಜ್ಯದ ಮುಖ್ಯಮಂತ್ರಿ ಕುರ್ಚಿ ಪಡೆಯಲು ನಿರಂತರ ಪ್ರಯತ್ನ ಮಾಡುತ್ತಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಹಿನ್ನಡೆಯಾಗಿದೆ. ರಾಹುಲ್ ಗಾಂಧಿ ಅವರು ಡಿಕೆಶಿ ಭೇಟಿಗೆ ಸಮಯ ನೀಡುತ್ತಿಲ್ಲ ಎನ್ನಲಾಗಿದೆ.



ಬಿಕ್ಕಟ್ಟು ಪರಿಹಾರಕ್ಕೆ ಹೈಕಮಾಂಡ್ ನಾಯಕರು ಮಧ್ಯ ಪ್ರವೇಶಿಸುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿ ಮಟ್ಟದಲ್ಲಿ ಭಾರೀ ಲಾಬಿ ನಡೆಸುತ್ತಿದ್ದಾರೆ. ಆದರೆ, ಕಾಂಗ್ರೆಸ್ ಹೈಕಮಾಂಡ್ ಡಿ.ಕೆ.ಶಿವಕುಮಾರ್ ಅವರ ಭೇಟಿಗೆ ಸಮಯವನ್ನೇ ನೀಡದೆ ಸತಾಯಿಸುತ್ತಿರುವುದು ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ದೆಹಲಿಯಲ್ಲಿ ಬೀಡುಬಿಟ್ಟಿರುವ ಡಿ.ಕೆ.ಶಿವಕುಮಾರ್ ಅವರು, ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲಾಗದೆ ಪರದಾಡುತ್ತಿದ್ದಾರೆ. ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ ಆಯೋಜಿಸಲು ಮುಂದಾಗಿರುವ ಅಹಿಂದ ಸಮಾವೇಶಕ್ಕೆ ಕಡಿವಾಣ ಹಾಕುವ ಪ್ರಯತ್ನವನ್ನು ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ಮುಂದುವರಿಸಿದ್ದಾರೆ. ಆದರೆ ಹೈಕಮಾಂಡ್ ಭೇಟಿ ಸಿಗದೆ ಹತಾಶರಾಗಿದ್ದಾರೆ ಎನ್ನಲಾಗಿದೆ. ಕೇಂದ್ರ ಸಚಿವರ ಜೊತೆ ರಾಜ್ಯದ ವಿವಿಧ ಅಭಿ ವೃದ್ಧಿ ಯೋಜನೆಗಳ ಬಗ್ಗೆ ಚರ್ಚಿಸುವ ಸಲುವಾಗಿ ನಿನ್ನೆಯಿಂದಲೂ ದೆಹಲಿ ಪ್ರವಾಸದಲ್ಲಿರುವ ಡಿ.ಕೆ.ಶಿವ ಕುಮಾರ್ ಪಕ್ಷದ ವರಿಷ್ಠರನ್ನು ಭೇಟಿ ಮಾಡಿ ರಾಜ್ಯ ರಾಜಕೀಯ ವಿಚಾರಗಳ ಚರ್ಚೆಗೆ ನಿರಂತರ ಪ್ರಯತ್ನ ನಡೆಸಿದ್ದಾರೆ. ಆದರೆ ಅದು ಸಾಧ್ಯವಾಗಿಲ್ಲ.

ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಪ್ರಮುಖರು ಡಿ.ಕೆ.ಶಿವಕುಮಾರ್ ಅವರ ಭೇಟಿಗೆ ಸಮಯ ನೀಡಿಲ್ಲ ಎನ್ನಲಾಗಿದೆ. ಇದು ಡಿಕೆಶಿ ಬಣದ ನಾಯಕರನ್ನು ಕೆರಳಿಸಿದೆ. ಇದು ಸಿಎಂ ಮತ್ತು ಡಿಸಿಎಂ ಬಣದ ನಾಯಕರ ಸಮರ ಮತ್ತಷ್ಟು ತಾರಕಕ್ಕೆ ಹೋಗುವ ಮುನ್ಸೂಚನೆಯಿ ಇದೆ ಎಂದು ತಿಳಿದು ಬಂದಿದೆ.

ಕಳೆದ ತಿಂಗಳು ಡಿ.ಕೆ.ಶಿವಕುಮಾರ್ ದೆಹಲಿಗೆ ಭೇಟಿ ನೀಡಿದಾಗಲೂ ರಾಹುಲ್ ಗಾಂಧಿ ಭೇಟಿಗೆ ಸಮಯ ನೀಡಿಲಿಲ್ಲ. ಇದರಿಂದ ಕೆರಳಿದ ಡಿ.ಕೆ.ಶಿವಕುಮಾರ್, ಅಧಿಕಾರ ಹಂಚಿಕೆಯ ಸಂಬಂಧ ನಡೆದಿರುವ ಒಪ್ಪಂದದ ಜಾರಿಗೆ ಪಟ್ಟು ಹಿಡಿದಿದ್ದರು. ಇದು ಪಕ್ಷದಲ್ಲಿ ಗೊಂದಲದ ವಾತಾವರಣ ನಿರ್ಮಿಸಿತ್ತು. ಕೊನೆಗೇ, ಅಧಿವೇಶನ ಮುಗಿಯುವವರೆಗೆ ತೆಪ್ಪಗಿರುವಂತೆ ಹೈಕಮಾಂಡ್ ಸೂಚಿಸಿತ್ತು ಎನ್ನಲಾಗಿದೆ.ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವ ರನ್ನು ಹಲವಾರು ಭಾರೀ ಭೇಟಿ ಮಾಡಿದ್ದ ಡಿ.ಕೆ.ಶಿವ ಕುಮಾರ್, ಅಧಿಕಾರಕ್ಕಾಗಿ ಹಕ್ಕೊತ್ತಾಯ ಮಾಡಿದ್ದರು. ಇದು ವರಿಷ್ಠ ನಾಯಕರಿಗೆ ತಲೆನೋವಾಗಿ ಪರಿಣಮಿಸಿದೆ. ಹೀಗಾಗಿ ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್ ಭೇಟಿಗೆ ಸಮಯ ನೀಡಲು ಹಿಂದೇಟು ಹಾಕುತ್ತಿದ್ದಾರೆ ಎನ್ನಲಾಗಿದೆ. ಡಿಸೆಂಬರ್ 27ರಂದು ಕಾಂಗ್ರೆಸ್ ರಾಷ್ಟ್ರೀಯ ಕಾರ್ಯಕಾರಿಣಿ ಸಮಿತಿ ಸಭೆ ದೆಹಲಿಯಲ್ಲಿ ನಡೆಯುತ್ತಿದೆ. ಅದರಲ್ಲಿ ಭಾಗವಹಿಸಲು ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಇಬ್ಬರು ದೆಹಲಿಗೆ ತೆರಳುವ ಸಾಧ್ಯತೆ ಇದೆ. ಆ ವೇಳೆಯಲ್ಲಿ ಅಧಿಕಾರ ಹಂಚಿಕೆಯ ಕುರಿತು ಮಾತುಕತೆಗಳಾಗಬೇಕು ಎಂಬುದು ಡಿ.ಕೆ.ಶಿವಕುಮಾರ್ ಹಠವಾಗಿದೆ. ಆದರೆ, ಇದುವರೆಗೂ ಈ ಇಬ್ಬರಿಗೂ ಸಭೆಗೆ ಆಹ್ವಾನವೇ ಬಂದಿಲ್ಲ.

# ಡಿಕೆಶಿ ವೈರಾಗ್ಯದ ಮಾತು!

## ನಾನು ಪಕ್ಷದ ಕಾರ್ಯಕರ್ತನಾಗಿಯೇ ಇರಲು ಬಯಸುವೆ

**ನವದೆಹಲಿ:** ಮುಖ್ಯಮಂತ್ರಿ ಕುರ್ಚಿ ವಿಚಾರದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ವೈರಾಗ್ಯದ ಮಾತನ್ನು ಆಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕಮಾಂಡ್ ಅಂಗಳಕ್ಕೆ ಚೆಂಡು ಎಸೆದು ಸುಮ್ಮನಾದರೆ, ಡಿಕೆಶಿ ನಾನು ಹೈಕಮಾಂಡ್‌ನವರಿಗೆ ತೊಂದರೆ ಕೊಡಲು ಹೋಗುವುದಿಲ್ಲ ಎಂದು ಅಡ್ಡಗೋಡೆ ಮೇಲೆ ದೀಪವಿಟ್ಟಿದ್ದಾರೆ.



ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಾನು ರಾಹುಲ್‌ಗಾಂಧಿ ಅವರಿಗೆ ತೊಂದರೆ ಕೊಡಲು ಬಯಸುವುದಿಲ್ಲ. ನಾನು ಪಕ್ಷದ ಕಾರ್ಯಕರ್ತನಾಗಿಯೇ ಇರಲು ಬಯಸುತ್ತೇನೆ ಎಂದು ಅಚ್ಚರಿಯ ಹೇಳಿಕೆ ನೀಡಿದ್ದಾರೆ.


ದೆಹಲಿಯಲ್ಲಿ ನಾನು ಯಾರನ್ನು ಭೇಟಿ ಮಾಡಿಲ್ಲ. ವಿದೇಶದಿಂದ ರಾಹುಲ್ ಗಾಂಧಿ ನಿನ್ನೆ ಆಗಮಿಸಿದ್ದಾರೆ. ಈಗ ಅವರಿಗೆ ತೊಂದರೆ ನೀಡಲು ಹೋಗುವುದಿಲ್ಲ. ನಾನು ಪಕ್ಷದ ಕಾರ್ಯಕರ್ತನ್ನಾಗಿ ಇರಲು ಇಷ್ಟಪಡುತ್ತೇನೆ ಎಂದು ವೈರಾಗ್ಯದ ಮಾತನ್ನು ಆಡಿರುವುದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಮುಖ್ಯಮಂತ್ರಿ ಬದಲಾವಣೆ ವದಂತಿಯನ್ನು ತಳ್ಳಿ ಹಾಕಿದ ಡಿಕೆಶಿ, ಮುಖ್ಯಮಂತ್ರಿ ಕುರ್ಚಿಗಾಗಿ ವಿವಾದವೇನೂ ಇಲ್ಲ. ಉಪ ಮುಖ್ಯಮಂತ್ರಿಯಾಗಿ ಮುಂದುವರಿಯಲು ನನಗೆ ತೃಪ್ತಿ ಇದೆ. ನಾಯಕತ್ವಕ್ಕೆ ಸಂಬಂಧಿಸಿದಂತೆ ಯಾವುದೇ ನಿರ್ಧಾರ ತೆಗೆದುಕೊಳ್ಳುವುದು ಕಾಂಗ್ರೆಸ್ ಪಕ್ಷಕ್ಕೆ ಬಿಟ್ಟದ್ದು, ಯಾವುದೇ ದಿನವಾದರೂ ಕಾಂಗ್ರೆಸ್ ಪಕ್ಷ ನಿರ್ಧಾರ ತೆಗೆದುಕೊಳ್ಳಬಹುದು. ವರಿಷ್ಠರು ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧ ಎಂದರು.

ಆಂತರಿಕ ಭಿನ್ನಾಭಿಪ್ರಾಯಗಳು ಅಥವಾ ಕಾಂಗ್ರೆಸ್ ಹೈಕಮಾಂಡ್ ಜೊತೆಗೆ ಸಭೆ ಎಂಬಿತ್ಯಾದಿ ವದಂತಿಗಳು ಮಾಧ್ಯಮಗಳಲ್ಲಿ ಮಾತ್ರ ಬರುತ್ತಿದೆ. ಎಐಸಿಸಿ ವರಿಷ್ಠರನ್ನೂ ಭೇಟಿ ಮಾಡುತ್ತಿಲ್ಲ. ಉಪ ಮುಖ್ಯಮಂತ್ರಿಯಾಗಿ ಮುಂದುವರಿಯಲು ನನಗೆ ಸಂತೋಷವಿದೆ ಎಂದರು.

### ಅಹಿಂದ ಸಮಾವೇಶಕ್ಕೆ ಒಳ್ಳೆದಾಗಲಿ!

ಮೈಸೂರಿನಲ್ಲಿ ಅಹಿಂದ ಸಮಾವೇಶ ನಡೆಸುವ ಬಗ್ಗೆ ಕೇಳಲಾದ ಪ್ರಶ್ನೆಗೆ ಅವರಿಗೆ ಒಳ್ಳೆದಾಗಲಿ ಎಂದಷ್ಟೇ ಅವರು ಉತ್ತರ ನೀಡಿದರು. ಸಚಿವ ಸಂಪುಟ ಪುನಾರಚನೆ ಸಾಧ್ಯತೆ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಡಿ.ಕೆ ಶಿವಕುಮಾರ್, ಈ ಸಂಬಂಧ ನೀವೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮಾತನಾಡಿ ಎಂದು ಮಾಧ್ಯಮದವರಿಗೆ ಸಲಹೆ ನೀಡಿದರು. ಬ್ರೇಕ್ ಫಾಸ್ಟ್ ಮೀಟಿಂಗ್ ಬಹಳ ಸಾಮಾನ್ಯ ಪ್ರಕ್ರಿಯೆಯಾಗಿದೆ. ಎಲ್ಲರ ಜೊತೆಗೂ ಬ್ರೇಕ್ ಫಾಸ್ಟ್ ಮೀಟಿಂಗ್ ಮಾಡುತ್ತೇವೆ. ಶೇರಿಂಗ್ ಕೇರಿಂಗ್ ಇದೆಲ್ಲಾ ಬಹಳ ಸಾಮಾನ್ಯ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.



ಕ್ರಿಸ್ ಮಸ್ ಸಂಭ್ರಮಕ್ಕೆ ಸಜ್ಜಾಗಿರುವ ಮೈಸೂರಿನ ಇತಿಹಾಸ ಪ್ರಸಿದ್ಧ ಸೆಂಟ್ ಫಿಲೋಮಿನ ಚರ್ಚ್.

# ಗೃಹಲಕ್ಷ್ಮಿ ಹಣ ನೀಡುವವರೆಗೂ ಬಿಜೆಪಿ ಪ್ರತಿಭಟನೆ: ಅಶೋಕ್

**ಬೆಂಗಳೂರು:** ಗೃಹಲಕ್ಷ್ಮಿ ಯೋಜನೆಯಡಿ ಈ ವರ್ಷದ ಫೆಬ್ರುವರಿ ಮತ್ತು ಮಾರ್ಚ್ ತಿಂಗಳ ಹಣವನ್ನು ವಿತರಿಸುವ ವರೆಗೂ ಬಿಜೆಪಿ ಪ್ರತಿಭಟನೆ ನಡೆಸಲಿದೆ ಎಂದು ವಿಪಕ್ಷ ನಾಯಕ ಆರ್. ಅಶೋಕ ಬುಧವಾರ ತಿಳಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫೆಬ್ರುವರಿ ಮತ್ತು ಮಾರ್ಚ್ ತಿಂಗಳಲ್ಲಿ ಗೃಹಲಕ್ಷ್ಮಿ ಯೋಜನೆಯ 5,000 ಕೋಟಿ ಹಣವನ್ನು ಫಲಾನುಭವಿಗಳಿಗೆ ನೀಡಿಲ್ಲ. ಸರ್ಕಾರ ಉದ್ದೇಶಪೂರ್ವಕವಾಗಿಯೇ ಅದನ್ನು ತಪ್ಪಿಸಿತ್ತು. ಹಣಕಾಸು ಇಲಾಖೆ ಅದನ್ನು ಮುಚ್ಚಿಟ್ಟಿತ್ತು ಎಂದು ಆರೋಪಿಸಿದರು.

ಪುಟ 2ಕ್ಕೆ

# ಜ.25ರಂದು ಸಿದ್ದರಾಮಯ್ಯ ಪರ ಅಹಿಂದ ಸಮಾವೇಶ

**ಮೈಸೂರು:** ಸಿದ್ದರಾಮಯ್ಯ ಅವರನ್ನು ಪೂರ್ಣಾವಧಿಗೆ ಮುಖ್ಯಮಂತ್ರಿಯಾಗಿ ಮುಂದುವರಿಸಬೇಕು ಎಂದು ಒತ್ತಾಯಿಸಿ ಜ.25ರಂದು ಅಹಿಂದ ಸಮಾವೇಶ ನಡೆಸಲು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

ಅಹಿಂದ ಮೈಸೂರು ಶೀರ್ಷಿಕೆಯಡಿ ಬುಧವಾರ ಆಯೋಜಿಸಿದ್ದ ಸಭೆಯಲ್ಲಿ ಹಲವು ಸಮುದಾಯಗಳ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಮಾತನಾಡಿದರು.


ವಿವರ ಪುಟ 3ರಲ್ಲಿ

> ನಾವು ಯಾರ ಪರವೂ ಅಲ್ಲ, ವಿರುದ್ಧವೂ ಅಲ್ಲ. ನಾವೆಲ್ಲ ಸಾಮಾಜಿಕವಾಗಿ ದಮನಕ್ಕೆ ಒಳಗಾದ ಮನುಷ್ಯ ಜಾತಿಯವರು. ಅಹಿಂದ ಸಮುದಾಯಗಳು ಅವಮಾನಕ್ಕೆ ಒಳಾಗುತ್ತಿವೆ. ಅವರ ಮೂಲಕ ಸಾಮಾಜಿಕ ನ್ಯಾಯದ ಅಗತ್ಯ ಮಂಡಿಸುವ ಉದ್ದೇಶದಿಂದ ಸಮಾವೇಶ ಮಾಡುವುದು ಬೇಡವೇ?
>
> **ಜನಾರ್ದನ್ (ಜನ್ನಿ)** ರಂಗಕರ್ಮಿ

# ಅವಾಚ್ಯ ಶಬ್ದ ಬಳಸಿ ಪೋಸ್ಟ್: ದರ್ಶನ್ ಪತ್ನಿ ವಿಜಯಲಕ್ಷ್ಮಿ ದೂರು

**ಬೆಂಗಳೂರು:** ಸಾಮಾಜಿಕ ಜಾಲತಾಣದಲ್ಲಿ ತಮ್ಮ ವಿರುದ್ಧ ಕೆಟ್ಟ ಭಾಷೆ ಬಳಸಿ ಪೋಸ್ಟ್ ಮಾಡಿದ್ದವರ ವಿರುದ್ಧ ನಟ ದರ್ಶನ್ ಪತ್ನಿ ವಿಜಯಲಕ್ಷ್ಮಿ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಬುಧವಾರ ದೂರು ನೀಡಿದ್ದಾರೆ.

ದರ್ಶನ್ ಇದ್ದಾಗ ಯಾರೂ ಮಾತನಾಡುತ್ತಿರಲಿಲ್ಲ. ಈಗ ವೇದಿಕೆ, ಟಿವಿ ಚಾನೆಲ್‌ಗಳಲ್ಲಿ ಮಾತನಾಡುತ್ತಾರೆ. ದರ್ಶನ್ ಇದ್ದಾಗ ಇವರೆಲ್ಲಾ ಇದ್ರೋ? ಇರಲಿಲ್ವೋ ಎನ್ನುವಂತೆ ಇದ್ದರು ಎಂದು ದಾವಣಗೆರೆಯಲ್ಲಿ ವಿಜಯಲಕ್ಷ್ಮಿ ಹೇಳಿಕೆ ನೀಡಿದ್ದರು. ಈ ಹೇಳಿಕೆ ನೀಡಿದ ಬಳಿಕ ವಿಜಯಲಕ್ಷ್ಮಿ ಅವರ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ನಿಂದನೆಗಳ ಪೋಸ್ಟ್ ಪ್ರಕಟವಾಗುತ್ತಿದೆ.



ನಿಂದನೆಯ ವಿರುದ್ಧ ಸಿಡಿದ ವಿಜಯಲಕ್ಷ್ಮಿ 15 ಇನ್‌ಸ್ಟಾಗ್ರಾಂ ಐಡಿ, 150ಕ್ಕೂ ಹೆಚ್ಚು ಕೆಟ್ಟ ಹೇಳಿಕೆಗಳ ವಿರುದ್ಧ ಫೋಟೋ ಸಮೇತ ನಗರ ಪೊಲೀಸ್ ಆಯುಕ್ತರಿಗೂ ದೂರು ದೂರು ನೀಡಿದ್ದಾರೆ. ದೂರು ನೀಡಿದ ಬಳಿಕ ಮಾಧ್ಯಮಗಳು ವಿಜಯಲಕ್ಷ್ಮಿ ಅವರನ್ನು ಮಾತನಾಡಲು ಪ್ರಯತ್ನಿಸಿದವು. ಆದರೆ ಪ್ರತಿಕ್ರಿಯೆ ನೀಡದೇ ತೆರಳಿದರು.

# ಬೈರತಿ ವಿರುದ್ಧ ಲುಕ್ ಔಟ್ ನೋಟಿಸ್

**ಬೆಂಗಳೂರು:** ಬಿಕ್ಲು ಶಿವ ಕೊಲೆ ಪ್ರಕರಣದಲ್ಲಿ ಶಾಸಕ ಬೈರತಿ ಬಸವರಾಜ್ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಂಡ ಬೆನ್ನಲ್ಲೇ ಸಿಐಡಿ ಅಧಿಕಾರಿಗಳು ಲುಕ್‌ಔಟ್ ನೋಟಿಸ್ ಜಾರಿಮಾಡಿದ್ದಾರೆ. ಬೈರತಿಗೆ ಬಂಧನ ಭೀತಿ ಹೆಚ್ಚಾಗಿದೆ. ಯಾವುದೇ ಕ್ಷಣದಲ್ಲಿ ಅರೆಸ್ಟ್ ಮಾಡುವ ಸಾಧ್ಯತೆಯಿದೆ.



ಕಳೆದ ಐದು ದಿನಗಳಿಂದ ಬೈರತಿ ಬಸವರಾಜ್ ನಾಪತ್ತೆಯಾಗಿದ್ದಾರೆ. ಮಹಾ ರಾಷ್ಟ್ರ, ತಮಿಳುನಾಡು, ಗೋವಾದಲ್ಲಿ ಮೂರು ವಿಶೇಷ ತಂಡಗಳು ಹುಡುಕಾಟ ನಡೆಸಿವೆ. ನಿರೀಕ್ಷಣಾ ಜಾಮೀನು ಸಿಗುವ ನಿರೀಕ್ಷೆಯಲ್ಲಿದ್ದ ಬೈರತಿ ಬಸವರಾಜ್‌ಗೆ ಕೋರ್ಟ್ ಶಾಕ್ ನೀಡಿತ್ತು.

ಸಿಐಡಿ ಅಧಿಕಾರಿಗಳ ಬಂಧನ ಭಯದ ನಡುವೆಯೇ ಹೈಕೋರ್ಟ್‌ಗೆ ಮೇಲ್ಮನವಿ ಅರ್ಜಿ ಸಲ್ಲಿಸಲು ಮುಂದಾಗಿದ್ದಾರೆ. ಅದಕ್ಕೂ ಮೊದಲೇ ಬಂಧಿಸಲೇಬೇಕು ಎನ್ನುವ ನಿಟ್ಟಿನಲ್ಲಿ ಸಿಐಡಿ ಪೊಲೀಸರು ಕಾರ್ಯಾಚಣೆ ನಡೆಸಿದ್ದಾರೆ

ಪುಟ 2ಕ್ಕೆ

# ಇಸ್ರೋದಿಂದ ಅಮೆರಿಕಾ ಉಪಗ್ರಹ ಕಕ್ಷೆಗೆ

## ಭಾರತದ ರಾಕೆಟ್ ಮಾರ್ಕ್–3 ಬಳಸಿ ಬ್ಲೂಬರ್ಡ್–6 ಯಶಸ್ವಿ ಉಡಾವಣೆ


**ಶ್ರೀಹರಿಕೋಟಾ:** ಭಾರತದ ಬಾಹುಬಲಿ ರಾಕೆಟ್ ಮಾರ್ಕ್–3 (ಎಲ್‌ವೈಎಂ3–ಎಂ6) ಬಳಕೆ ಮಾಡಿ ಇಸ್ರೋ ಆಂಧ್ರ ಪ್ರದೇಶದ ಶ್ರೀಹರಿಕೋಟಾದಿಂದ ಅಮೆರಿಕದ ಬ್ಲೂಬರ್ಡ್–6 ಉಪಗ್ರಹವನ್ನು ಯಶಸ್ವಿಯಾಗಿ ಕಕ್ಷೆಗೆ ಸೇರಿಸಿದೆ.

ಶ್ರೀಹರಿಕೋಟಾ ಉಡ್ಡಯನ ಕೇಂದ್ರದ ಎರಡನೇ ಲಾಂಚ್ ಪ್ಯಾಡ್‌ನಿಂದ ಬುಧವಾರ ಬೆಳಗ್ಗೆ 8:54ಕ್ಕೆ ಮಾರ್ಕ್ 3 ರಾಕೆಟ್ 6,500 ಕೆ.ಜಿ ತೂಕದ ಭಾರೀ ಉಪಗ್ರಹವನ್ನು ಹೊತ್ತುಕೊಂಡು ನಭಕ್ಕೆ ಚಿಮ್ಮಿತು.

ಸುಮಾರು 15 ನಿಮಿಷಗಳ ಹಾರಾಟದ ನಂತರ ರಾಕೆಟ್‌ನಿಂದ ಬ್ಲೂಬರ್ಡ್ ಬ್ಲಾಕ್–2 ಬೇರ್ಪಟ್ಟು ಸುಮಾರು 520 ಕಿ.ಮೀ .ಎತ್ತರದಲ್ಲಿ ಅದರ ಉದ್ದೇಶಿತ ಕಕ್ಷೆಯನ್ನು ಯಶಸ್ವಿಯಾಗಿ ತಲುಪಿತು.

ಉಪಗ್ರಹ ಉಡಾವಣೆ ಉಶಸ್ವಿಯಾಗಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ ಇಸ್ರೋವನ್ನು ಅಭಿನಂದಿಸಿದ್ದಾರೆ. ಎಲ್‌ವೈಎಂ3–ಎಂ6 ಯಶಸ್ವಿಯಾಗಿ ಮತ್ತು ನಿಖರವಾಗಿ ಬ್ಲೂಬರ್ಡ್ ಬ್ಲಾಕ್–2 ಸಂವಹನ ಉಪಗ್ರಹವನ್ನು ಉದ್ದೇಶಿತ ಕಕ್ಷೆಗೆ ಸೇರಿಸಿದೆ ಎಂದು ಬಾಹ್ಯಾಕಾಶ ಇಲಾಖೆ ಕಾರ್ಯದರ್ಶಿ ಮತ್ತು

ಪುಟ 2ಕ್ಕೆ



### ಮೊಬೈಲ್‌ಗೆ ನೇರ ಇಂಟರ್‌ನೆಟ್

ವಿಶ್ವದ ಮೊದಲ ಬಾಹ್ಯಾಕಾಶ ಆಧಾರಿತ ಸೆಲ್ಯುಲಾರ್ ಬ್ರಾಡ್‌ಬ್ಯಾಂಡ್ ನೆಟ್‌ವರ್ಕ್ ನಿರ್ಮಿಸುವ ಭಾಗವಾಗಿ ಈ ಉಪಗ್ರಹ ರೂಪಿಸಲಾಗಿದೆ. ಟೆಕ್ಸಾಸ್ ಮೂಲದ ಕಂಪನಿಯು 2026ರ ಅಂತ್ಯದ ವೇಳೆಗೆ 45–60 ಉಪಗ್ರಹಗಳನ್ನು


ಪುಟ 2ಕ್ಕೆ

# ಕರ್ನಾಟಕದ ಉದ್ಯಮಿಯಿಂದ ಅಯೋಧ್ಯೆಯ ದೇಗುಲಕ್ಕೆ ಚಿನ್ನದ ಶ್ರೀರಾಮ ಮೂರ್ತಿ ದಾನ

## ವಜ್ರ, ಪಚ್ಚೆ, ಅಮೂಲ್ಯ ರತ್ನಗಳಿಂದ ತಯಾರಿಸಿದ 10 ಅಡಿ, 8 ಅಡಿ ಅಗಲದ ಮೂರ್ತಿ

**ಬೆಂಗಳೂರು:** ಕರ್ನಾಟಕದ ಉದ್ಯಮಿ ದಾನಿಯೊಬ್ಬರು ಅಯೋಧ್ಯೆಯ ಶ್ರೀರಾಮ ಮಂದಿರಕ್ಕೆ 30 ಕೋಟಿ ಮೌಲ್ಯದ ಚಿನ್ನದ ಶ್ರೀರಾಮ ಮೂರ್ತಿಯನ್ನು ಕೊಡುಗೆ ನೀಡಿದ್ದಾರೆ. ವಜ್ರ, ಪಚ್ಚೆ ಮತ್ತು ಇತರ ಅಮೂಲ್ಯ ರತ್ನಗಳಿಂದ ಕೂಡಿದ 10 ಅಡಿ ಎತ್ತರ ಹಾಗೂ 8 ಅಡಿ ಅಗಲದ ರಾಮನ ಮೂರ್ತಿಯನ್ನು ದಾನ ನೀಡಿದ್ದಾರೆ.

ಅಯೋಧ್ಯೆಯ ರಾಮಲಲ್ಲಾ ದೇವಾಲಯ ಆವರಣದಲ್ಲಿ ಭವ್ಯವಾದ ಚಿನ್ನದ ವರ್ಣದ ಪ್ರತಿಮೆಯ ಸ್ಥಾಪನೆಗೆ ಅಯೋಧ್ಯೆ ಸಾಕ್ಷಿಯಾಗಲಿದೆ. ವಜ್ರಗಳು, ಪಚ್ಚೆಗಳು ಮತ್ತು ಇತರ ಅಮೂಲ್ಯ ರತ್ನಗಳಿಂದ ಕೂಡಿದ 10 ಅಡಿ ಎತ್ತರ, 8 ಅಡಿ ಅಗಲದ ಪ್ರತಿಮೆಯನ್ನು ಕರ್ನಾಟಕದ ಭಕ್ತರೊಬ್ಬರು ದಾನ ಮಾಡಿದ್ದಾರೆ. ಇದು ನಿನ್ನೆ ಅಯೋಧ್ಯೆಯನ್ನು



ತಲುಪಿದೆ.

ಡಿಸೆಂಬರ್ 29ರಿಂದ 2026ರ ಜನವರಿ 2ರವರೆಗೆ ಆಚರಿಸಲಾಗುವ ರಾಮ ಲಲ್ಲಾ ಪ್ರಾಣ ಪ್ರತಿಷ್ಠೆಯ

ಪುಟ 2ಕ್ಕೆ

### 30 ಕೋಟಿ ಮೌಲ್ಯ: ದಾನಿ ಹೆಸರು ಗೌಪ್ಯ

**ಅಯೋಧ್ಯೆ:** ತಂಜಾವೂರಿನ ನುರಿತ ಕುಶಲಕರ್ಮಿಗಳು ಮೂರ್ತಿಯ ಕೆತ್ತನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಕಲಾತ್ಮಕ ಮತ್ತು ಭವ್ಯವಾದ ನೋಟವನ್ನು ನೀಡಿದ್ದಾರೆ. ವಜ್ರಗಳು, ಪಚ್ಚೆಗಳು, ನೀಲಮಣಿಗಳು ಮತ್ತು ಚಿನ್ನದಿಂದ ಕೂಡಿದ್ದು, ಬಳಸಿದ ನಿಖರವಾದ ಲೋಹವನ್ನು ತಜ್ಞರು ಗುರುತಿಸುತ್ತಿದ್ದಾರೆ. ದಕ್ಷಿಣ ಭಾರತದ ಸಾಂಪ್ರದಾಯಿಕ ಶಿಲ್ಪಕಲಾ ಶೈಲಿಯಲ್ಲಿ ರಚಿಸಲಾದ ಈ ಪ್ರತಿಮೆಯ ಮೌಲ್ಯ ಅಂದಾಜು

ಪುಟ 2ಕ್ಕೆ

ಮೊದಲ ಪುಟದಿಂದ

## 40–45 ಟಿಎಂಸಿ ನೀರಿಗೆ ಬೇಡಿಕೆ

ಜೋಡಣೆಗೆ ಡಿಪಿಆರ್ ತಯಾರಿಸಲು ನಾವು ಅನುಮತಿಯನ್ನು ನೀಡಿದ್ದೇವೆ. ಇದಕ್ಕೆ 10 ಸಾವಿರ ಕೋಟಿ ವೆಚ್ಚವಾಗಲಿದೆ. ಇದರಲ್ಲಿ ಶೇ.90 ಕೇಂದ್ರ ಸರ್ಕಾರ ಹಾಗೂ ಶೇ.10 ರಾಜ್ಯ ಸರ್ಕಾರ ಭರಿಸಲಿದೆ ಎಂದು ಮಾಹಿತಿ ನೀಡಿದರು.

ಸುಪ್ರೀಂ ಕೋರ್ಟ್ ತೀರ್ಪು ಹಿನ್ನೆಲೆಯಲ್ಲಿ ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಎರಡು ತಿಂಗಳಲ್ಲಿ ಸಲ್ಲಿಕೆ ಮಾಡುತ್ತೇವೆ ಎಂದು ಕೇಂದ್ರ ಸಚಿವರ ಬಳಿ ತಿಳಿಸಿದ್ದೇನೆ. ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಲಾಗಿರುವ ಹಣವನ್ನು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದೇನೆ ಎಂದು ಹೇಳಿದರು.

ಕೃಷ್ಣಾ ಮೇಲ್ದಂಡೆ ಯೋಜನೆ ಬಗ್ಗೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಬೇಕು. ಇದರ ಸಂಬಂಧ ಈಗಾಗಲೇ ಎರಡು ಬಾರಿ ಸಭೆ ಮುಂದೂಡಲ್ಪಟ್ಟಿದೆ. ಮಹದಾಯಿ ವಿಚಾರವಾಗಿ ಅಧಿಕಾರಿಗಳು ಸಭೆ ಮಾಡಿದ್ದಾರೆ. ಈ ಯೋಜನೆ ವಿಚಾರದಲ್ಲಿ ಅರಣ್ಯ ಇಲಾಖೆ ಮೇಲೆ ಒತ್ತಡ ಹಾಕುವಂತೆ ಕೇಳಿದ್ದೇವೆ.

ಕೇಂದ್ರ ಸಚಿವರು ನನಗೆ ಮತ್ತೊಂದು ದಿನ ಭೇಟಿಗೆ ಸಮಯಾವಕಾಶ ನೀಡುತ್ತೇನೆ. ಜಲ ಜೀವನ್ ಮಿಷನ್ ಯೋಜನೆಯಿಂದ ಹಿಡಿದು ಕರ್ನಾಟಕಕ್ಕೆ ಸಂಬಂಧಿಸಿದ ಎಲ್ಲಾ ವಿಚಾರವಾಗಿ ಚರ್ಚೆ ಮಾಡಲು ತಿಳಿಸಿದ್ದಾರೆ ಎಂದು ಡಿಕೆಶಿ ತಿಳಿಸಿದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಕಾಡುಪ್ರಾಣಿಗಳ ಹಾವಳಿ ತಡೆಗೆ ಕ್ರಮವಹಿಸಿ: ಕೆ.ವೆಂಕಟೇಶ್

ಚಾಮರಾಜನಗರ, ಕಾಡುಪ್ರಾಣಿಗಳ ಹಾವಳಿ ಹೆಚ್ಚಾಗಿದ್ದು, ಇದನ್ನು ಪರಿಣಾಮಕಾರಿಯಾಗಿ ತಡೆಯಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ತುರ್ತಾಗಿ ತೆಗೆದುಕೊಳ್ಳುವಂತೆ ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಕಂದಾಯ, ಅರಣ್ಯ, ಕುಡಿಯುವ ನೀರು ಹಾಗೂ ಇನ್ನಿತರ ಪ್ರಮುಖ ವಿಷಯಗಳಿಗೆ ಸಂಬಂಧಿಸಿದಂತೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ಕಾಡುಪ್ರಾಣಿಗಳು ಪದೇ ಪದೇ ಅರಣ್ಯದಿಂದ ಹೊರಬಂದು ಜನವಸತಿ, ಜಮೀನು ಪ್ರದೇಶಗಳ ಬಳಿ ಕಾಣಿಸಿಕೊಳ್ಳುತ್ತಿದೆ. ಇದರಿಂದ ಜನರು ಭಯಬೀತರಾಗಿದ್ದಾರೆ. ಗ್ರಾಮಸ್ಥರ ಜಾನುವಾರುಗಳಿಗೆ ರಕ್ಷಣೆ ಆಗಬೇಕಿದೆ. ಜನರ ಜೀವಕ್ಕೆ ಯಾವುದೇ ತೊಂದರೆಯಾಗದಂತೆ ಕೂಡಲೇ ಅಗತ್ಯವಿರುವ ಎಲ್ಲ ಮುಂಜಾಗ್ರತಾ ಕ್ರಮಗಳನ್ನು ತಕ್ಷಣದ ಲ್ಲಿಯೇ ಕೈಗೊಳ್ಳಬೇಕು. ಜನರ ಆತಂಕ ದೂರ ಮಾಡಬೇಕೆಂದು ಸಚಿವರು ತಿಳಿಸಿದರು.

ಪ್ರಾಣಿಗಳ ಚಲನ ವಲನ ಮೇಲೆ ನಿಗಾ ಇಡಲು ಜಿಲ್ಲೆಯ ಪ್ರತಿ ವನ್ಯಜೀವಿ ವಿಭಾಗಕ್ಕೆ ಪ್ರತ್ಯೇಕ ಅತ್ಯಾಧುನಿಕ ಥರ್ಮಲ್ ಡ್ರೋನ್ ಗಳು ಅವಶ್ಯಕತೆಯಿದೆ. ಜಿಲ್ಲೆಗೆ ಪ್ರತ್ಯೇಕ ಚಿರತೆ ಟಾಸ್ಕ್ ಫೋರ್ಸ್ ಸಮಿತಿ ರಚನೆಯಾಗಬೇಕಿದೆ. ಇಂತಹ ಕ್ರಮಗಳಿಂದ ಪರಿಣಾಮಕಾರಿಯಾಗಿ ನಿಗಾ ವಹಿಸಲು ಸಾಧ್ಯವಾಗುತ್ತದೆ ಎಂದು ಅರಣ್ಯ ಅಧಿಕಾರಿಗಳು ಸಭೆಯಲ್ಲಿ ಗಮನಕ್ಕೆ ತಂದರು.

ತಕ್ಷಣವೇ ಪ್ರತಿಕ್ರಿಯಿಸಿದ ಜಿಲ್ಲಾ ಉಸ್ತುವಾರಿ ಸಚಿವರು ಥರ್ಮಲ್ ಡ್ರೋನ್ ಖರೀದಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜೊತೆಗೆ ಪ್ರತ್ಯೇಕ ಚಿರತೆ ಟಾಸ್ಕ್ ಫೋರ್ಸ್ ಸಮಿತಿ ರಚನೆಗೆ ಕೂಡಲೇ ಪ್ರಸ್ತಾವನೆ ಸಲ್ಲಿಸಲು ನಿರ್ದೇಶನ ನೀಡಿದರು.



ಕಾಡುಪ್ರಾಣಿಗಳಿಂದ ಆಗಿರುವ ಬೆಳೆಹಾನಿ ಹಾಗೂ ಇನ್ನಿತರ ನಷ್ಟಗಳಿಗೆ ಇದುವರೆಗೆ ನೀಡಲಾಗಿರುವ ಪರಿಹಾರದ ಬಗ್ಗೆ ಮಾಹಿತಿ ಪಡೆದ ಸಚಿವರು ಕಾಡಂಚಿನ ಗ್ರಾಮಗಳ ಜನರಿಗೆ ಒದಗಿಸಬೇಕಿರುವ ಸೌಲಭ್ಯಗಳಿಗೆ ವಿಳಂಬ ಮಾಡಬಾರದು. ಅರಣ್ಯಕ್ಕೆ ಹೊಂದಿಕೊಂಡಿರುವ ಗ್ರಾಮಗಳಿಗೆ ಅರಣ್ಯ ಅಧಿಕಾರಿಗಳು ಹೆಚ್ಚು ಭೇಟಿ ನೀಡಿ ಅವರ ಸಮಸ್ಯೆಗಳನ್ನು ಆಲಿಸಬೇಕು. ಜನರಿಗೆ ಧೈರ್ಯ ತುಂಬಬೇಕು. ಜಾಗೃತಿ ಮೂಡಿಸಬೇಕು. ಪ್ರಾಣಿಗಳು ಜನವಸತಿ, ಜಮೀನುಗಳಿಗೆ ಬರದಂತೆ ನೋಡಿಕೊಳ್ಳಲು ಕಣ್ಗಾವಲು ಇರಬೇಕು ಎಂದು ಸಚಿವರು ತಿಳಿಸಿದರು.

ಕುಡಿಯುವ ನೀರಿಗೆ ಎಲ್ಲಿಯೂ ಕೊರತೆಯಾಗಬಾರದು. ಅರಣ್ಯ ಪ್ರದೇಶಗಳಲ್ಲಿ ಇರುವ ಜನರಿಗೆ ಮೂಲ ಸೌಕರ್ಯಗಳಿಗೆ ಯಾವುದೇ ಅಡ್ಡಿ ಮಾಡಬಾರದು. ನೀರು, ವಿದ್ಯುತ್ ನಂತಹ ಅಗತ್ಯ ಅವಶ? ಯಕತೆಗಳನ್ನು ಒದಗಿಸಬೇಕು ಎಂದು ಹೇಳಿದರು.

ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ ಕಾಡಿಗೆ ಸಮೀಪದ ಗ್ರಾಮೀಣ ಪ್ರದೇಶಗಳಲ್ಲಿ ಕಾಡುಪ್ರಾಣಿಗಳ ಹಾವಳಿ ಬಗ್ಗೆ ಇತ್ತೀಚೆಗೆ ಹೆಚ್ಚು ವರದಿಯಾಗುತ್ತಿದೆ. ಯಾವುದೇ ಭಾಗದಲ್ಲಿ ಸಮಸ್ಯೆ ಬಂದರೆ ಕೂಡಲೇ ಅಧಿಕಾರಿಗಳು ಧಾವಿಸಬೇಕು. ವಿದ್ಯುತ್, ಕುಡಿಯುವ ನೀರು ಕಾಮಗಾರಿಗೆ ವಿಳಂಬ ಧೋರಣೆ ಅನುಸರಿಸಬಾರದು ಎಂದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಮಾತನಾಡಿ ಬಿಳಿಗಿರಿರಂಗನಬೆಟ್ಟ ವ್ಯಾಪ್ತಿಯಲ್ಲಿ ಹೆಚ್ಚು ಮೊತ್ತದ ಕುಡಿಯುವ ನೀರಿನ ಯೋಜನೆಗೆ ತಡೆ ನೀಡಲಾಗಿದೆ. ಜನರಿಗೆ ನೀರು ಒದಗಿಸುವ ಯೋಜನೆಯ ಅನುದಾನ ಬಳಕೆಯಾಗದಿದ್ದರೆ ಹೇಗೆ? ಆಕ್ಷೇಪಣೆಗಳಿದ್ದರೆ ಆರಂಭದ ಲ್ಲಿಯೇ ಅರಣ್ಯ ಇಲಾಖೆ ತಿಳಿಸಬೇಕಿತ್ತು. ಪ್ರಸ್ತುತ ಯೋಜನೆಗೆ ಇರುವ ತೊಡಕುಗಳನ್ನು ನಿವಾರಿಸಿ ಕುಡಿಯುವ ನೀರಿನ ಯೋಜನೆ ಕಾರ್ಯಗತಗೊಳಿಸಿ ಎಂದರು. ಅರಣ್ಯ, ಕಂದಾಯ ಅಧಿಕಾರಿಗಳು ನಡೆಸಬೇಕಾದ ಜಂಟಿ ಸರ್ವೆ ಇನ್ನಿತರ ವಿಷಯಗಳ ಕುರಿತು ಸಭೆಯಲ್ಲಿ ವಿವರವಾಗಿ ಚರ್ಚಿಸಲಾಯಿತು.ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಹೆಚ್.ವಿ. ಚಂದ್ರು, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಭಾಸ್ಕರ್, ಕಾವೇರಿ ವನ್ಯಜೀವಿ ವಿಭಾಗದ ಉಪ ಸಂರಕ್ಷಣಾಧಿಕಾರಿ ಸುರೇಂದ್ರ, ಇನ್ನಿತರ ವಿಭಾಗದ ಅರಣ್ಯ ಅಧಿಕಾರಿಗಳು 0–ಸಭೆಯಲ್ಲಿ ಉಪಸ್ಥಿತರಿದ್ದರು.

**ಕರ್ನಾಟಕ ಸರ್ಕಾರ**
**ಲೋಕೋಪಯೋಗಿ ಇಲಾಖೆ**
**ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಮಂಡ್ಯ ವಿಭಾಗ, ಮಂಡ್ಯ**
**ನಂ:ಕಾಇಂ:ಲೋ.ಇ:ಮಂವಿ: ಸ.ಇಂ–1/2/3: ಟೆಂಡರ್ ತಿದ್ದುಪಡಿ ಪ್ರಕಟಣೆ: 2025–2026 ದಿನಾಂಕ:23–12–2025.**

**ಟೆಂಡರ್ ತಿದ್ದುಪಡಿ ಪ್ರಕಟಣೆ**

ವಿಷಯ :– ಟೆಂಡರ್ ತಿದ್ದುಪಡಿ ಪ್ರಕಟಣೆ.
ಉಲ್ಲೇಖ:– ಈ ಕಛೇರಿ ಟೆಂಡರ್ ಪ್ರಕಟಣೆ ಸಂಖ್ಯೆ: 11/2025–2026 ದಿನಾಂಕ: 09.12.2025 ಕ್ಕೆ ತಿದ್ದುಪಡಿ ಪ್ರಕಟಣೆ.
ಉಲ್ಲೇಖದನ್ವಯ ಲೋಕೋಪಯೋಗಿ ಇಲಾಖೆ ಮಂಡ್ಯ ವಿಭಾಗ ವ್ಯಾಪ್ತಿಯ ವಿವಿಧ ಕಾಮಗಾರಿಗಳನ್ನು ಇ–ಪ್ರೆಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲು ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಪ್ರಕಟಣೆ ಕ್ರ. ಸಂ.2 ಮತ್ತು 36 ರ ಕಾಮಗಾರಿಗಳನ್ನು ಈಗಾಗಲೇ ಕೈಗೊಳ್ಳಲಾಗಿದ್ದು, ಕಣ್ ತಪ್ಪಿನಿಂದ ಸದರಿ ಪ್ರಕಟಣೆಯಲ್ಲಿ ಸೇರ್ಪಡೆಗೊಂಡಿರುತ್ತದೆ. ಆದಕಾರಣ ಸದರಿ ಎರಡು ಕಾಮಗಾರಿಗಳನ್ನು ಕೈಬಿಡಲಾಗಿದೆ.
ಮುಂದುವರೆದು ಕ್ರಮ ಸಂಖ್ಯೆ: 39 ರ ಕಾಮಗಾರಿಯು ಮುದ್ರಣ ದೊಷದಿಂದಾತಿ ತಪ್ಪಾಗಿ ಮುದ್ರಿತಗೊಂಡಿದ್ದು, ಸದರಿ ಕಾಮಗಾರಿಯ ಬದಲು ವೃತ್ತ ಕಛೇರಿಯಿಂದ ಅನುಮೋದನೆಗೊಂಡಿರುವ "ಮಂಡ್ಯ ಲೋಕಾಯುಕ್ತ ಪೋಲೀಸ್ ಅಧೀಕ್ಷಕರ ಕಛೇರಿಯ ದುರಸ್ಥಿ ಕಾಮಗಾರಿ" ಯನ್ನಾಗಿ ಓದಿಕೊಳ್ಳತಕ್ಕದ್ದು.
ಉಳಿದಂತೆ ಯಾವುದೇ ಬದಲಾವಣೆಗಳು ಇರುವುದಿಲ್ಲ. ಇನ್ನು ಯಾವುದೇ ಬದಲಾವಣೆಗಳಿದ್ದಲ್ಲಿ ಮುಂದೆ ಇ–ಪ್ರೊಕ್ಯೂರ್‌ಮೆಂಟ್ ಮುಖಾಂತರ ಪ್ರಚುರಪಡಿಸಲಾಗುವುದು.
**ಸಹಿ/–ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಮಂಡ್ಯ**

**ಪುರಸಭೆ ಕಾರ್ಯಾಲಯ, ಹೆಚ್.ಡಿ.ಕೋಟೆ, ಮೈಸೂರು ಜಿಲ್ಲೆ**
**E-Mail ID: itstaff_ulb_hdkote@yahoo.com**
**Phone(O)/Fax: 08228-255327**
**ನಂ:ಪು.ಕಾ.ಹೆ.ಕೋ/ಆರೋಗ್ಯ ಶಾಖೆ/ಸಿ.ಆರ್ 07/2025–26 ದಿ: 22.12.2025**

**ಟೆಂಡರ್ ಪ್ರಕಟಣೆ**

ಹೆಚ್.ಡಿ.ಕೋಟೆ ಪುರಸಭಾ ಅನುದಾನದಡಿ ನಿಯಮಗಳ ಅನ್ವಯ, 15ನೇ ಹಣಕಾಸು, ಎಸ್.ಎಫ್.ಸಿ 2025–26ನೇ ಸಾಲು ಹಾಗೂ ಪುರಸಭಾ ನಿಧಿ ಈ ಕೆಳಕಂಡ ಕಾಮಗಾರಿಯನ್ನು ನಿರ್ವಹಿಸಲು ಅರ್ಹ ಸಂಸ್ಥೆಗಳಿಂದ ಕೆ.ಡ್ಬ್ಲ್ಯೂ.ಯು–1 ನಿಯಮಗಳನ್ವಯ ಮತ್ತು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು https://kppp.karnataka.gov.in ಪೋರ್ಟಲ್ ಮುಖಾಂತರ ಈ ಕೆಳಕಂಡ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಸಂಸ್ಥೆಯವರು/ಗುತ್ತಿಗೆದಾರರು https://kppp.karnataka.gov.in ನಿಂದ ಟೆಂಡರ್ ಷರತ್ತು ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. **1)** ಭರ್ತಿ ಮಾಡಿದ ಟೆಂಡರ್‌ನ್ನು ಸಲ್ಲಿಸುವ ಕಡೆಯ ದಿ: 05.01.2026 ಸಂಜೆ 5.30 ಗಂಟೆಯವರೆಗೆ. **2)** ಟೆಂಡರ್ ತೆರೆಯುವ ದಿ: 07.01.2026 ಬೆಳಿಗ್ಗೆ 11.00 ಗಂಟೆಗೆ ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.

| ಕ್ರ. ಸಂ | ಕಾಮಗಾರಿಯ ಇಂಡೆಂಟ್ ಸಂಖ್ಯೆ | ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ) | ಇ.ಎಂ.ಡಿ. ಮೊತ್ತ (ರೂ. ಗಳಲ್ಲಿ) |
|---|---|---|---|
| 1. | DMA/2025-26/SE6157/CALL-2 | 2.04 | 5100.00 |
| 2. | DMA/2025-26/SE6936 | 5.11 | 10200.00 |
| 3. | DMA/2025-26/IND5802 | 32.85 | 67500.00 |

**ಸೂಚನೆ:** ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಮತ್ತು ಇತರೆ ಬದಲಾವಣೆಗಳಿದ್ದಲ್ಲಿ ಹಾಗೂ ಹೆಚ್ಚಿನ ವಿವರಗಳಿಗೆ ಗುತ್ತಿಗೆದಾರರು https://kppp.karnataka.gov.in/ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.
**ಸಹಿ/– ಮುಖ್ಯಾಧಿಕಾರಿ, ಪುರಸಭೆ, ಹೆಚ್.ಡಿಕೋಟೆ**
DIPR/DDMYS/1418/KSMCA/807/2025-26

# ರೈತರ ಹಿತ ಕಾಪಾಡುವಲ್ಲಿ ಕಾಳಜಿಯಿದೆ

## ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಹೇಳಿಕೆ | ಜಿಲ್ಲಾಮಟ್ಟದ ಸಿರಿಧಾನ್ಯ ಹಬ್ಬ

ಚಾಮರಾಜನಗರ: ಅನ್ನದಾತರಾಗಿರುವ ರೈತರ ಬಗ್ಗೆ ಆತ್ಮೀಯತೆ ಕಾಳಜಿಯಿದ್ದು ಅವರ ಹಿತ ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಪ್ರಾಮಾಣಿಕ ಕೆಲಸವನ್ನು ಮಾಡುತ್ತಿದೆ ಎಂದು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ಕೃಷಿ ವಿಜ್ಞಾನ ಕೇಂದ್ರ, ಕೃಷಿ ಸಂಬಂಧಿತ ಇಲಾಖೆಗಳು ಹಾಗೂ ಜಿಲ್ಲಾ ಕೃಷಿಕ ಸಮಾಜ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ರೈತರ ದಿನಾಚರಣೆ ಮತ್ತು ಜಿಲ್ಲಾಮಟ್ಟದ ಸಿರಿಧಾನ್ಯ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಡೀ ದೇಶಕ್ಕೆ ಅನ್ನದಾತರಾಗಿರುವ ರೈತರೊಂದಿಗೆ ಜೊತೆಯಲ್ಲಿ ನಿರಂತರವಾಗಿ ಇದ್ದೇವೆ. ರೈತರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಬದ್ದವಾಗಿದೆ. ಮುಖ್ಯಮಂತ್ರಿಯವರು ಸಹ ರೈತ ಕುಟುಂಬದಿಂದ ಬಂದವರೇ ಆಗಿದ್ದು, ರೈತರ ಸಮಸ್ಯೆಗಳ ಬಗ್ಗೆ ಚೆನ್ನಾಗಿ ಅರಿವಿದೆ. ರೈತಪರ ಯೋಜನೆ ಜಾರಿಗೆ ಒತ್ತು ನೀಡಲಾಗಿದೆ. ರೈತರ ಹಿತ ಕಾಪಾಡುವಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದ್ದೇವೆ ಎಂದರು.

ಸಿರಿಧಾನ್ಯ ಇಂದು ಬದುಕಿಗೆ ಬಹುಮುಖ್ಯವಾಗಿದೆ. ಆರೋಗ್ಯ ಕಾಳಜಿಯಿಂದ ಸಿರಿಧಾನ್ಯಗಳ ಬಗ್ಗೆ ಒಲವು ಹೆಚ್ಚಾಗಿದ್ದು, ಬೇಡಿಕೆಯೂ ಸಹ ಇದೆ. ಸಿರಿಧಾನ್ಯ ಬೆಳೆಯಲು ಬಳಸಲು ಪ್ರೋತ್ಸಾಹ ನೀಡಲಾಗುತ್ತಿದೆ. ರೈತ ಸಮುದಾಯದ ಕಾರ್ಯಕ್ರಮಗಳಿಗೆ ವಿಶೇಷ ಗಮನ ಕೊಡಲಾಗುತ್ತಿದೆ. ರೈತ ದಿನಾಚರಣೆ, ಸಿರಿಧಾನ್ಯ ಹಬ್ಬದಲ್ಲಿ ಪಾಲ್ಗೊಂಡಿರುವುದು ನನಗೆ ಸಂತಸ ತಂದಿದೆ ಎಂದು ತಿಳಿಸಿದರು.



ಅಧ್ಯಕ್ಷತೆ ವಹಿಸಿ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕ . ಸಿ. ಪುಟ್ಟರಂಗಶೆಟ್ಟಿ ಮಾತನಾಡಿ ಈ ಹಿಂದೆ ಮಳೆಯಾಶ್ರಿತ ಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಹೆಚ್ಚು ಬೆಳೆಯಲಾಗುತ್ತಿತ್ತು. ಕ್ರಮೇಣ ನೀರಾವರಿ ಸೌಲಭ್ಯಗಳು ಹೆಚ್ಚಾದಾಗ ಇನ್ನಿತರ ಬೆಳೆಗಳನ್ನು ಬೆಳೆಯಲಾಗುತ್ತಿದೆ. ತೋಟಗಾರಿಕೆ ಬೆಳೆಗೂ ಹೆಚ್ಚು ಒತ್ತು ನೀಡಲಾಗಿದೆ. ಸರ್ಕಾರ ಕೃಷಿ ಜೊತೆಗೆ ಹೈನುಗಾರಿಕೆ, ಮೀನುಗರಿಕೆಯಂತಹ ಕಸುಬುಗಳಿಗೂ ಉತ್ತೇಜನ ನೀಡುತ್ತಿದೆ ಎಂದರು.

ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ ರಾಷ್ಟ್ರದ ಪ್ರಧಾನಿಯಾಗಿದ್ದ ಚೌಧರಿ ಚರಣ್ ಸಿಂಗ್ ಅವರು ಕೃಷಿ ಕಾರ್ಯಕ್ರಮಗಳನ್ನು ಜಾರಿಗೆ ತಂದು ರೈತರಿಗೆ ಅನುಕೂಲ ಕಲ್ಪಿಸಿಕೊಟ್ಟರು. ಇವರ ಜನ್ಮದಿನವನ್ನು ರೈತರ ದಿನವನ್ನಾಗಿ ಆಚರಿಸಲಾಗುತ್ತಿದೆ. ರೈತ ಚಳುವಳಿಯ ಹೋರಾಟಗಾರರಾದ ರೈತ ಮುಖಂಡರಾದ ಪ್ರೊ. ನಂಜುಂಡಸ್ವಾಮಿ ಅವರು ರೈತರ ಪರವಾಗಿ ದಿಟ್ಟ ಹೋರಾಟ ನಡೆಸಿ ರೈತರ ಧ್ವನಿಯಾಗಿದ್ದರು. ಇವರೆಲ್ಲರನ್ನು ಇಂದು ಸ್ಮರಿಸುವ ಸುದಿನವಾಗಿದೆ ಎಂದರು.

ರೈತ ಮುಖಂಡ ಹೊನ್ನೂರ್ ಪ್ರಕಾಶ್ ಮಾತನಾಡಿ ನೈಸರ್ಗಿಕ ಸಾವಯವ ಕೃಷಿಗೆ ಸಬ್ಸಿಡಿ ನೀಡುವ ಮೂಲಕ ನೆಲ, ಜಲ ಉಳಿಸಬೇಕಿದೆ. ಇತರೆ ಬೆಳೆಗಳ ನಡುವೆ ಸಿರಿಧಾನ್ಯವನ್ನು ಬೆಳೆಯಬೇಕು. ರೈತರಿ ತಮಗೆ ಬೇಕಾದ ಎಲ್ಲಾ ಬಗೆಯ ಬೆಳೆಗಳನ್ನು ಬೆಳೆದುಕೊಳ್ಳಬೇಕು. ಮೌಲ್ಯವರ್ಧನೆಗೂ ಒತ್ತು ನೀಡಿದಾಗ ಹೆಚ್ಚು ಲಾಭ ಪಡೆಯಲು ಅನುಕೂಲವಾಗಲಿದೆ ಎಂದರು.

ಮತ್ತೋರ್ವ ಮುಖಂಡ ಅಣಗಳ್ಳಿ ಬಸವರಾಜು ಮಾತನಾಡಿ ರೈತರಿಗೆ ಹೆಚ್ಚು ಸೌಲಭ್ಯಗಳು ತಲುಪಬೇಕು. ರೈತರ ಸಂಕಷ್ಟಗಳಿಗೆ ಸ್ಪಂದಿಸಬೇಕು. ಇತ್ತೀಚೆಗೆ ಮಾನವ ಪ್ರಾಣಿ ಸಂಘರ್ಷ ಹೆಚ್ಚಾಗುತ್ತಿದ್ದು, ವನ್ಯ ಜೀವಿಗಳ ಉಪಟಳ ತಡೆಯಬೇಕು ಎಂದರು. ಇದೇ ವೇಳೆ ಹಾರ್ವೆಸ್ಟ್ ಹಬ್ ಯೋಜನೆಯಡಿ ಸಹಾಯಧನ ಪಡೆದ ಫಲಾನುಭವಿಗಳಿಗೆ ಚೆಕ್ ಹಾಗೂ ಅನುಮೋದನ ಪತ್ರ ವಿತರಿಸಲಾಯಿತು. ಆತ್ಮ ಯೋಜನೆಯಡಿ ಸಮಗ್ರ ಕೃಷಿ ಪದ್ದತಿ ಅಳವಡಿಸಿಕೊಂಡ 10 ಮಂದಿ ರೈತರಿಗೆ ಶ್ರೇಷ್ಠ ಕೃಷಿಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇತ್ತೀಚೆಗೆ ಕೃಷಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸಿರಿಧಾನ್ಯ ಹಾಗೂ ಮರೆತುಹೋದ ಖಾದ್ಯಗಳ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಹೆಚ್.ವಿ. ಚಂದ್ರು, ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ, ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಇತರರು ಭಾಗವಹಿಸಿದ್ದರು.

ಮೊದಲ ಪುಟದಿಂದ

## ಮೊಬೈಲ್‌ಗೆ ನೇರ ಇಂಟರ್‌ನೆಟ್

**ಹಾರಿಸುವ ಗುರಿಯನ್ನು ಹೊಂದಿದೆ. ಬಾಹ್ಯಾಕಾಶದಿಂದಲೇ 5ಜಿ ಬ್ರಾಡ್‌ಬ್ಯಾಂಡ್ ವೇಗದ ಇಂಟರ್‌ನೆಟ್ ಸೇವೆ ನೀಡಲು ಉದ್ದೇಶಿಸಿದೆ. ಮಸ್ಕ್ ಸ್ಟಾರ್ ಲಿಂಕ್ ಅಥವಾ ಒನ್‌ವೆಬ್ ಸೇರಿದಂತೆ ಹಲವು ಕಂಪನಿಗಳು ಉಪಗ್ರಹ ಆಧಾರಿತ ಇಂಟರ್‌ನೆಟ್ ಸೇವೆಯನ್ನು ನೀಡುತ್ತಿವೆ. ಆದರೆ ಇಲ್ಲಿ ಫೋನಿಗೆ ನೇರವಾಗಿ ಉಪಗ್ರಹದ ಸಂಪರ್ಕ ಇಲ್ಲ. ಮನೆಯಲ್ಲಿರುವ ಆಂಟೇನಾಗೆ ಉಪಗ್ರಹದ ಮೂಲಕ ಸಿಗ್ನಲ್ ತಲುಪಿ ನಂತರ ವೈಫೈ ಮೂಲಕ ಫೋನಿಗೆ ಇಂಟರ್‌ನೆಟ್ ಸೌಲಭ್ಯ ಪಡೆಯಬಹುದು. ಆದರೆ ಅಮೆರಿಕದ ಎಎಸ್‌ಟಿ ಸ್ಪೇಸ್ ಮೊಬೈಲ್ ತಾನು ತಯಾರಿಸಿದ ಸ್ಮಾರ್ಟ್ಫೋನ್‌ಗಳಿಗೆ ನೇರವಾಗಿ ಉಪಗ್ರಹದಿಂದಲೇ ಇಂಟರ್‌ನೆಟ್ ಸೌಲಭ್ಯ ಪಡೆಯುವಂತೆ ಈ ಬ್ಲೂಬರ್ಡ್–6 ಉಪಗ್ರಹವನ್ನು ಅಭಿವೃದ್ಧಿಪಡಿಸಿದೆ.**

## ಗೃಹಲಕ್ಷ್ಮಿ ಹಣ ನೀಡುವವರೆಗೂ ಬಿಜೆಪಿ ಪ್ರತಿಭಟನೆ: ಅಶೋಕ್

ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳು (ತಡೆಗಟ್ಟುವಿಕೆ) ಮಸೂದೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಒಪ್ಪಿಗೆ ನೀಡದಂತೆ ಪಕ್ಷವು ವಿನಂತಿಸಲಿದೆ ಎಂದು ಹೇಳಿದರು.

## 30 ಕೋಟಿ ಮೌಲ್ಯ:

30 ಕೋಟಿ ರೂ. ಎನ್ನಲಾಗಿದೆ. ಸದ್ಯ ಮೂರ್ತಿ ತೂಕವನ್ನು ಅಳೆಯಲಾಗುತ್ತಿದೆ. ಸಂಪೂರ್ಣ ವಿವರಗಳನ್ನು ಶೀಘ್ರದಲ್ಲೇ ಹಂಚಿಕೊಳ್ಳಲಾಗುತ್ತದೆ ಎನ್ನಲಾಗಿದೆ.

ಆದರೆ ದಾನ ನೀಡಿದವರ ಮಾಹಿತಿ ಇನ್ನೂ ಬಹಿರಂಗಪಡಿಸಿಲ್ಲ. ಕರ್ನಾಟಕ ಮೂಲದ ಅನಾಮಿಕ ಭಕ್ತರೊಬ್ಬರು ನೀಡಿದ್ದಾರೆ ಎಂದು ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಸದಸ್ಯ ಡಾ.ಅನಿಲ್ ಮಿಶ್ರಾ ತಿಳಿಸಿದ್ದಾರೆ.

## ಇಸ್ರೋದಿಂದ ಅಮೆರಿಕಾ ಉಪಗ್ರಹ ಕಕ್ಷೆಗೆ

ಇಸ್ರೋ ಅಧ್ಯಕ್ಷ ಡಾ.ವಿ.ನಾರಾಯಣನ್ ತಿಳಿಸಿದ್ದಾರೆ.

ಭಾರತದ ನೆಲದಿಂದ ದೇಶಿಯ ರಾಕೆಟ್ ಮೂಲಕ ಉಡಾವಣೆ ಮಾಡಲಾದ ಅತ್ಯಂತ ಭಾರವಾದ ಉಪಗ್ರಹ ಇದಾಗಿರುವುದು ವಿಶೇಷ. ಇಸ್ರೋದ ವಾಣಿಜ್ಯ ವಿಭಾಗವಾದ ನ್ಯೂಸ್ಪೇಸ್ ಇಂಡಿಯಾ ಲಿಮಿಟೆಡ್ ಮತ್ತು ಅಮೆರಿಕ ಮೂಲದ ಸ್ಪೇಸ್ ಮೊಬೈಲ್ ಮಧ್ಯೆ ನಡೆದ ವಾಣಿಜ್ಯ ಒಪ್ಪಂದದ ಭಾಗವಾಗಿ ಉಪಗ್ರಹವನ್ನು ಉಡಾವಣೆ ಮಾಡಲಾಗಿತ್ತು. 43.5 ಮೀಟರ್ ಎತ್ತರ ಮತ್ತು 640 ಟನ್ ತೂಕವಿರುವ ಐಗಿಒ3 ರಾಕೆಟ್ ಅನ್ನು ಬಾಹುಬಲಿ ಎಂದು ಕರೆಯಲಾಗುತ್ತದೆ.

## 'ಲೋಕಾ ಶಾಕ್'

ಲೆಕ್ಕಪತ್ರಗಳನ್ನು ಲೋಕಾಯುಕ್ತ ಪೊಲೀಸರಿಗೆ ಹಸ್ತಾಂತರಿಸಿ, ತನಿಖೆ ನಡೆಸುವಂತೆ ಕೋರಿದ್ದರು. ಅದರಂತೆ ಲೋಕಾಯುಕ್ತ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆ ಪ್ರಕರಣಕ್ಕೂ, ಸರ್ಫರಾಜ್ ಅವರ ಪ್ರಕರಣಕ್ಕೂ ಸಂಬಂಧವಿದೆಯೇ ಎಂಬುದು ಖಚಿತವಾಗಿಲ್ಲ.

ಸಚಿವ ಜಮೀರ್ ಅಹ್ಮದ್ ಖಾನ್ ಅವರ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಅವರಿಗೆ ಸೇರಿದೆ ಎನ್ನಲಾದ ಸ್ಥಳಗಳ ಮೇಲೆ ಬೆಂಗಳೂರಿನ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಮಡಿಕೇರಿ ತಾಲ್ಲೂಕಿನ ಕಾಡಂಚಿನ ಗ್ರಾಮ ವಣಚಲು ಸಮೀಪ ಇರುವ ತೋಟ ಹಾಗೂ ನಿರ್ಮಾಣ ಹಂತದ ತೋಟದ ಮನೆಯೊಂದರ ಮೇಲೆ ದಾಳಿ ನಡೆಸಿರುವ ಲೋಕಾಯುಕ್ತ ಪೊಲೀಸರು ಪರಿಶೀಲನೆ ನಡೆಸಿದ್ದಾರೆ

## ಶ್ರೀರಾಮ ಮೂರ್ತಿ ದಾನ

ಎರಡನೇ ವಾರ್ಷಿಕೋತ್ಸವದ ಅಂಗವಾಗಿ ಪ್ರತಿಷ್ಠಾ ದ್ವಾದಶಿಗೆ ಸಿದ್ಧತೆಗಳು ಪ್ರಾರಂಭವಾಗಿವೆ. ಸಂತ ತುಳಸಿದಾಸ ದೇವಾಲಯದ ಬಳಿಯ ಅಂಗದ್ ಟೀಲಾದಲ್ಲಿ ಈ ಪ್ರತಿಮೆಯನ್ನು ಸ್ಥಾಪಿಸಲಾಗುತ್ತದೆ ಎನ್ನಲಾಗಿದೆ. ಅದಕ್ಕೂ ಮೊದಲು ಮೂರ್ತಿಯನ್ನು ಅನಾವರಣಗೊಳಿಸಲಾಗುವುದು. ನಂತರ ದೇಶಾದ್ಯಂತ ಸಂತರು ಮತ್ತು ಮಹಾಂತರು ಭಾಗವಹಿಸುವ ಪವಿತ್ರೀಕರಣ ಸಮಾರಂಭ ನಡೆಯಲಿದೆ.

## ನಾಳೆ ಭೋಗಯ್ಯನ ಹುಂಡಿಯಲ್ಲಿ ಆರೋಗ್ಯ ತಪಾಸಣೆ

ಗುಂಡ್ಲುಪೇಟೆ: ತಾಲ್ಲೂಕಿನ ಕೋಟೆಕೆರೆ ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆಎಂ ಮಹದೇವಸ್ವಾಮಿ ಯವರು ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ರವರ ಹುಟ್ಟುಹಬ್ಬದ ಪ್ರಯುಕ್ತ



ಡಿ.26ರಂದು ಭೋಗಯ್ಯನಹುಂಡಿ ಸಂಘದ ಆವರಣದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಿದ್ದಾರೆ.

ಉಚಿತ ಆರೋಗ್ಯ ತಪಾಸಣಾ ಶಿಬಿರ ಮತ್ತು ಉಚಿತ ಕಣ್ಣಿನ ತಪಾಸಣೆ ಹಾಗೂ ಹೃದಯ ಸಂಬಂಧಿ ಕಾಯಿಲೆಗಳಿಗೆ ಸಂಬಂದಿಸಿದಂತೆ ಇಸಿಜಿ ತಪಾಸಣೆ ಮಾಡಲಾಗುವುದು, ನೇತ್ರದೀಪ ಕಣ್ಣಿನ ಅಸ್ಪತ್ರೆ ಮತ್ತು ಸುಯೋಗ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಮೈಸೂರು ಇವರಿಂದ ತಪಾಸಣೆ ನಡೆಸಲಾಗುವುದು. ನಂತರ ಮಹಿಳಾ ಸ್ವಸಹಾಯ ಸಂಘಗಳಿಗೆ ಸಾಲದ ಚೆಕ್ ವಿತರಣೆ ಮತ್ತು ಕೋಟೆಕೆರೆ ಕೃಷಿಪತ್ತಿನ ಸಹಕಾರ ಸಂಘದ ಕ್ಯಾಲೆಂಡರ್ ಬಿಡುಗಡೆಯನ್ನು ಶಾಸಕ ಗಣೇಶ್ ಪ್ರಸಾದ್ ಮಾಡಲಿದ್ದಾರೆ. ಕೋಟೆಕೆರೆ ಗ್ರಾ.ಪಂ ವ್ಯಾಪ್ತಿಯ ಹಾಗೂ ಕೃಷಿಪತ್ತಿನ ಸಹಕಾರ ಸಂಘದ ಷೇರುದಾರರು ಸುತ್ತಮುತ್ತಲಿನ ಗ್ರಾಮಸ್ಥರು ಭಾಗಿಯಾಗಿ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಭಾಗಿಯಾಗುವಂತೆ ಕೋಟೆಕೆರೆ ಪಿಎಸಿಸಿ ಅದ್ಯಕ್ಷ ಪದಾಧಿಕಾರಿಗಳು ಕೋರಿದ್ದಾರೆ.

ಚಾಮುಲ್ ಅಧ್ಯಕ್ಷ ನಂಜುಂಡ ಸ್ವಾಮಿ

# ನಂದಿನಿ ಉತ್ಪನ್ನಗಳ ಮಾರಾಟಕ್ಕೆ ವಿಶೇಷ ಆದ್ಯತೆ ನೀಡಿ

ಗುಂಡ್ಲುಪೇಟೆ ಪಟ್ಟಣದ ತಾಲೂಕು ಹಾಲು ಉತ್ಪಾದಕರ ಉಪ ಕಚೇರಿಯಲ್ಲಿ ಚಾಮರಾಜನಗರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ವತಿಯಿಂದ ಅಧಿಕೃತ ಮಾರಾಟಗಾರರ ಕುಂದು ಕೊರತೆಗಳ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು

ಹಾಲು ಉತ್ಪಾದಕರ ಹಾಗೂ ನಂದಿನಿ ಉತ್ಪನ್ನಗಳ ಮಾರಾಟಗಾರರು ಒಕ್ಕೂಟದ ಎರಡು ಕಣ್ಣುಗಳು ಇದ್ದಂತೆ ಒಕ್ಕೂಟದ ಅಭಿವೃದ್ಧಿಗೆ ಎಲ್ಲರ ಸಹಕಾರ ಮುಖ್ಯ ಎಂದರು ಇದರಿಂದ ಒಕ್ಕೂಟಕ್ಕೆ ಉತ್ತಮ ರೀತಿಯಲ್ಲಿ ಹಾಲು ಪೂರೈಕೆ ಆಗುತ್ತಿದೆ ಹಾಗೆಯೇ ಮಾರಾಟಗಾರರು ನಮ್ಮಲ್ಲಿ ದೊರೆಯುವ ಹಾಲು ಮೊಸರು ಸೇರಿದಂತೆ ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡುವುದರ ಮೂಲಕ ಉತ್ತಮ ಮಾರುಕಟ್ಟೆ ವ್ಯವಸ್ಥೆಗೆ ಶ್ರಮಿಸುತ್ತಿದ್ದಾರೆ ಉತ್ಪಾದಕರು ಹಾಗೂ ಮಾರಾಟಗಾರರ ಹಿತ ಕಾಪಾಡುವುದು ಒಕ್ಕೂಟದ ಆದ್ಯ ಕರ್ತವ್ಯ ಆದ್ದರಿಂದ ಸಮಸ್ಯೆಗಳನ್ನು ಬಗೆಹರಿಸುವುದರ ಜೊತೆಗೆ ಬೇಡಿಕೆ ಈಡೇರಿಸುವುದಕ್ಕೆ ಒಕ್ಕೂಟ ಬದ್ಧವಾಗಿದೆ ಎಂದರು




ಚಾಮುಲ್ ನಿರ್ದೇಶಕ ನಂಜುಂಡ ಪ್ರಸಾದ್ ಮಾತನಾಡಿ ನಂದಿನಿ ಹಾಲು ಉತ್ಪನ್ನಗಳು ಪ್ರಸಿದ್ಧಿ ದೇಶ ವಿದೇಶಗಳಲ್ಲಿ ಪ್ರಸಿದ್ಧಿ ಪಡೆದಿದೆ ಆದ್ದರಿಂದ ಸಂಸ್ಥೆ ಹಾಲಿನ ಮಾರಾಟದಿಂದ ಮುಕ್ತಗೊಂಡು ನಂದಿನಿ ಉತ್ಪನ್ನಗಳ ಮಾರಾಟಕ್ಕೆ ಆದ್ಯತೆ ನೀಡಬೇಕು ಎಂದು ಹೇಳಿದರು

ಮಾರಾಟಗಾರರಿಂದ ಆನ್ಲೈನ್ ಪೇಮೆಂಟ್ ಮತ್ತು ಇನ್ಸೂರೆನ್ಸ್ ಸೇರಿ ಒಕ್ಕೂಟದಿಂದ ದೊರೆಯುವ ಸೌಲಭ್ಯಗಳ ಬಗ್ಗೆ ಒತ್ತಾಯ ಕೇಳಿ ಬಂದ ಹಿನ್ನೆಲೆಯಲ್ಲಿ ಒಕ್ಕೂಟದಿಂದ ಮಾರಾಟಗಾರರಿಗೆ ದೊರೆಯುವ ಸೌಲಭ್ಯಗಳನ್ನು ಹಂತ ಹಂತವಾಗಿ ಸಭೆಯಲ್ಲಿ ತೀರ್ಮಾನಿಸಿ ದೊರಕಿಸುವುದಾಗಿ ತಿಳಿಸಿದರು

ನಂತರ ಚಾಮುಲ್ ನಿರ್ದೇಶಕ ಎಂ ಪಿ ಸುನೀಲ್ ಮಾತನಾಡಿ ನಂದಿನಿ ಕ್ಷೀರ ಕೇಂದ್ರ ಮಾರಾಟಗಾರರು ಉತ್ಪನ್ನಗಳ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ ಹೊಂದಾಣಿಕೆ ಮುಖ್ಯ ಎಂದರು

ಒಕ್ಕೂಟದ ವ್ಯವಸ್ಥಾಪಕ ಮತ್ತು ನಿರ್ದೇಶಕ ರಾಜಕುಮಾರ್ ಮಾತಾನಾಡಿ ಬೇಡಿಕೆಗಳ ಕುರಿತು ಒಕ್ಕೂಟದ ಸಭೆಯಲ್ಲಿ ಪ್ರಸ್ತಾಪಿಸಿವುದಾಗಿ ತಿಳಿಸಿದರು

ಈ ಸಂದರ್ಭದಲ್ಲಿ ಮಾರಾಟಗಾರರಿಗೆ ಹೊಸ ವರ್ಷದ ಅಂಗವಾಗಿ ಉಡುಗೊರೆ ನೀಡಲಾಯಿತು

ಮಾರುಕಟ್ಟೆಗಳ ಸ್ಥಾಪಕ ಶಿವಕುಮಾರ್ ಸಹಾಯಕ ವ್ಯವಸ್ಥಾಪಕ ಸೈಯದ್ ಮಾರುಕಟ್ಟೆ ವಿಭಾಗದ ನೂತನ್ ರವಿ ಗೋಪಾಲಪುರ ಮಾರಾಟಗಾರರಾದ ಬೈರೇಶ್ ನಂಜಪ್ಪ ಮಾದೇವಪ್ಪ ವೃಷಭೇಂದ್ರ ಬ್ರಿಜೇಶ್ ಕುಮಾರ್ ಇತರರು ಇದ್ದರು

# ಚಿಕ್ಕತುಪ್ಪೂರು ಬಳಿ ಟ್ರಕ್ ಟರ್ಮಿನಲ್ ನಿರ್ಮಾಣ



ಗುಂಡ್ಲುಪೇಟೆ: ತಾಲೂಕಿನ ಚಿಕ್ಕತುಪ್ಪೂರು ಬಳಿ 13.5ಎಕರೆ ಪ್ರದೇಶದಲ್ಲಿ ಸುಸಜ್ಜಿತವಾದ ಡಿ ದೇವರಾಜ್ ಅರಸು ಟ್ರಕ್ ಟರ್ಮಿನಲ್ ನಿರ್ಮಾಣ ಮಾಡಲಾಗುತ್ತಿದೆ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು

ಚಿಕ್ಕ ತುಪ್ಪೂರು ಗ್ರಾಮದ ಬಳಿ ನಿರ್ಮಾಣವಾಗುತ್ತಿರುವ ಡಿ ದೇವರಾಜ ಅರಸು ಟ್ರಕ್ ಟರ್ಮಿನಲ್ ಅನ್ನು ಪರಿವೀಕ್ಷಣೆ ಮಾಡಿ ಮಾತನಾಡಿದರು ರಾಜ್ಯದಲ್ಲಿ ಸಾವಿರಾರು ಟ್ರಕ್ ಗಳು ಇವೆ, ಟ್ರಕ್ ನಿಲುಗಡೆಗೆ ಸ್ಥಳ ಇರುವುದಿಲ್ಲ, ಬೆಂಗಳೂರು ಭಾಗದಲ್ಲಿ ಬೆಳಿಗ್ಗೆ ಟ್ರಕ್ ಓಡಾಡಲು ಅವಕಾಶವಿಲ್ಲ ಟ್ರಕ್ ಟರ್ಮಿಬಲ್ ಡಿ.ದೇವರಾಜ ಅರಸು ಕಾಲದಲ್ಲಿ ಅರಂಭವಾಯಿತು ಎಂದರು ಅದು ಲಾರಿ ಚಾಲಕರಿಗೆ ಅನುಕೂಲವಾಯಿತು, ಈ ಭಾಗದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಮಾಡಲು ಕಾರಣ ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಎಂದರು.

ಲಾರಿ ನಿಲುಗಡೆಗೆ ಸದ್ಯದ ಸ್ಥಿತಿಯಲ್ಲಿ ಉಚಿತವಾಗಿ ಅವಕಾಶ ಕಲ್ಪಿಸಲಾಗುವುದು, ಕಾಂಕ್ರೆಟ್ ಮತ್ತು ಮೂಲಭೂತ ಸೌಕರ್ಯ ಕಲ್ಪಿಸಿದ ನಂತರ ಅದಕ್ಕೆ ಪೀಸ್ ವ್ಯವಸ್ಥೆ ಮಾಡಲಾಗುತ್ತದೆ, ಮೈಸೂರು, ಹುಬ್ಬಳ್ಳಿ ಧಾರವಾಡ ,ದಾಂಡೇಲಿ, ಕಡೆಯಲ್ಲೂ ಟ್ರಕ್ ಟರ್ಮಿನಲ್ ಇದ್ದು ,ಕೆಲವು ಕಡೆ ಒತ್ತುವರಿಯಾಗಿದೆ ಆಗಾಗಿ ಮೊದಲು ಸುತ್ತುಗೋಡೆ ನಿರ್ಮಿಸಿದಾಗ ಒತ್ತುವರಿಯಾಗಲು ಸಾಧ್ಯವಿಲ್ಲ ಎಂದರು.

ಟ್ರಕ್ ಟರ್ಮಿನಲ್ ಇನ್ನು ಒಂದು ವರ್ಷದಲ್ಲಿ ಉದ್ಘಾಟನೆ ಮಾಡಲಾಗುವುದು ಅಲ್ಲಿಯ ವರೆಗೆ ವಾಹನಗಳು ಓಡಾಟ ನಡೆಸಲು ಆಗ ಮಣ್ಣು ಬಿಗಿಯಾಗುತ್ತದೆ ಈ ಜಾಗ ಗುರುತಿಸಿಕೊಟ್ಟ ಶಾಸಕ ಗಣೇಶ್ ಪ್ರಸಾದ್ ಗೆ ಧನ್ಯವಾದ ತಿಳಿಸಿದರು ಲಾರಿ ಮಾಲೀಕರು, ಲಾರಿ ಡ್ರೈವರ್ ಗಳಿಗಾಗಿ ಡಾರ್ಮೆಂಟರಿ ಮೂಲಭೂತ ಸೌಕರ್ಯ ನೀಡಲಾಗುವುದು ಎಂದರು. ಶಾಸಕ ಗಣೇಶ್ ಪ್ರಸಾದ್ ಮಾತನಾಡಿ ಚಿಕ್ಕತುಪ್ಪೂರು ಬಳಿ ಟ್ರಕ್ ಟರ್ಮಿನಲ್ ವೀಕ್ಷಣೆ ಮಾಡಲು ಮಂತ್ರಿಗಳಾದ ರಾಮಲಿಂಗರೆಡ್ಡಿಯವರು ಬಂದಿದ್ದಾರೆ ಈ ಭಾಗದಲ್ಲಿ ಟ್ರಕ್ ಟರ್ಮಿನಲ್ ಮಾಡಲು ಲಾರಿ ಡ್ರೈವರ್ ಗಳು ರಾತ್ರಿ ಸಮಯದಲ್ಲಿ ಲಾರಿ ಪಾರ್ಕಿಂಗ್, ಉಳಿಯಲು ,ಸ್ನಾನ ಊಟ ಎಲ್ಲಾ ಸೌಲಭ್ಯದ ಕೊರತೆ ಇತ್ತು ಅವರಿಗೆ ಮೂಲ ಭೂತ ಸೌಕರ್ಯ ಸಿಗಲು 13.6 ಎಕರೆ ಜಾಗದಲ್ಲಿ ನಿರ್ಮಾಣವಾಗಿದೆ, ಮುಂದಿನ ದಿನಗಳಲ್ಲಿ ಇದರ ಉಪಯೋಗ ಎಲ್ಲಾ ಲಾರಿ, ಮತ್ತಿತರ ವಾಹನ ಸವಾರರು ಬಳಸಿಕೊಳ್ಳುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ , ದೇವರಾಜ ಅರಸು ಟ್ರಕ್ ಟರ್ಮಿನಲ್ ನಿಗಮ ಮಂಡಳಿ ಅಧ್ಯಕ್ಷರಾದ ಸಯ್ಯದ್ ಅಹಮದ್ , ಬನ್ನಿತಾಳಪುರ, ಗ್ರಾ.ಪಂ ಅಧ್ಯಕ್ಷೆ ಮೀನಾ, ಮಾಜಿ ಕಾಡಾ ಅಧ್ಯಕ್ಷ ನಂಜಪ್ಪ,ಚಾಮುಲ್ ನಿರ್ದೇಶಕ ನಂಜುಂಡ ಪ್ರಸಾದ್,ಟರ್ಮಿನಲ್ ಎಂಡಿ ಶಿವಪ್ರಸಾದ್, ಮಾಜಿ ಜಿ.ಪಂ ಉಪಾಧ್ಯಕ್ಷ ಕೆ ಎಸ್ ಮಹೇಶ್, ಟಿಎಪಿಸಿಎಂಎಸ್ ಅಧ್ಯಕ್ಷ ಮಡಿವಾಳಪ್ಪ, ಹಾಪ್ ಕಾಮ್ಸ್ ಅಧ್ಯಕ್ಷ ನಾಗೇಶ್, ಪ್ರಭುಸ್ವಾಮಿ ಕರಕಲಮಾದಳ್ಳಿ, ಮತ್ತಿತರರಿದ್ದರು.




## ಕೃಷ್ಣ ವಂದನ

ಸ್ನೇಹಾ ಆನಂದ್

### ಹೇ ಕೃಷ್ಣಾ !

ಕರೆದಾಗ ಕೃಷ್ಣ ಬರಬಾರದೇನು,
ಎನ್ನ ದೈವ ನೀನು, ನಿನ್ನ ಭಕ್ತ ನಾನು!

ಮನ್ನಿಸಿ ಸಲಹೆನ್ನ ಭಿನ್ನಪ ಇಡುವೆನು,
ಸಣ್ಣತನದ ಬುದ್ಧಿಯನ್ನು ನಾ ತೊರೆದೆನು!
ಕಣ್ಣಲ್ಲೇ ನೀ ತುಂಬಿ ನಿಂತರೆ ನಾನು,
ಜಗವನ್ನೇ ಮರೆತು ನೋಡುವೆ ನಿನ್ನನ್ನು!

ಭಕ್ತಿಯೆಂಬುದು ಭವ ಸಾಗರದೊಳಗೆ,
ಯುಕ್ತಿಯ ಕೊಡುವುದು ಬದುಕಿನ ಬವಣೆಗೆ!
ಮುಕ್ತಿಯ ನೀಡುವುದು ನೋವು,ಕಷ್ಟಗಳಿಗೆ,
ಕೊಟ್ಟು ಸಲಹುವುದು ಸಂತಸ ಬದುಕಿಗೆ!

ಮನವೆಂಬ ಚಂಚಲ ಶರಧಿಯ ಒಳಗೆ,
ಸಿಲುಕಿಸದಿರು ನೀ ಅದರ ಸುಳಿಯೊಳಗೆ
ಹೇಮಗಿರೀಶನೇ ಬೇಡುವೆ ಕೊನೆಗೆ,
ಭಕ್ತಿಯ ಕೊಡವನು ತುಂಬಿಸು ತನುವಿಗೆ!

# ಸಿದ್ದರಾಮಯ್ಯಗೆ ಅಹಿಂದ ಬೆಂಬಲ

## ಜ.25ರಂದು ಅಹಿಂದ ಮೈಸೂರು ಶೀರ್ಷಿಕೆಯಡಿ ಸಮಾವೇಶ । ಪೂರ್ವಭಾವಿ ಸಭೆ



ಮೈಸೂರು: ಸಿದ್ದರಾಮಯ್ಯ ಅವರನ್ನು ಐದು ವರ್ಷ ಮುಖ್ಯಮಂತ್ರಿಯಾಗಿ ಮುಂದುವರಿಸಬೇಕು ಎಂಬ ಒತ್ತಾಯದೊಂದಿಗೆ ಜ.25ರಂದು ಅಹಿಂದ ಸಮಾವೇಶ ನಡೆಸಲು ತೀರ್ಮಾನ ಕೈಗೊಳ್ಳಲಾಯಿತು.

ಅಹಿಂದ ಮೈಸೂರು ಶೀರ್ಷಿಕೆಯಡಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ನಗರದ ಖಾಸಗಿ ಹೋಟೆಲ್‌ನಲ್ಲಿ ಬುಧವಾರ ಆಯೋಜಿಸಿದ್ದ ಸಭೆಯಲ್ಲಿ ಹಲವು ಸಮುದಾಯಗಳ ಮುಖಂಡರು ಪಾಲ್ಗೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಮಾತನಾಡಿದರು.

ಅಲ್ಪಸಂಖ್ಯಾತ, ಹಿಂದುಳಿದ ಹಾಗೂ ದಲಿತ ಸಮುದಾಯಗಳ ಪರವಾಗಿ ಸಿದ್ದರಾಮಯ್ಯ ಬದ್ಧತೆ ಹೊಂದಿದ್ದಾರೆ. ಅವರನ್ನು ಅಧಿಕಾರದಿಂದ ಕೆಳಗಿಳಿಸಿದರೆ ಶೋಷಿತ ಸಮುದಾಯಗಳಿಗೆ ಅನ್ಯಾಯವಾಗಲಿದೆ. ಈ ವಿಚಾರವನ್ನು ಗಮನದಲ್ಲಿಟ್ಟುಕೊಂಡು ಮೈಸೂರಿನ ವಸ್ತು ಪ್ರದರ್ಶನದ ಪ್ರಾಧಿಕಾರದ ಆವರಣದಲ್ಲಿ ಅಹಿಂದ ಸಮಾವೇಶ ನಡೆಸಲು ಸಭೆ ತೀರ್ಮಾನಿಸಿತು.

ಪ್ರಸ್ತಾವಿಕವಾಗಿ ಮಾತನಾಡಿದ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಧ್ಯಕ್ಷ ಕೆ.ಎಸ್.ಶಿವರಾಮು, ರಾಜ್ಯದ ಜನಸಂಖ್ಯೆಯಲ್ಲಿ ಶೇ.65ರಿಂದ 70ರಷ್ಟು ಅಹಿಂದ ಸಮುದಾಯವಿದೆ. ಇದುವರೆಗೆ 23 ಮಂದಿ ಮುಖ್ಯಮಂತ್ರಿಯಾಗಿದ್ದು, ಅಹಿಂದ ಸಮುದಾಯದವರಿಗೆ ವೀರಪ್ಪ ಮೊಯ್ಲಿ, ಎಸ್. ಬಂಗಾರಪ್ಪ, ಧರ್ಮಸಿಂಗ್ ಅವರಿಗೆ ಅಲ್ಪಾವಧಿಗೆ ಅವಕಾಶ ದೊರಕಿದೆ. ಇದೀಗ ಅಹಿಂದ ಸಮುದಾಯಗಳಿಗೆ ತಂದೆ ಸ್ಥಾನದಲ್ಲಿರುವ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸಲು ಹುನ್ನಾರ ನಡೆಯುತ್ತಿದೆ. ಇದನ್ನು ಖಂಡಿಸಿ ಮೈಸೂರಿನಲ್ಲಿ ಸಮಾವೇಶ ನಡೆಸಲಿದ್ದು, ಸುಮಾರು 15ರಿಂದ 20 ಸಾವಿರ ಜನರನ್ನು ಸೇರಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

ಹಿರಿಯ ಪತ್ರಕರ್ತ ಟಿ.ಗುರುರಾಜ್ ಮಾತನಾಡಿ, ಸಿದ್ದರಾಮಯ್ಯ ಅವರು ಲೋಹಿಯಾವಾದಿ, ಸಮಾಜವಾದಿ ಎಂಬುದೆಲ್ಲವನ್ನೂ ಮೀರಿ ಅವರೊಬ್ಬ ಜನಪರ, ಜೀವಪರವಾದ ನಾಯಕ. ಮರಳಿನ ಮೇಲೆ ಅಕ್ಷರ ಬರೆಯುತ್ತಿದ್ದ ಹುಡುಗನೊಬ್ಬ ವಿಧಾನಸೌಧದ ಶಕ್ತಿಪೀಠದವರೆಗೆ ಸಾಗಿ ಬರುವುದು ಎಂದರೆ ಕಡಿಮೆ ಸಾಧನೆಯಲ್ಲ. ಇದೆಲ್ಲವೂ ಸುಖಾ ಸುಮ್ಮನೆ ಸಾಧ್ಯವಾಗಿಲ್ಲ. ಅಹಿಂದ ಸಮುದಾಯಗಳ ಬಗ್ಗೆ ಅವರಿಗೆ ಇರುವ ಬದ್ಧತೆಯಿಂದಾಗಿ ದೇಶದಲ್ಲೇ ಅಪರೂಪದ ನಾಯಕನಾಗಲು ಸಾಧ್ಯವಾಗಿದೆ ಎಂದು ವಿಶ್ಲೇಷಿಸಿದರು. ಕುರುಬ, ಉಪ್ಪಾರ, ಮಡಿವಾಳ, ಗಾಣಿಗ, ವಿಶ್ವಕರ್ಮ ಮುಂತಾದ ಸಮುದಾಯಗಳ ಮುಖಂಡರು, ಸಿದ್ದರಾಮಯ್ಯ ಹಾಗೂ ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಮಾನಿ ಬಳಗಗಳ ಪದಾಧಿಕಾರಿಗಳು ಮಾತನಾಡಿ ಬೆಂಬಲ ಸೂಚಿಸಿದರು. ಮುಖಂಡರಾದ ಯೋಗೇಶ್ ಉಪ್ಪಾರ, ಬಿ.ಶಿವಣ್ಣ, ಗೋಪಾಲಕೃಷ್ಣ, ಬಸವರಾಜು, ಪ್ರಭು, ಮಂಜು ಶೆಟ್ಟಿ, ನಾಗೇಶ್, ಯೋಗೇಂದ್ರ, ಬಿ.ಮಂಜುನಾಥ್, ಹರೀಶ್, ಮಾರ ಮುಂತಾದವರಿದ್ದರು.

### ಕಾಂಗ್ರೆಸ್ ನಾಯಕರ ವಿರುದ್ಧ ಕಿಡಿ

ಮೈಸೂರು: ಕೋಮುವಾದಿ ಶಕ್ತಿಗಳು, ಕೆಲ ಕಾಂಗ್ರೆಸ್ ನಾಯಕರು ಸಿದ್ದರಾಮಯ್ಯ ಅವರನ್ನು ಕೆಳಗಿಳಿಸಲು ಷಡ್ಯಂತ್ರ ನಡೆಸುತ್ತಿದ್ದಾರೆ ಮುಖಂಡ ಕೆ.ಎಸ್.ಶಿವರಾಮು ಆರೋಪಿಸಿದರು.

ಸಿದ್ದರಾಮಯ್ಯ ಅವರು ಕೋಮು ಶಕ್ತಿಗಳಿಗೆ ತಡೆಗೋಡೆ ರೂಪದಲ್ಲಿ ಇದ್ದಾರೆ. ಹೇಗಾದರೂ ಮಾಡಿ ಗೋಡೆಯನ್ನು ಕೆಡವಿ ಹಾಕಬೇಕು ಎಂದು ಕೋಮುವಾದಿ ಶಕ್ತಿಗಳು ಪ್ರಯತ್ನ ಮಾಡುತ್ತಿವೆ. ಅವರೊಂದಿಗೆ ಸೇರಿ ಕಾಂಗ್ರೆಸ್ ನಾಯಕರೂ ಷಡ್ಯಂತ್ರ ಮಾಡುತ್ತಿದ್ದಾರೆ ಎಂದು ದೂರಿದರು.

ಸಿದ್ದರಾಮಯ್ಯ ಮೊದಲ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಜಾತಿ ಗಣತಿ ವರದಿ ಜಾರಿಗೊಳಿಸಲು ಬಿಡಲಿಲ್ಲ. ಎರಡನೇ ಅವಧಿಯಲ್ಲೂ ಕಾಂಗ್ರೆಸ್ ನಾಯಕರೇ ಇನ್ನಿಲ್ಲದ ಕೊಂಕು ತೆಗೆದು ವರದಿ ಜಾರಿ ಮಾಡದಂತೆ ತಡೆದರು. ಇದೀಗ ಹೊಸದಾಗಿ ಜಾತಿ ಗಣತಿ ಮಾಡಿಸಲಾಗಿದೆ. ಅದು ಜಾರಿಯಾದರೆ ಅಹಿಂದ ಸಮುದಾಯಗಳಿಗೆ ನ್ಯಾಯ ದೊರಕಲಿದ್ದು, ಅಲ್ಲಿವರೆಗೂ ಸಿದ್ದರಾಮಯ್ಯ ಅವರನ್ನೇ ಮುಖ್ಯಮಂತ್ರಿ ಹುದ್ದೆಯಲ್ಲಿ ಮುಂದುವರಿಸಬೇಕು ಎಂದು ಒತ್ತಾಯಿಸಿದರು.

> ನಾವು ಯಾರ ಪರವೂ ಅಲ್ಲ, ವಿರುದ್ಧವೂ ಅಲ್ಲ. ನಾವೆಲ್ಲ ಸಾಮಾಜಿಕವಾಗಿ ದಮನಕ್ಕೆ ಒಳಗಾದ ಮನುಷ್ಯ ಜಾತಿಯವರು. ಅಹಿಂದ ಸಮುದಾಯಗಳು ಅವಮಾನಕ್ಕೆ ಒಳಾಗುತ್ತಿವೆ. ಅವರ ಮೂಲಕ ಸಾಮಾಜಿಕ ನ್ಯಾಯದ ಅಗತ್ಯ ಮಂಡಿಸುವ ಉದ್ದೇಶದಿಂದ ಸಮಾವೇಶ ಮಾಡುವುದು ಬೇಡವೇ ?
>
> ಜನಾರ್ದನ್(ಜನ್ನಿ)
> ಹಿರಿಯ ರಂಗಕರ್ಮಿ

## 24–25 ರಂದು ನೀರು ಸರಬರಾಜಿನಲ್ಲಿ ವ್ಯತ್ಯಯ

ರಾಮನಗರ: ರಾಮನಗರ ನಗರಕ್ಕೆ ನೆಟ್ಕಲ್ ಜಲಾಶಯ ಮೂಲದಿಂದ ಬೆಂಗಳೂರು ಜಲಮಂಡಳಿಯ 5ನೇ ಹಂತದ ಯೋಜನೆಯಡಿ ಕಾವೇರಿಯ ಕಚ್ಚಾ ನೀರು ಪೂರೈಕೆ ಮಾಡಿ, ಟಿ.ಕೆ. ಹಳ್ಳಿಯಲ್ಲಿರುವ ಶುದ್ಧೀಕರಣ ಘಟಕದಿಂದ ಶುದ್ಧೀಕರಿಸಿದ ನೀರು ಸರಬರಾಜು ಮಾಡಲಾಗುತ್ತಿದೆ.

ಆದರೆ ಬಿ.ವಿ.ಹಳ್ಳಿ ಗ್ರಾಮದ ಸಮೀಪ 965 ಮೀ.ಮೀ. ವ್ಯಾಸದ ಏರು ಕೊಳವೆ ಮಾರ್ಗದಲ್ಲಿ ಸೋರಿಕೆಯುಂಟಾಗಿದೆ. ಈ ಸೋರಿಕೆಯನ್ನು ತಡೆಗಟ್ಟಲು ಅತೀ ತುರ್ತಾಗಿ ದುರಸ್ಥಿ ಕಾರ್ಯ ಕೈಗೊಳ್ಳಲು ಡಿ.24 ಹಾಗೂ 25ರಂದು ಎರಡು ದಿನಗಳಂದು ರಾಮನಗರ ನಗರಕ್ಕೆ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಿರುವುದರಿಂದ ನೀರನ್ನು ಮಿತವಾಗಿ ಬಳಸಿ, ಶೇಖರಿಸಿ ಉಪಯೋಗಿಸಬೇಕು ಹಾಗೂ ಗ್ರಾಹಕರು ರಾಮನಗರ ನಗರಸಭೆ ಹಾಗೂ ಜಲಮಂಡಳಿಯೊಂದಿಗೆ ಸಹಕರಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜಕೀಯ ಅವಕಾಶಗಳನ್ನು ಬಳಸಿಕೊಳ್ಳಿ: ಹರೀಶ್ ಗೌಡ

ಮೈಸೂರು: ಮುಂದಿನ ದಿನಗಳಲ್ಲಿ ರಾಜಕೀಯದಲ್ಲಿಯೂ ಮಹಿಳೆಯರಿಗೆ ಹೆಚ್ಚಿನ ಅವಕಾಶಗಳಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಳ್ಳುವ ನಿಟ್ಟಿನಲ್ಲಿ ಸಂಘಟಿತರಾಗಿ ಎಂದು ಶಾಸಕ ಕೆ.ಹರೀಶ್ ಗೌಡ ತಿಳಿಸಿದರು.

ವಿಜಯನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಭವನದಲ್ಲಿ ಬೈರವಿ ಗೌಡತಿಯರ ಬಳಗ ಮೂರನೇ ವರ್ಷದ ವಾರ್ಷಿಕೋತ್ಸವ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದ ಅತಿಥಿಗಳಾಗಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಎಲ್ಲಾ ರಂಗದಲ್ಲಿಯೂ ಮಹಿಳೆಯರಿಗೆ ಹೆಚ್ಚಿನ ಅವಕಾಶಗಳು ದೊರಕುತ್ತಿದ್ದು, ಇದಕ್ಕೆ ರಾಜಕೀಯ ರಂಗವು ಹೊರತಾಗಿಲ್ಲ ಎಂದರು.

ಮೂರೇ ವರ್ಷದಲ್ಲಿ ಇಷ್ಟೊಂದು ಮಹಿಳೆಯರು ಸಂಘಟಿತರಾಗಿರುವುದು ಸ್ವಾಗತಾರ್ಹ. ಈ ಸಂಘಟನೆಯನ್ನು ಮತ್ತಷ್ಟು ಹೆಚ್ಚಿಸಿಕೊಂಡು ಹೆಚ್ಚೆಚ್ಚು ಸಾಮಾಜಿಕವಾಗಿ ಮುಂದೆ ಬರುವ ಮೂಲಕ ಎಲ್ಲಾ ರಂಗದಲ್ಲಿಯೂ ಸಮುದಾಯದ ಮಹಿಳೆಯರು ತೊಡಗಸಿಕೊಳ್ಳಬೇಕು. ಆ ಮೂಲಕ ಸಮುದಾಯದ ಹೆಣ್ಣು ಮಕ್ಕಳು ಯಾರಿಗಿಂತಲೂ ಕಮ್ಮಿ ಇಲ್ಲ ಎಂಬುದನ್ನು ಸಾಬೀತು ಮಾಡಿ ಎಂದು ಹೇಳಿದರು.

ಕಾರ್ಯಕ್ರಮ ಸಾನಿಧ್ಯವಹಿಸಿದ ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಮಾತನಾಡಿ, ಮಾತೆಯರು ಎಂದೆಂದಿಗೂ ಕೆಟ್ಟವರಾಗುವುದಿಲ್ಲ. ಮಕ್ಕಳು ಕೆಟ್ಟವರಾಗುತ್ತಾರೆಯೇ ಹೊರತು ತಾಯಂದಿರು ಎಂದಿಗೂ ಕೆಟ್ಟವರಾಗಲ್ಲ. ಆದರ್ಶ ಪುರುಷನಿಗೆ ಜನ್ಮ ನೀಡಿದ ಎಲ್ಲರೂ ಮಹಾತಾಯಿಯರೇ ಆಗಿದ್ದಾರೆ. ಕುಟುಂಬದ ಜಂಜಾಟವನ್ನು ಮರೆತು ಮಾನಸಿಕವಾಗಿ ದೈರ್ಯ ತಂದುಕೊಳ್ಳುವ ನಿಟ್ಟಿನಲ್ಲಿ ಸಮುದಾಯದ ಮಹಿಳೆಯರೆಲ್ಲರೂ ಹೀಗೆ ಸಂಘಟಿತರಾಗಿ ಸಾಂಸ್ಕೃತಿಕ, ಮನರಂಜನಾತ್ಮಕ ಚಟುವಟಿಕೆಯಲ್ಲಿ ಭಾಗವಹಿಸಿ. ಇದರಿಂದ ಮುಂದಿನ ದಿನಗಳಲ್ಲಿ ಸಮುದಾಯದ ಮಹಿಳೆಯರು ಎಲ್ಲಾ ರಂಗದಲ್ಲಿಯೂ ಬೆಳವಣಿಗೆ ಹೊಂದಲು ಸಹಕಾರಿಯಾಗಲಿದೆ ಎಂದು ತಿಳಿಸಿದರು. ಸಂತಸ ಫೌಂಡೇಶನ್ ಸಂಸ್ಥಾಪಕಿ ಮತ್ತು ವ್ಯವಸ್ಥಾಪಕ ನಿರ್ದೇಶಕಿ ಡಾ.ಸೌಮ್ಯ ದಿನೇಶ್, ಶಿಕ್ಷಣ ತಜ್ಞೆ ಶೋಭಾ ರಾಜಶೇಖರ್, ವರ್ಷ ಅಸೋಸಿಯೇಟ್ಸ್ ಪ್ರೈವೈಟ್ ಲಿಮಿಟೆಡ್‌ನ ನಿರ್ದೇಶಕಿ ರಾಣಿಕುಮಾರ್, ಅಲ್ಟ್ರಾ ಡಿಸ್ಟೆನ್ಸ್ ಸೈಕ್ಲಿಸ್ಟ್ ವೀಣಾ ಅಶೋಕ್, ಆಹಾರ ಮತ್ತು ಕೃಷಿ ವ್ಯವಹಾರ ನಾಯಕತ್ವ ಸಂಸ್ಥೆಯ ಡಾ.ಚೈತ್ರ ಭರತ್ ಅವರಿಗೆ ಬೈರವಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಎಂಎಂಸಿಯ ಡೀನ್ ಮತ್ತು ನಿರ್ದೇಶಕಿ ಡಾ.ದಾಕ್ಷಾಯಣಿ, ಜಾನಪದ ಕಲಾವಿದೆ ಸುಮಪ್ರಶಾಂತ್ ಅತಿಥಿಗಳಾಗಿದ್ದರು. ಬೈರವಿ ಗೌಡತಿಯರ ಬಳಗದ ಅಧ್ಯಕ್ಷೆ ರೇವತಿ ಕೃಷ್ಣಪ್ಪ, ಬಿಜೆಪಿ ಮುಖಂಡರಾದ ಹೇಮಾನಂದೀಶ್, ಸಮಾಜ ಸೇವಕಿಯರಾದ ಸುಶೀಲ ಬಸವರಾಜು, ಕೋಮಲ ವೆಂಕಟೇಶ್ ಇನ್ನಿತರರು ಉಪಸ್ಥಿತರಿದ್ದರು.



## ಸಿಎಂ ಬದಲಾವಣೆ ವಿಚಾರ ಹೈಕಮಾಂಡ್ ಸೇರಿದ್ದು: ಸಚಿವ ಕೆ.ವೆಂಕಟೇಶ್



ಚಾಮರಾಜನಗರ: ಸಿಎಂ ಬದಲಾವಣೆ ವಿಚಾರ ಹೈಕ ಮಾಂಡ್ ಸೇರಿದ್ದು. ಸಿಎಂ ಸಿದ್ದರಾಮಯ್ಯ ಅವರೇ ಇತ್ತೀಚಿಗೆ ಈ ವಿಚಾರವಾಗಿ ಪ್ರತಿಕ್ರಿಯಿಸಿ ಹೈಕಮಾಂಡ್ ತೀರ್ಮಾನವೇ ಅಂತಿಮ. ಹೈಕಮಾಂಡ್ ಹೇಳಿದಾಗ ಹಾಗೆ ಆಗುತ್ತದೆ ಎಂದು ಹೇಳಿದ್ದಾರೆ ಎಂದು ಸಚಿವ ಕೆ ವೆಂಕಟೇಶ್ ತಿಳಿದರು.

ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಂಗಳವಾರ ಮಾತನಾಡಿದ ಅವರು, ಡಿಸಿಎಂ ಡಿಕೆ ಶಿವಕು ಮಾರ್ ದೆಹಲಿಗೆ ಹೋಗುವ ವಿಚಾರದ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ದೆಹಲಿಗೆ ಹೋಗುತ್ತಾರೆ, ಬರುತ್ತಾರೆ ಅದರಲ್ಲೇನು ವಿಶೇಷ ಎಂದರು. ಸಿಎಂ ಸಿದ್ದರಾಮಯ್ಯ ರಾಹುಲ್ ಭೇಟಿ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ರಾಹುಲ್ ಗಾಂಧಿಯವರು ವಿರೋಧ ಪಕ್ಷದ ನಾಯ ಕರು ಹಾಗೂ ಪಕ್ಷದ ಮುಖಂಡರು ಅವರನ್ನು ಭೇಟಿ ಮಾಡಿ ರಾಜಕೀಯ ಚರ್ಚೆ, ರಾಜ್ಯದ ಸಮಸ್ಯೆ ಕುರಿತು ಮಾತನಾಡುತ್ತಾರೆ ಅದರಲ್ಲೇನು ವಿಶೇಷ ಎಂದರು.

### ನಂಜದೇವನಪುರ ಹುಲಿ ಪ್ರತ್ಯಕ್ಷ ವಿಚಾರ

ಕೂಂಬಿಂಗ್ ನಡೆಸಲು ನುರಿತ ವೈದ್ಯರ ಕೊರತೆ ಎದ್ದು ಕಾಣುತ್ತಿದೆ ಎಂಬ ಮಾಧ್ಯದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಪಶು ವೈದ್ಯರ ಸಮಸ್ಯೆ ಎಂದು ಅರಣ್ಯ ಅಧಿಕಾರಿಗಳು ನಮ್ಮ ಗಮನಕ್ಕೆ ತಂದಿಲ್ಲ. ಸಮಸ್ಯೆ ಇದ್ದರೆ ವೈದ್ಯರನ್ನು ಕಳುಹಿಸುತ್ತೇನೆ. ಜಿಲ್ಲೆಯಲ್ಲಿ ಹುಲಿಗಳ ದಾಳಿ ಹಾಗೂ ಪ್ರತ್ಯಕ್ಷ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದುಕೊಳ್ಳುತ್ತೇನೆ. ಕಾಡಂಚಿನ ಗ್ರಾಮಗಳಲ್ಲಿ ಪ್ರತ್ಯಕ್ಷವಾಗಿರುವ ಹುಲಿಗಳನ್ನು ಸೆರೆ ಹಿಡಿಯಲು ಸಲಹೆ ನೀಡುತ್ತೇನೆ. ರೈತರಿಗೆ ರಕ್ಷಣೆ ಕೊಡುವುದು ನಮ್ಮ ಸರ್ಕಾರದ ಜವಾಬ್ದಾರಿಯಾಗಿದೆ. ರೈತರಿಗೆ ರಕ್ಷಣೆ ನೀಡುವುದು ಮೊದಲ ಆದ್ಯತೆಯಾಗಿದೆ. ಹುಲಿ ದಾಳಿ ಕುರಿತು ಜಿಲ್ಲಾಧಿಕಾರಿಯವರಿಂದ ಮಾಹಿತಿ ಪಡೆದುಕೊಂಡಿದ್ದೇನೆ. ಸಭೆ ನಡೆಸಿ ಹುಲಿ ಸೆರೆಗೆ ಸಲಹೆ ಸೂಚನೆ ನೀಡುತ್ತೇನೆ ಎಂದು ನಗರದಲ್ಲಿ ಸಚಿವ ವೆಂಕಟೇಶ್ ಪ್ರತಿಕ್ರಿಯೆ ನೀಡಿದರು.

## ಯುವಕರು ಕೃಷಿಯಲ್ಲಿ ತೊಡಗಿಸಿಕೊಂಡರೆ ಭವಿಷ್ಯ ಉಜ್ವಲವಾಗಲಿದೆ: ಬಿ.ಕೆ. ರವಿಕುಮಾರ್



ಚಾಮರಾಜನಗರ, ಯುವಕರು ಸರ್ಕಾರಿ ಕೆಲಸವನ್ನು ಅವಲಂಬಿಸದೆ ಕೃಷಿಯಲ್ಲಿ ತೊಡಗಿಸಿಕೊಂಡು ಸ್ವಾವಲಂಬಿ ಬದುಕನ್ನು ಕಟ್ಟಿಕೊಂಡು ಸಮಾಜಕ್ಕೆ ಮಾದರಿಯಾಗಿ ಬದುಕಬೇಕೆಂದು ಎಪಿ ಎಂಸಿ ಮಾಜಿ ಅಧ್ಯಕ್ಷ ಬಿ ಕೆ ರವಿಕುಮಾರ್ ಅಭಿಪ್ರಾಯಪಟ್ಟರು.

ವಿಶ್ವ ರೈತ ದಿನಾಚರಣೆ ಅಂಗವಾಗಿ ತಾಲ್ಲೂಕಿನ ವಿ ಸಿ ಹೊಸೂರು ಗ್ರಾಮದ ಯುವ ರೈತ ಯೋಗೀಶ್ ಅವರನ್ನು ಸನ್ಮಾನಿಸಿ ಮಾತನಾಡಿದರು ಇಂದು ಯುವಕರು ಸರ್ಕಾರಿ ಕೆಲಸದ ಬೆನ್ನು ಹತ್ತಿದ್ದು ಎಲ್ಲರಿಗೂ ಉದ್ಯೋಗ ದೊರಕದೆ ಪರಿತಪಿಸುತ್ತಿದ್ದಾರೆ ಆದರೆ ತಮ್ಮ ಪೂರ್ವಿಕರು ಹಾಕಿ ಕೊಟ್ಟ ಮಾರ್ಗದಲ್ಲಿ ಅಂದರೆ ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ದುಡಿದು ಶ್ರಮಪಟ್ಟು ಕೃಷಿ ಮಾಡಿದರೆ ಯಶಸ್ಸು ಗಟ್ಟಿಯಾಗುತ್ತದೆ ಆರ್ಥಿಕ ಪರಿಸ್ಥಿತಿ ಉತ್ತಮವಾಗಿ ಸ್ವಾವಲಂಬಿಯಾಗಿ ನೆಮ್ಮದಿಯ ಬದುಕನ್ನು ನಡೆಸ ಬಹುದು ಎಂದು ಹೇಳಿದರು. ಸರ್ಕಾರ ದೇಶದ ಬೆನ್ನೆಲುಬು ರೈತರ ಕೃಷಿ ಚಟುವಟಿಕೆಗಳಿಗೆ ಅಗತ್ಯ ಪ್ರೋತ್ಸಾಹ ನೀಡಬೇಕು ಅವರ ಆದಾಯ ದ್ವಿಗುಣ ಗೊಂಡು ನಿಗಧಿತ ಆದಾಯ ಬರುವಂತಾದರೆ ರೈತ ದಿನಾಚರಣೆಗೆ ಅರ್ಥ ಬರುತ್ತದೆ ಎಂದರು

ವಿ ಸಿ ಹೊಸೂರಿನ ಯುವ ರೈತ ನಾಗೇಶ್ ವಿದೇಶಿ ನೆಲದಲ್ಲಿ ಇಂಜಿನಿಯರ್ ಆಗಿ ಲಕ್ಷಾಂತರ ಸಂಬಳ ಪಡೆಯುತ್ತಿದ್ದರು. ಆದರೆ ಆ ವೃತ್ತಿಯನ್ನು ತೊರೆದು ಇಂದು ಸ್ವಗ್ರಾಮಕ್ಕೆ ಆಗಮಿಸಿ ಸಾವಯವ ಕೃಷಿ ಅವಲಂಬಿಸಿದ್ದಾರೆ. ಈ ಮೂಲಕ ಆಧುನಿಕ ಪದ್ಧತಿಯಲ್ಲಿ ಕೃಷಿ ಮಾಡಿ ಸ್ವಾವಲಂಬಿ ಬದುಕು ಕಟ್ಟಿಕೊಂಡಿದ್ದಾರ ಇಂಥವರಿಗೆ ರೈತ ದಿನಾಚರಣೆ ಅಂಗವಾಗಿ ಸನ್ಮಾನಿಸಿ ಗೌರವಿಸು ವುದಕ್ಕೆ ಹೆಮ್ಮೆ ಎನಿಸುತ್ತದೆ ಎಂದರು ಸನ್ಮಾನ ಸ್ವೀಕರಿಸಿ ಮಾತನಾಡಿದ ಯುವ ರೈತ ಯೋಗೀಶ್ ಮಾತನಾಡಿ ಕೃಷಿ ಕ್ಷೇತ್ರದಲ್ಲಿ ಇರುವ ನೆಮ್ಮದಿ ಲಕ್ಷ ಲಕ್ಷ ಸಂಬಳ ಬರುವ ಕೆಲಸದಲ್ಲಿ ಸಿಗುವುದಿಲ್ಲ ಯೋಜನಾ ಬದ್ಧವಾಗಿ ವ್ಯವಸಾಯ ಮಾಡಿದರೆ ಕೃಷಿ ಲಾಭದಾಯವಾಗಿರುತ್ತದೆ ಎಂದರು ಈ ಸಂದರ್ಭದಲ್ಲಿ ಮಾಜಿ ಎಪಿಎಂಸಿ ಅಧ್ಯಕ್ಷ ಸೋಮೇಶ್ ಮಾಜಿ ಗ್ರಾಮಪಂಚಾಯಿತಿ ಸದಸ್ಯರಾದ ನಾಗೇಂದ್ರ ಸ್ವಾಮಿ ಮುಖಂಡರಾದ ರವಿ ಹಾಜರಿದ್ದರು.

### ಕ್ಷೇತ್ರ ಶಿಕ್ಷಣಾಧಿಕಾರಿ ಮಹೇಶ್ ಕರೆ

# ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಕರು ಪೋಷಕರು ಮುಂದಾಗಿ



ಹನೂರು: ಮಕ್ಕಳನ್ನು ಕೇವಲ ಅಂಕಗಳಿಸುವ ಕಾರ್ಖಾ ನೆಯನ್ನಾಗಿ ಮಾಡದೇ ಅವರ ಸರ್ವತೋ ಮುಖ ಅಭಿವೃದ್ಧಿಗೆ ಶಿಕ್ಷಕರು ಪೋಷಕರು ಮುಂದಾಗಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಮಹೇಶ್ ತಿಳಿಸಿದರು.

ತಾಲೂಕಿನ ಮಂಗಲ ರಿಪಬ್ಲಿಕ್ ಅಂತರಾಷ್ಟ್ರೀಯ ವಸತಿ ಶಾಲೆ ಮತ್ತು ಕಾಲೇಜಿನ 4ನೇ ವರ್ಷದ ವಾರ್ಷಿಕೋತ್ಸವದ(ಜೀವೋತ್ಸವ) ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ದೇಶವನ್ನು ಮುನ್ನೆಡಿಸುವ ಬಹುತೇಕರು ಲಾಸ್ಟ್ ಬೆಂಚ್ ಸ್ಟೂಡೆಂಟ್ ಗಳು ಆಗಿದ್ದಾರೆ. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿ ಅವರದ್ದೇ ಆದ ಸಾಮರ್ಥ್ಯವಿದೆ ಆಗಾಗಿ ವಿದ್ಯಾರ್ಥಿಗಳನ್ನು ಅಂಕಗಳಿಸಲಷ್ಟೇ ಸೀಮಿತಗೊಳಿಸದೆ ಅವರಲ್ಲಿನ ಸೃಜ ನಶೀಲತೆಯನ್ನು ಹೊರತರುವ ಕೆಲಸವನ್ನು ಶಿಕ್ಷಕರು ಮಾಡಬೇಕು. ಪೋಷಕರು ಮೊಬೈಲ್ ಕೊಟ್ಟು ವಿದ್ಯಾ ರ್ಥಿಗಳನ್ನು ಹಾಳು ಮಾಡುವ ಕೆಲಸ ಮಾಡಬೇಡಿ ಎಂದರು.

ಕಡಿಮೆ ಶುಲ್ಕದಲ್ಲಿ ಗುಣಮಟ್ಟದ ಶಿಕ್ಷಣ: ಇಂದು ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳು ಹಣ ವಸೂಲಿ ಮಾಡುತ್ತೀವೆ ಎಂದು ಆರೋಪಸಲಾಗುತ್ತಿದೆ. ಇಂತಹ ಶಿಕ್ಷಣ ಸಂಸ್ಥೆಗಳ ನಡುವೆ ರಿಪಬ್ಲಿಕ್ ಇಂಟರ್ನ್ಯಾಷನಲ್ ರೆಸಿಡೆನ್ಸಿಯಲ್ ಸ್ಕೂಲ್ ಅಂಡ್ ಕಾಲೇಜ್ ಕಡಿಮೆ ಶುಲ್ಕದಲ್ಲಿ ಗುಣಮಟ್ಟದ ಹಾಗೂ ಮೌಲ್ಯಯುತ ಶಿಕ್ಷಣಕ್ಕೆ ಒತ್ತು ನೀಡುತ್ತಿರುವುದು ಶ್ಲಾಘ ನೀಯ ವಿಚಾರ. ಕಡಿಮೆ ಅವಧಿಯಲ್ಲಿ ಉತ್ತಮ ಹೆಸರನ್ನು ಗಳಿಸುತ್ತಿರುವ ಸಂಸ್ಥೆ ಮತ್ತಷ್ಟು ಎತ್ತರಕ್ಕೆ ಬೆಳೆಯಲಿ ಎಂದು ಆಶಿಸಿದರು. ರಾಜ್ಯ ಉಪ್ಪಾರ ನಿಗಮದ ಮಾಜಿ ಅಧ್ಯಕ್ಷ ಶಿವಕುಮಾರ್ ಮಾತನಾಡಿ, ಆರೋಗ್ಯ, ಶಿಕ್ಷಣ ವ್ಯಾಪಾರೀಕರಣವಾಗಿದೆ. ಈ ದಿನಮಾನಗಳಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿ ಗಳಿಗೂ ಗುಣಮಟ್ಟದ ಶಿಕ್ಷಣ ನೀಡಲು ಸಂಸ್ಥೆಯ ರವೀಂದ್ರ ವಿದೇಶದಲ್ಲಿದ್ದ ಕೆಲಸ ತೊರೆದು ಬಂದಿರು ವುದು ಮೆಚ್ಚುಗೆಯ ಸಂಗತಿ ಎಂದರು.

ಹನೂರು ಬಿಜೆಪಿ ಮಂಡಲದ ಅಧ್ಯಕ್ಷ ವೃಷ ಭೇಂದ್ರಸ್ವಾಮಿ ಮಾತನಾಡಿ, ಜೀವರಾಜ್ ಎಜುಕೇಷ ನಲ್ ಟ್ರಸ್ಟ್ ಅಕ್ಷರದ ಜೊತೆಗೆ ಸಂಸ್ಕಾರ ಕಲಿಸುವ ನಿಟ್ಟಿನಲ್ಲಿ ಮುಂದಾಗಿರುವುದು ಮಾದರಿಯಾಗಿದೆ ಎಂದರು. ಮಂಗಲ ಪುಟ್ಟರಾಜು ಮಾತನಾಡಿ, ಬೆಂಗ ಳೂರು, ಮೈಸೂರು ಇನ್ನಿತರೆ ಮಹಾ ನಗರಗಳಲ್ಲಿ ಸಿಗುವ ಶಿಕ್ಷಣ ಸೌಲಭ್ಯವನ್ನು ನಮ್ಮ ಗ್ರಾಮದಲ್ಲಿಯೇ ಸ್ಥಾಪಿಸಬೇಕೆಂದು ಕಾರ್ಯದರ್ಶಿ ರವೀಂದ್ರ ಅವರು ಕುಟುಂಬಸ್ಥರ ಸಹಕಾರದೊಂದಿಗೆ ಮುನ್ನೇಡೆಸು ತ್ತಿದ್ದಾರೆ ಎಂದರು. ಚಾಮುಲ್ ನಿರ್ದೇಶಕ ಶಾಹುಲ್ ಅಹಮ್ಮದ್ ಮಾತನಾಡಿ, ವಿದ್ಯಾರ್ಥಿಯ ಸರ್ವತೋ ಮುಖ ಅಭಿವೃದ್ಧಿಗೆ ಶಿಕ್ಷಣ ಸಂಸ್ಥೆ ಟೊಂಕ ಕಟ್ಟಿ ನಿಂತಿದೆ. ಈ ಸೌಲಭ್ಯವನ್ನು ಪೋಷಕರು, ವಿದ್ಯಾರ್ಥಿ ಗಳು, ಸದುಪಯೋಗಪಡಿಸಿಕೊಳ್ಳಬೇಕೆಂದರು.

ಗಮನ ಸೆಳೆದ ಸಾಂಸ್ಕೃತಿಕ ಕಾರ್ಯಕ್ರಮ: ವಾರ್ಷಿಕೋತ್ಸವದ ಅಂಗವಾಗಿ ವಿದ್ಯಾರ್ಥಿಗಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರೆದಿದ್ದವರ ಗಮನ ಸೆಳೆಯಿತು. ಹಾಗೆಯೇ ವಿದ್ಯಾರ್ಥಿಗಳ ತಾಯಂದಿರು ತಮ್ಮ ಮಕ್ಕಳೊಡನೆ ತಾಯಿಯ ಪ್ರೀತಿ, ತ್ಯಾಗ, ಕರುಣೆ, ಮಮತೆಯನ್ನು ಸಾರುವ ಭಾವನಾತ್ಮಕ ನೃತ್ಯರೂಪಕ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಈ ಸಂದರ್ಭದಲ್ಲಿ ಚಾಮಲ ಅಧ್ಯಕ್ಷ ನಂಜುಂಡಸ್ವಾಮಿ, ನಿರ್ದೇಶಕ ಮಹದೇವ ಪ್ರಸಾದ್, ಮಾಜಿ ಜಿ.ಪಂ.ಸದಸ್ಯ ಕೊಪ್ಪಳಿ ಮಹದೇವ ನಾಯಕ್, ಮಾಂಬಳ್ಳಿ ನಂಜುಂಡಸ್ವಾಮಿ, ಸಂಸ್ಥೆಯ ಅಧ್ಯಕ್ಷ ಜಯಲಕ್ಷ್ಮಿ ಜೀವರಾಜ್, ಕಾರ್ಯದರ್ಶಿ ರವೀಂದ್ರ, ಆಡಳಿತ ಅಧಿಕಾರಿ ಮಹೇಶ್ ಪಿಎಂ, ಮುಖ್ಯ ಶಿಕ್ಷಕ ಸ್ಟೀಫನ್ ಪುರುಷೋತ್ತಮ್, ಶಿಕ್ಷಕ ವರ್ಗ, ವಿದ್ಯಾರ್ಥಿಗಳು, ಪೋಷಕರು ಇದ್ದರು.

# ಜ.4ಕ್ಕೆ ಗಾಣಿಗ ಸಮುದಾಯದ ಪ್ರತಿಭಾ ಪುರಸ್ಕಾರ




ಮೈಸೂರು:ಮೈಸೂರು ಜಿಲ್ಲಾ ಗಾಣಿಗರ ಸಂಘದ ವತಿಯಿಂದ ಜ. 4 ರಂದು ಬೆಳಗ್ಗೆ 10.30ಕ್ಕೆ ಜೆಎಸ್‌ಎಸ್ ಆಸ್ಪತ್ರೆ ಬಳಿಯ ಡಾ. ಶಿವರಾತ್ರಿ ರಾಜೆಂದ್ರ ಸಭಾಂಗಣದಲ್ಲಿ ಸಮುದಾಯದವರಿಗೆ ಪ್ರತಿಭಾ ಪುರಸ್ಕಾರ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ ಹಾಗೂ ನೂತನ ಸಾಲಿನ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ಉಮೇಶ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸಂಸದ ಯದುವೀರ್ ಉದ್ಘಾಟಿಸುವರು, ರಾಜ್ಯ ಗಾಣಿಗರ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಶ್ವಾಸ್‌ಕುಮಾರ್, ಶಾಸಕರಾದ ಜಿ.ಟಿ. ದೇವೇಗೌಡ, ಕೆ. ಹರೀಶ್‌ಗೌಡ, ಜಿ.ಡಿ. ಹರೀಶ್‌ಗೌಡ, ಡಾ. ಯತೀಂದ್ರ, ಟಿ.ಎಸ್. ಶ್ರೀವತ್ಸ, ಸಾ.ರಾ. ಮಹೇಶ್ ಇನ್ನಿತರರು ವೇದಿಕೆಯಲ್ಲಿರುವರು. ಮಾಜಿ ಶಾಸಕ ನಾಗೇಂದ್ರ, ಅನಂತು, ಅಪ್ಪಣ್ಣ, ಆರ್. ರಘು ಕೌಟಿಲ್ಯ ಮೊದಲಾದವರು ವಿದ್ಯಾರ್ಥಿಗಳಿಗೆ ಹಿತ ನುಡಿ ಆಡುವರು ಎಂದು ಮಾಹಿತಿ ನೀಡಿದರು.

ಮಹದೇವ ಗಾಣಿಗ, ರಮೇಶ್, ಮಂಜುನಾಥ್, ವಿಜಯ್‌ಕುಮಾರ್ ಮೊದಲಾದವರು ಇದ್ದರು.

# 26ರಂದು ವಿದ್ಯುತ್ ವ್ಯತ್ಯಯ

ರಾಮನಗರ: 66/11ಕೆವಿ ಕನಕಪುರ ಟಿ.ಕೆ ಹಳ್ಳಿ ಲೈನ್–2 ಮತ್ತು 66/11 ಕೆವಿ ದೊಡ್ಡಾಲಹಳ್ಳಿ ವಿದ್ಯುತ್ ವಿತರಣಾ ಕೇಂದ್ರ ಹಾಗೂ 66/11ಕೆವಿ ಶಿವನಹಳ್ಳಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ದೊಡ್ಡಾಲಹಳ್ಳಿ ಮತ್ತು ಉಯ್ಯಂಬಳ್ಳಿ ಪಂಚಾಯಿತಿ ಹಾಗೂ ಯಡಮಾರನಹಳ್ಳಿ ಗ್ರಾಮ, ಪಟೇಲ್ ವೀರೇಗೌಡನದೊಡ್ಡಿ ಗ್ರಾಮ, ಮೆ// ಜಿ.ಆರ್.ಟಿ. ಜ್ಯುಯರ?ಸ್ ಐ.ಪಿ.ಪಿ ಹಾಗೂ ಶಿವನಹಳ್ಳಿ ಮೆಗಾಡೈರಿ ವ್ಯಾಪ್ತಿಗೆ ಒಳಪಡುವ ಸುತ್ತಮುತ್ತಲಿನ ಗ್ರಾಮಗಳಿಗೆ ಡಿ.26 ರಂದು ಬೆಳಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆಯ್ಕೆ



ಗುಂಡ್ಲುಪೇಟೆ. ಚಾಮರಾಜನಗರ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಅರುಣ್ ಅವರನ್ನು ನೇಮಕ ಮಾಡಲಾಗಿದೆ


ಅಖಿಲ ಭಾರತ ಯುವ ಕಾಂಗ್ರೆಸ್ ಅಧ್ಯಕ್ಷ ಉದಯ್ ಬಾನು ಚಿಬ್ ನಿರ್ದೇಶನ ಹಾಗೂ ಸಮಿತಿಯ ಪ್ರಧಾನ ಕಾರ್ಯದರ್ಶಿ ಗಳು ಮತ್ತು ಕರ್ನಾಟಕ ಉಸ್ತುವಾರಿ ನಿಗಮ್ ಭಂಡಾರಿ ಅನುಮೋದನೆ ಹಾಗೂ ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಸೂಚನೆ ಮೇರೆಗೆ ಅರುಣ್ ಅವರನ್ನು ಚಾಮರಾಜನಗರ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಜಿಲ್ಲಾ ಪ್ರದಾನ ಕಾರ್ಯದರ್ಶಿ ಯಾಗಿ ನೇಮಕ ಮಾಡಿ ಆದೇಶ ಹೂರಡಿ ಸಲಾಗಿದೆ ಜತಗೆ ಸ್ಥಳೀಯವಾಗಿ ಮತ್ತು ರಾಜ್ಯಾಧ್ಯಂತ ಸಂಘಟನೆ ಬಲಗೂಳಿಸಲು ಶ್ರಮಿಸುವಂತೆ ಸೂಚಿಸಲಾಗಿದೆ. ಚಾಮರಾಜನಗರ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಾಗಿ ನೇಮಕವಾದ ಅರುಣ್ ಮಾತನಾಡಿ ತಮಗೆ ನೀಡಿರುವ ಜವಾಬ್ದಾರಿ ಉತ್ತಮವಾಗಿ ಕೆಲಸ ನಿರ್ವಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಹಿರಿಯ ಮುಖಂಡರ ಮಾರ್ಗದರ್ಶನ ಮತ್ತು ಸ್ಥಳೀಯ ನಾಯಕರ ಸಹಕಾರದೂಂದಿಗೆ ಯುವ ಕಾಂಗ್ರೆಸ್ ಸಂಘಟನೆ ಬಲಗೂಳಿಸಲು ಮುಂದಾಗುವುದಾಗಿ ತಿಳಿಸಿದರು

# ಹುಲಿಗಳ ಸಂಚಾರದ ಬಗ್ಗೆ ಸತತ ನಿಗಾ ಇಡಲು ಖಂಡ್ರೆ ಆದೇಶ

ಚಾಮರಾನಗರ, ತಾಲೂಕಿನ ನಂಜೆದೇವನಪುರದಲ್ಲಿ ಕಾಣಿಸಿಕೊಂಡಿರುವ 5 ಹುಲಿಗಳನ್ನು ಸುರಕ್ಷಿತವಾಗಿ ರಕ್ಷಿಸಿ ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲು ಮೊದಲಿಗೆ ಬೋನುಗಳನ್ನು ಅಳವಡಿಸಲು ಮತ್ತು ಅಗತ್ಯ ಬಿದ್ದರೆ ಅರವಳಿಕೆ ನೀಡಿ ಸೆರೆ ಹಿಡಿಯಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ತುರ್ತು ಸಭೆ ನಡೆಸಿದ ಅವರು, ಹುಲಿಗಳು ಖಾಸಗಿ ಜಮೀನಿನಲ್ಲಿ ಕಾಣಿಸಿಕೊಂಡಿರುವ ಕಾರಣ ಜನರು ಭಯಭೀತರಾಗಿದ್ದು, ಅಮೂಲ್ಯವಾದ ಜೀವಹಾನಿ ಆಗದ ರೀತಿಯಲ್ಲಿ ಮತ್ತು ವನ್ಯಜೀವಿಗಳಿಗೂ ತೊಂದರೆ ಆಗದ ರೀತಿಯಲ್ಲಿ ಕ್ರಮ ವಹಿಸುವಂತೆ ನಿರ್ದೇಶನ ನೀಡಿದರು.

ಹುಲಿಗಳ ಚಲನವಲನದ ಮೇಲೆ ಸತತ ನಿಗಾ ಇಡುವುದು ಅತ್ಯಗತ್ಯವಾಗಿದ್ದು, ಡ್ರೋನ್ ಕ್ಯಾಮರಾಗಳು, ಥರ್ಮಲ್ ಕ್ಯಾಮರಾಗಳನ್ನು ಬಳಸಿ ಹುಲಿಗಳು ಎಲ್ಲಿವೆ ಎಂಬ ಬಗ್ಗೆ ಖಚಿತ ಮಾಹಿತಿ ಪಡೆದು ಗ್ರಾಮಸ್ಥರಿಗೆ ಕೂಡಲೇ ಮಾಹಿತಿ ನೀಡಬೇಕು ಮತ್ತು ಅಲ್ಲಿಗೆ ಅರಣ್ಯ ಇಲಾಖೆಯ ತಂಡಗಳನ್ನು ಕಳುಹಿಸಿ ಯಾವುದೇ ಅನಾಹುತ ಆಗದಂತೆ ಕ್ರಮ ವಹಿಸಬೇಕು ಎಂದರು.

5 ಹುಲಿಗಳ ಕಾರ್ಯಾಚರಣೆ ಸುಲಭದ ಕಾಯಕವಲ್ಲ ಎಂಬುದು ತಮಗೂ ಅರಿವಿದೆ. ಹುಲಿಗಳನ್ನು ಹಿಡಿಯುವಾಗ ಹುಲಿಗಳು ಕಾರ್ಯಾಚರಣೆ ತಂಡದ ಮೇಲೆ ದಾಳಿ ಮಾಡದಂತೆ ಮತ್ತು ಬಡಗಲಪುರದಲ್ಲಿ ಹುಲಿ ರಕ್ಷಣೆ ಕಾರ್ಯಾಚರಣೆ ವೇಳೆ ವ್ಯಕ್ತಿಯ




ಮೇಲೆ ದಾಳಿ ಆದಂತಹ ಪ್ರಕರಣಗಳು ಮರುಕಳಿಸದಂತೆ ಹಿರಿಯ ಅಧಿಕಾರಿಗಳು ಕಟ್ಟೆಚ್ಚರ ವಹಿಸಬೇಕು ಎಂದರು.

**ಹೆಚ್ಚುವರಿ ಆನೆ, ಪಶುವೈದ್ಯರ ನಿಯೋಜನೆಗೂ ಸೂಚನೆ**

5 ಹುಲಿಗಳ ರಕ್ಷಣೆ ಕಾರ್ಯಾಚರಣೆಗೆ ಅಗತ್ಯವಿರುವ ಎಲ್ಲ ಸಲಕರಣೆ, ಹೆಚ್ಚುವರಿ ಪಶುವೈದ್ಯರು, ಶಾರ್ಪ್ ಶೂಟರ್ ಗಳನ್ನು ಸಹ ನಿಯೋಜನೆ ಮಾಡುವಂತೆ ಹಾಗೂ ಹೆಚ್ಚುವರಿಯಾಗಿ ಆನೆಗಳನ್ನು ತಕ್ಷಣವೇ ತರಿಸಿಕೊಳ್ಳುವಂತೆಯೂ ಖಂಡ್ರೆ ಸ್ಪಷ್ಟವಾಗಿ ತಿಳಿಸಿದರು.

**ಜನರ ಜೀವ ಪರಮೋಚ್ಚ:**

ಜನರ ಜೀವದ ಸುರಕ್ಷತೆ ಅತ್ಯಂತ ಪರಮೋಚ್ಚವಾದ್ದು, ಅದೇ ವೇಳೆ ವನ್ಯಜೀವಿಗಳ ರಕ್ಷಣೆಯೂ ಅಷ್ಟೇ ಮುಖ್ಯ ಎಂಬುದನ್ನು ಗಮನದಲ್ಲಿಟ್ಟುಕೊಂಡು ಕಾರ್ಯಾಚರಣೆ ನಡೆಸಬೇಕು, ಸಿಬ್ಬಂದಿಯ ಸುರಕ್ಷತೆಗೆ ಎಲ್ಲ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಜೊತೆಗೆ ಜನರು ಯಾರೂ ಕಾರ್ಯಾಚರಣೆ ಸ್ಥಳಕ್ಕೆ ಬಾರದಂತೆ ಸೆಕ್ಷನ್ 144 ನ್ನು ಕಟ್ಟುನಿಟ್ಟಾಗಿ ಜಾರಿ ಮಾಡಬೇಕು ಎಂದು ಸೂಚಿಸಿದರು.

ಇ–ಗಸ್ತು ಹೆಚ್ಚಿಸಬೇಕು. ಎಲ್ಲ ಅರಣ್ಯ ಗಸ್ತು ಸಿಬ್ಬಂದಿ ಹಾಗೂ ಅಧಿಕಾರಿಗಳ ಮೊಬೈಲ್ ನಲ್ಲಿ ಈ ಆಪ್ ಅಳವಡಿಸಿ, ಗಸ್ತಿನ ಮೇಲೆ ಕೇಂದ್ರ ಕಚೇರಿಯಿಂದ ನಿಗಾ ಇಡಬೇಕು. ಗಸ್ತಿನಲ್ಲಿ ಯಾವುದೇ ಲೋಪ ಆಗದಂತೆ ಪೂರ್ಣ ಪ್ರಮಾಣದಲ್ಲಿ ಎಚ್ಚರಿಕೆ ವಹಿಸಬೇಕು ಹಾಗೂ ಕಮಾಂಡ್ ಕೇಂದ್ರಗಳನ್ನು ವಿಳಂಬವಿಲ್ಲದೆ ಎಲ್ಲೆಡೆ ಕಾರ್ಯಾರಂಭ ಮಾಡಬೇಕ ಸೂಚನೆ ನೀಡಿದರು. ಈಗ ನಾವು ಕೈಗೊಳ್ಳುತ್ತಿರುವುದೆಲ್ಲವೂ ತಾತ್ಕಾಲಿಕ ಕ್ರಮಗಳಾಗಿದ್ದು, ವನ್ಯಜೀವಿಗಳು ಕಾಡಿನಿಂದ ನಾಡಿನತ್ತ ಬಾರದಂತೆ ಶಾಶ್ವತ ಪರಿಹಾರ ಏನು ಎಂಬ ಬಗ್ಗೆ ಅಧಿಕಾರಿಗಳು ತಜ್ಞರೊಂದಿಗೆ ಚರ್ಚಿಸಿ ರೂಪುರೇಶೆ ತಯಾರಿಸಿ ವರದಿ ಸಲ್ಲಿಸಲು ಸೂಚಿಸಿದರು.ಸಭೆಯಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಹಿರಿಯ ಅಧಿಕಾರಿಗಳಾದ ಮನೋರ್ ರಾಜನ್, ಬಿಸ್ವಜಿತ್ ಮಿಶ್ರಾ, ವನ್ಯಜೀವಿ ತಜ್ಞ ಸಂಜಯ್ ಗುಬ್ಬಿ ಮತ್ತಿತರರು ಪಾಲ್ಗೊಂಡಿದ್ದರು.

# ರಾಮೋತ್ಸವ: ಮನೆಗೊಂದು ರಂಗೋಲಿ

## ಸ್ಪರ್ಧೆಯಲ್ಲಿ ಭಾಗವಹಿಸಲು ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಕರೆ

ರಾಮನಗರ: 2026ರ ಜನವರಿ 15 ರಿಂದ 18ರವರೆಗೆ ರಾಮೋತ್ಸವ ಆಯೋಜಿಸಲಾಗಿದೆ. ರಾಮೋತ್ಸವದಲ್ಲಿ ಯಾವುದೇ ಲೋಪವಾಗದಂತೆ ಎಲ್ಲರು, ಶ್ರದ್ಧಾ ಭಕ್ತಿಯಿಂದ ಯಶಸ್ಸಿಗೆ ಶ್ರಮಿಸಬೇಕು ಎಂದು ರಾಮನಗರ ಕ್ಷೇತ್ರದ ಶಾಸಕ ಎಚ್.ಎ.ಇಕ್ಬಾಲ್ ಹುಸೇನ್ ಕರೆ ನೀಡಿದರು.

ರಾಮೋತ್ಸವದ ಅಂಗವಾಗಿ ತಾಲ್ಲೂಕಿನ ಹರೀಸಂದ್ರ ಗ್ರಾಪಂ ವ್ಯಾಪ್ತಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ವನವಾಸದಲ್ಲಿದ್ದ ವೇಳೆ ಶ್ರೀರಾಮರು ಸೀತಾಮಾತೆ ಹಾಗೂ ಲಕ್ಷ್ಮಣರೊಂದಿಗೆ ಇಲ್ಲಿನ ಶ್ರೀ ರಾಮದೇವರ ಬೆಟ್ಟದಲ್ಲಿ ತಂಗಿದ್ದರು ಎಂಬ ಪುರಾಣವಿದೆ. ಇಲ್ಲಿ ಕಾಕಸುರನ ವಧೆ ಸಹ ಇಲ್ಲಿ ಆಯಿತು ಎಂದು ಪುರಾಣ ಹೇಳುತ್ತದೆ. ರಾಮನೂರಿನಲ್ಲಿ ಶ್ರೀ ರಾಮನ ಹೆಸರಿನಲ್ಲಿ ಮೊಟ್ಟ ಮೊದಲ ಬಾರಿಗೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಎಲ್ಲರ ಸಹಕಾರ ಅಗತ್ಯವಿದೆ ಎಂದರು.

ಈ ವೇಳೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಕೆ.ರಾಜು, ತಾಲ್ಲೂಕು ಅಧ್ಯಕ್ಷ ವಿ.ಹೆಚ್.ರಾಜು, ಗ್ರಾ.ಪಂ ಅಧ್ಯಕ್ಷೆ ಜಯ ಲಕ್ಷ್ಮಮ್ಮ, ಉಪಾಧ್ಯಕ್ಷ ವೀರಭದ್ರಸ್ವಾಮಿ, ತಾಪಂ ಮಾಜಿ ಅಧ್ಯಕ್ಷ ಪ್ರಾಣೇಶ್, ಗ್ರಾಪಂ ಮಾಜಿ ಅಧ್ಯಕ್ಷರಾದ ಸಿ. ರಾಮಯ್ಯ, ಆಶಾಮಂಚೇಗೌಡ, ಮುಖಂಡರಾದ ಶೇಖರ್ಮಾರೇಗೌಡ, ರಘು, ರವಿ, ವಕೀಲರವಿ, ಪಾದ್ರಳ್ಳಿಪುಟ್ಟಣ್ಣ, ರಾಮು, ಶೋಭಾ, ಮಹದೇವ, ಲೀಲಾವತಿ, ಸತೀಶ್, ಸಿದ್ದಣ್ಣ, ಶ್ರೀಧರ್, ಚಂದ್ರು, ನಾಗೇಂದ್ರ, ಮತ್ತಿತರರು ಇದ್ದರು.



### ಜ.15ರಂದು ರಾಮತಾರಕ ಯಜ್ಞ

ಜ.15 ರಂದು ಶ್ರೀರಾಮದೇವರ ಬೆಟ್ಟದ ತಪ್ಪಲಿನಲ್ಲಿ 200ಜನ ಪಂಡಿತರಿಂದ ರಾಮತಾರಕ ಯಜ್ಞ ಹಮ್ಮಿಕೊಳ್ಳಲಾಗಿದೆ. ಜ.16ರಂದು ಸಚ್ಚಿದಾನಂದ ಸ್ವಾಮಿ ಅವರ ನೇತೃತ್ವದಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ಯೋಗಾಶನ, ಪಟ್ಟಣ ಪ್ರದೇಶದಲ್ಲಿ ರಂಗೋಲಿ ಸ್ಪರ್ಧೆ, 10 ಸಾವಿರ ಮಕ್ಕಳಿಂದ ಸ್ಥಳದಲ್ಲಿ ಚಿತ್ರ ಬಿಡಿಸುವ ಸ್ಪರ್ಧೆ, ವಾಯ್ಸ್ ಆಫ್ ರಾಮನಗರ, ರಂಗಗೀತೆ, ಆದರ್ಶ ದಂಪತಿ ಸ್ಪರ್ಧೆ ನಂತರ ಪ್ರಮುಖವಾಗಿ ಕ್ಷೇತ್ರದ ಎಲ್ಲ ಗ್ರಾಮ ದೇವರುಗಳ ಉತ್ಸವಗಳು ನಡೆಯಲಿದ್ದು, ಮಡಿಕೇರಿಯ ಗಣೇಶ, ಶ್ರೀರಾಮ, ನಾಡ ದೇವತೆ ಶ್ರೀ ಚಾಮುಂಡೇಶ್ವರಿ ಸ್ಥಬ್ದಚಿತ್ರಗಳು ಗಮನ ಸೆಳೆಯಲಿದ್ದು, ಲೇಸರ್ ಷೋ, ಶ್ರೀರಾಮ ಭಜನೆಗಳು ನೆರವೇರಲಿವೆ ಎಂದು ಹೇಳಿದರು.

### ಜ.17ರಂದು ಮ್ಯಾರಥಾನ್


ಜ.17 ರಂದು 16ವರ್ಷ ಮೇಲ್ಪಟ್ಟ ಎಲ್ಲ ಮಹಿಳೆಯರು, ಪುರುಷರಿಗೆ ಪ್ರತ್ಯೇಕವಾಗಿ ಮ್ಯಾರಥಾನ್ ನಡಿಗೆ, ಕ್ಷೇತ್ರದ 65% ಹೆಚ್ಚು ಅಂಕ ಪಡೆದ ಎಲ್ಲ ವಿಭಾಗದ ಸುಮಾರು 6 ಸಾವಿರ ಮಕ್ಕಳಿಗೆ ಪ್ರತಿಭಾ ಪುರಸ್ಕಾರದ ನಂತರ ಸಂಜೆ ಶ್ರೀನಿವಾಸ ಕಲ್ಯಾಣೋತ್ಸವ ನೆರವೇರಲಿದೆ. ಪ್ರತಿ ಮನೆಗಳಿಗೆ ಒಂದು ತಿರುಪತಿ ಲಡ್ಡು ವಿತರಣೆ ಮಾಡಲಾಗುವುದು.

### ರಂಗೋಲಿ ಸ್ಪರ್ಧೆ

ಕನಕಪುರದಲ್ಲಿ ನಡೆಯುವ ಕನಕೋತ್ಸವದಂತೆ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ವಿಭಿನ್ನವಾದ ಶೀರ್ಷಿಕೆಯಡಿ ಉತ್ಸವಗಳು ನಡೆಯುತ್ತಿವೆ. ವಿವಿಧ ಸ್ಪರ್ಧೆಗಳು ನಡೆಯುತ್ತಿವೆ. ಈಗಾಗಲೇ ಕಬ್ಬಡಿ, ವಾಲಿಬಾಲ್, ಕ್ರಿಕೆಟ್ ಪಂದ್ಯಾವಳಿಗಳು ಹೋಬಳಿ ಮತ್ತು ವಿಧಾನಸಭಾ ಕ್ಷೇತ್ರದ ಮಟ್ಟದಲ್ಲಿ ಯಶಸ್ವಿಯಾಗಿ ನಡೆದಿದ್ದು, ಶುಕ್ರವಾರದಿಂದ ಮನೆಗೊಂದು ರಂಗೋಲಿ ಬಿಡಿಸುವ ಸ್ಪರ್ಧೆ ಪಂಚಾಯಿತಿ ಮಟ್ಟದಲ್ಲಿ ನಡೆಸಲಾಗುವುದು. ಕ್ಷೇತ್ರದಲ್ಲಿ 80 ಸಾವಿರ ಕುಟುಂಬಗಳಿವೆ. ಪ್ರತಿ ಮನೆಗೊಂದು ರಂಗೋಲಿ ಬಿಡಿಸುವಂತೆ ಪ್ರೋತ್ಸಾಹಿಸಲಾಗುತ್ತಿದೆ. ಎಲ್ಲ ಮಹಿಳೆಯರು ಪಕ್ಷಾತೀತವಾಗಿ ಭಕ್ತಿಯಿಂದ ಶ್ರೀರಾಮನ ಹೆಸರಿ ನಲ್ಲಿ ರಂಗೋಲಿ ಬಿಡಿಸಿ, ಆಕರ್ಷಕ ಬಹುಮಾನ, ನೆನಪಿನ ಕಾಣಿಕೆ ಪಡೆದುಕೊಳ್ಳಿ, ನೊಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದ್ದು ತೀರ್ಪುಗಾರರ ತೀರ್ಮಾನವೇ ಅಂತಿಮವಾಗಲಿದೆ ಎಂದು ಮನವಿ ಮಾಡಿದರು.

ಜ,18 ರಂದು ಸಂಗೀತಸಂಜೆ ಕಾರ್ಯಕ್ರಮ ನಡೆಯಲಿದೆ ಎಂದು ರಾಮನಗರ ಕ್ಷೇತ್ರದ ಶಾಸಕ ಎಚ್.ಎ.ಇಕ್ಬಾಲ್ ಹುಸೇನ್ ಅವರು ವಿವರಿಸಿದರು.

# ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ



ಗುಂಡ್ಲುಪೇಟೆ: ನಾಗರೀಕರ ವಾಕ್ ಸ್ವಾತಂತ್ರ್ಯವನ್ನು ಕಸಿದುಕೊಳ್ಳಲು ಕಾಂಗ್ರೆಸ್ ಸರ್ಕಾರವು ಅನುಷ್ಠಾನಕ್ಕೆ ತರುತ್ತಿರುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ವಿಧೇಯಕವು ಸಂವಿಧಾನದಡಿ ನೀಡಲಾದ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಕಿತ್ತುಕೊಳ್ಳುತ್ತಿದೆ, ಇದನ್ನು ಜಾರಿಯಾಗಲು ಬಿಡಬಾರದು ಎಂದು ಆಗ್ರಹಿಸಿ ಗುಂಡ್ಲುಪೇಟೆ ತಾಲ್ಲೂಕು ಕಛೇರಿ ಮುಂಭಾಗದಲ್ಲಿ ಬಿಜೆಪಿ ಗುಂಡ್ಲುಪೇಟೆ ಘಟಕ ವತಿಯಿಂದ ತಹಶೀಲ್ದಾರ್ ರವರಿಗೆ ಮನವಿ ಸಲ್ಲಿಸಲಾಯಿತು. ಈ ಸಂಧರ್ಭದಲ್ಲಿ ಬಿಜೆಪಿ ಅಧ್ಯಕ್ಷರಾದ ಮಹದೇವಪ್ರಸಾದ್ ರವರು, ಪಿಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಬಸವಣ್ಣ , ಮುಖಂಡರಾದ ಮಂಚಹಳ್ಳಿ ಬಾಬು , ಕಬ್ಬಹಳ್ಳಿ ರೇವಣ್ಣ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಮಹೇಂದ್ರ ಗರಗನಹಳ್ಳಿ, ಸುನೀಲ್ ಮೂಡ್ನ್ಲು, ಮುಖಂಡರುಗಳಾದ ಹನುಮಂತ ಶೆಟ್ಟರು, ಕೃಷ್ಣ, ಮಹಮ್ಮದ್ ಹನೀಫ್, ಸದ್ದಾಮ್ ಹುಸೇನ್ ರವರು, ಅನಿಲ್ ಹಸಗೂಲಿ ಮತ್ತಿತರರಿದ್ದರು.

# ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ಬದಲಾಯಿಸಿ

ಚಾಮರಾಜನಗರ, ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ನೀಡಬೇಕು ಎಂದು ಮಂಗಲ ಗ್ರಾಮದ ಹುಚ್ಚಶೆಟ್ಟಿ ಎಂಬುವರು ಇಂದು ನಗರದ ಸೆಸ್ಕ್ ಉಪ ವಿಭಾಗ ಕಚೇರಿಯಲ್ಲಿ ನಡೆದ ಜನ ಸಂಪರ್ಕ ಸಭೆಯಲ್ಲಿ ದೂರು ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಪಾಲಕ ರಾಜು ಎಂಬುವರು ಮಾತನಾಡಿ, ತಮ್ಮ ವಿದ್ಯಾರ್ಥಿನಿಲಯಕ್ಕೆ ಒಂದೇ ಬಾರಿ 4 ಲಕ್ಷ 47 ಸಾವಿರ ರೂಗಳ ಬಿಲ್ ಬಂದಿದ್ದು ಆತಂಕ ಉಂಟಾಗಿದೆ. ಈ ಸಂಬಂಧ ಸೆಸ್ಕ್ ಕಚೇರಿಗೆ ತೆರಳಿ 47ಸಾವಿರ ರೂಗಳ ಬಿಲ್ಲನ್ನು ಪಾವತಿ ಮಾಡಲಾಗಿದೆ, ಹೀಗಿದ್ದರೂ ಕೂಡ ರೀಡಿಂಗ್‌ನಲ್ಲಿ ಮತ್ತೆ ತಪ್ಪು ಕಂಡುಬರುತ್ತದೆ. ಆದ್ದರಿಂದ ಅಧಿಕಾರಿಗಳು ಎಚ್ಚೆತ್ತು ಸರಿಪಡಿಸಬೇಕೆಂದು ದೂರು ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮಹೇಶ್ ಮುಂದೆ ಆ ರೀತಿ ತಪ್ಪು ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಅಲ್ಲದೆ ಈಗಾಗಲೇ ಕಳೆದ ಜನ ಸಂಪರ್ಕ ಸಭೆಯಲ್ಲಿ ಕೇಳಿ ಬಂದ ಎಲ್ಲಾ ದೂರುಗಳಿಗೆ ಸ್ಪಂದಿಸಿ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಅದೇ ರೀತಿ



ದೊಡ್ಡರಾಯನಪೇಟೆ ಅಶೋಕ್ ಹಾಗೂ ಬೈರಲಿಂಗ ಸ್ವಾಮಿ ಅವರು ಮಾತನಾಡಿ, ದೊಡ್ಡರಾಯನಪೇಟೆ ಗ್ರಾಮದಲ್ಲಿ ಎರಡು ಬದಿ ವಿದ್ಯುತ್ ಕಂಬಗಳಿದ್ದು, ಇದರಿಂದ ತಂತಿಗಳಿಗೆ ತಗಲು ವುದರಿಂದ ಮರಗಳನ್ನು ಕತ್ತರಿಸಲಾಗುತ್ತಿದೆ ಆದ್ದರಿಂದ ಅವುಗಳನ್ನು ಒಂದು ಬದಿಗೆ ತರಬೇಕು ಈ ಮೂಲಕ ಮರಗಳನ್ನು ಬೆಳೆಸಲು ಅನುಕೂಲ ಕಲ್ಪಿಸಬೇಕೆಂದು ತಿಳಿಸಿದರು. ಗ್ರಾಹಕ ಭಾನುಪ್ರಕಾಶ್ ಮಾತನಾಡಿ ವಿದ್ಯುತ್ ಸಮಸ್ಯೆಗಳನ್ನು ಶೀಘ್ರಗತಿಯಲ್ಲಿ ಭಾಗವಹಿ ಸಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಸಹಾಯಕ ಇಂಜಿನಿಯರ್ ಗಳಾದ ಪ್ರವೀಣ್, ನಾಗೇಂದ್ರ ಸಹಾಯಕ ಲೆಕ್ಕಾಧಿಕಾರಿ ಮಂಗಳಾಂಬ, ಜೂನಿಯರ್ ಇಂಜಿನಿಯರ್‌ಗಳಾದ ಚಂದ್ರನಾಯಕ, ಮಹದೇವ ಸ್ವಾಮಿ, ಮಂಜುನಾಥ್ ಇದ್ದರು.

# ಎಲ್ಲರೂ ಆರೋಗ್ಯ ಸಂಪತ್ತು ಕಾಪಾಡಿಕೊಳ್ಳಿ

ಚಾಮರಾಜನಗರ, ಆರೋಗ್ಯ ಶಿಬಿರಗಳು ಹೆಚ್ಚು ನಡೆ ದಷ್ಟು ಬಡ ಮತ್ತು ಶ್ರೀ ಸಾಮಾನ್ಯರಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ಮರಿಯಾಲ ಮಹಾಸಂಸ್ಥಾನ ಮಠದ ಶ್ರೀ ಇಮ್ಮಡಿ ಮುರುಘ ರಾಜೇಂದ್ರಸ್ವಾಮೀಜಿಗಳು ಅಭಿಪ್ರಾಯಪಟ್ಟರು.

ಉಡಿಗಾಲ ಗ್ರಾಮದ ಪ್ರಾಥಮಿಕ ಸರ್ಕಾರಿ ಆಸ್ಪತ್ರೆ ಮುಂಭಾಗ ನಡೆದ ಆರೋಗ್ಯ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ಆರೋಗ್ಯ ಶಿಬಿರ ಅಯೋಜಿಸಿರುವುದು ಅರ್ಥಪೂರ್ಣ ಕೆಲಸವಾಗಿದೆ. ಪ್ರಸ್ತುತ ದಿನಮಾನಗಳಲ್ಲಿ ಹುಟ್ಟುಹಬ್ಬ ಎಂದರೆ ಮೋಜು, ಮಸ್ತಿ, ದುಂದು ವೆಚ್ಚಗಳಿಗೆ ಸೀಮಿತವಾಗಿದೆ. ಆಗಾಗಿ ಇದೊಂದು ಸಾರ್ಥಕ ಕಾರ್ಯಕ್ರಮವಾಗಿದೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು. ಸಾನಿಧ್ಯ ವಹಿಸಿದ್ದ ಚಾಮ ರಾಜನಗರದ ಶ್ರೀ ಸಿದ್ದಮಲ್ಲೇಶ್ವರ ವಿರಕ್ತ ಮಠದ ಶ್ರೀ ಚನ್ನಬಸವ ಸ್ವಾಮೀಜಿ, ಉಡಿಗಾಲ ಗುರುಮಲ್ಲೇಶ್ವರ ದಾಸೋಹ ಮಠದ ಶ್ರೀ ಪ್ರಸಾದ್ ಸ್ವಾಮೀಜಿ ಮಾತನಾಡಿದರು.

**ಸನ್ಮಾನ**

ಇದೇ ವೇಳೆ ಕಾರ್ಯಕ್ರಮ ದ ಆಯೋಜಕ ಉಮೇಶ್ ಎಸ್ ಪಿಕೆ ಅವರನ್ನು ಮುಖಂಡರು,



ಅಭಿಮಾನಿಗಳು ಸನ್ಮಾನಿಸಿ ಹುಟ್ಟುಹಬ್ಬದ ಶುಭಾಶಯ ಕೋರಿದರು. ಅರವಿಂದ ಕಣ್ಣಿನ ಆಸ್ಪತ್ರೆ, ಕೊಯಮತ್ತೂರು ಮತ್ತು ರೆಜೋನೆನ್ಸ್ ವಾಕ್ ಮತ್ತು ಶ್ರವಣ ಸಂಸ್ಥೆ, ಮೈಸೂರು ಆಸ್ಪತ್ರೆಯ ನುರಿತ ವೈದ್ಯರು ತಪಾಸಣೆ ನಡೆಸಿದರು. ಗ್ರಾ.ಪಂ. ಅಧ್ಯಕ್ಷೆ ರೇಖಾ,ಉಪಾಧ್ಯಕ್ಷೆ ಮಹದೇವಮ್ಮ, ಸದಸ್ಯರಾದ ಮಲ್ಲೇಶ್, ಬಸವರಾಜಪ್ಪ, ಮಾಜಿ ಸದಸ್ಯ ಮಹದೇವು, ಚಂದ್ರಶೇಖರ್, ಅಖಿಲ ಭಾರತ ವೀರಶೈವ ಮಹಾ ಸಭಾದ ನಿರ್ದೇಶಕ ಪುರುಷೋತ್ತಮ, ರೈತ ಮುಖಂಡರಾದ ಮಹಾದೇ ವಸ್ವಾಮಿ, ಯು.ಜಿ.ಮಾದಪ್ಪ, ಪ್ರದೀಪ್, ಕಾಂಗ್ರೆಸ್ ಮುಖಂಡ ರಾದ ನಂಜಪ್ಪ, ಮಂಜು ತಮ್ಮಡಹಳ್ಳಿ, ತಿರುಪತಿನಾಯಕ,ನಂಜಪ್ಪ, ರಾಘವೇಂದ್ರ ಹಾಜರಿದ್ದರು.

# ಕನ್ನಡ ಅಧ್ಯಯನ ಸಂಸ್ಥೆಯೇ ಮಿನಿ ವಿವಿ: ಸುಂದರಂ

ಮೈಸೂರು: ಕನ್ನಡ ಅಧ್ಯಯನ ಸಂಸ್ಥೆಯೇ ಒಂದು ವಿಶ್ವ ವಿದ್ಯಾನಿಲಯವಿದ್ದಂತೆ ಅಪಾರ ಜ್ಞಾನ ಬಂಢಾರವನ್ನು ಇಲ್ಲಿ ಪಡೆಯಬಹುದಾಗಿದೆ ಎಂದು ಕನ್ನಡ ಕುವೆಂಪು ಅಧ್ಯಯನ ಸಂಸ್ಥೆಯ ಪ್ರೊ.ಆರ್.ವಿಎಸ್.ಸುಂದರಂ ಹೇಳಿದರು.

ನಗರದ ಮಾನಸಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಸುವರ್ಣ ಸಂಭ್ರಮದ ಅಂಗವಾಗಿ ಬಿ.ಎಂ.ಶ್ರೀ ಸಭಾಂಗದಲ್ಲಿ ಬುಧವಾರ ನಡೆದ ಅಂತಾರಾಷ್ಟ್ರೀಯ ವಿಚಾರ ಮಂಥನ–ಸಮಾಗಮ–ಗೌರವ ಸಮರ್ಪಣೆ ಹಾಗೂ ಸ್ಮರಣ ಸಂಚಿಕೆಗಳ ಬಿಡುಗಡೆ ಮತ್ತು ಸಾಕ್ಷ್ಯಚಿತ್ರ ಲೋಕಾರ್ಪಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕನ್ನಡ ಅಧ್ಯಯನ ಸಂಸ್ಥೆಯು ಬೇರೆ ಅಧ್ಯಯನ ವಿಭಾಗಗಳಿಗೂ ಸ್ಫೂರ್ತಿಯಾಗಿರಿಸಿಕೊಂಡು ಕನ್ನಡ ಅಧ್ಯಯನ ಪೀಠ, ಕನ್ನಡ ಅಧ್ಯಯನ ಕೇಂದ್ರ ಹಾಗೂ ಅನೇಕ ಸಂಸ್ಥೆಗಳು ಬಂದಿದೆ. ತಿರುಂ ವಿಶ್ವವಿದ್ಯಾನಿಲಯದಲ್ಲಿ ಜಾನಪದ ಕಲೆಗಳ ಎಂಎ ಮಾಡಲು ಈ ಸಂಸ್ಥೆ ಪ್ರೇರಣೆಯಾಗಿದೆ ಎಂದರು.

ಭಾರತಹಾಗೂವಿದೇಶದಲ್ಲಿಎಷ್ಟೋವಿಶ್ವವಿದ್ಯಾನಿಲಯಗಳಿದ್ದರೂ ಸಹ ನಮ್ಮ ಕನ್ನಡ ಅಧ್ಯಯನ ಸಂಸ್ಥೆಯಂತಹ ಸಂಸ್ಥೆ ಎಲ್ಲೂ ಇಲ್ಲ. ನಮ್ಮ ದೇಶದಲ್ಲಿ ಆ ಕಾರ ವಿಶ್ವಕೋಶ ಸಂಪುಟಗಳು ಬಂದಿದ್ದು, ಕನ್ನಡಲ್ಲಿ ಬಿ.ಎಲ್.ರೈಸ್ ಮಾಡಿರುವ ಎಪಿಗ್ರಾಫಿ ಆಫ್ ಕರ್ನಾಟಕ 12 ಸಂಪುಟಗಳ ಪರಿಷ್ಕರಣ ಕಾರ್ಯವನ್ನು ಇಲ್ಲೆ ಮಾಡಿದ್ದಾರೆ. ಈ ರೀತಿಯ ವಸ್ತು ಸಂಗ್ರಾಹಲಯ ಎಲ್ಲೂ ಇಲ್ಲ. ಅದೇ ರೀತಿ ಕನ್ನಡ ಅಧ್ಯಯನ ಸಂಸ್ಥೆಯಿಂದಲೇ 600 ರಿಂದ 700 ಪುಸ್ತಕಗಳು ಪ್ರಕಟವಾಗಿದೆ. ಕನ್ನಡ ಅಧ್ಯಯನ ಸಂಸ್ಥೆ ಒಂದು ವಿಭಾಗ ಅಲ್ಲ ಅದೊಂದು ಮಿನಿ ವಿಶ್ವವಿದ್ಯಾನಿಲಯ ಎಂದರು.




> ಇಲ್ಲಿನ ಹಳೆಯ ವಿದ್ಯಾರ್ಥಿಯೊಬ್ಬರೇ ಜಾನಪದ ಕಲೆಗಳ, ಗ್ರಂಥಗಳ, ವಸ್ತುಗಳ ರಕ್ಷಣೆಗಾಗಿ ಹಾಗೂ ಡಾಕ್ಯುಮೆಂಟೇಷನ್‌ಗಾಗಿ 33 ಕೋಟಿ ಕೊಟ್ಟಿದ್ದಾರೆ. ಜತೆಗೆ 150 ಕೋಟಿ ರೂ ಹಣವನ್ನು ಒಬ್ಬರೇ ನೀಡುತ್ತಿದ್ದಾರೆ. ಇದರ ಪ್ರಯೋಜನ ಕನ್ನಡ ಅಧ್ಯಯನ ವಿಭಾಗ ಹಾಗೂ ಜಾನಪದ ಅಧ್ಯಯನ ವಿಭಾಗ ಬಳಸಿಕೊಂಡು ಸದುಪಯೋಗ ಪಡಿಸಿಕೊಳ್ಳಬೇಕು.
>
> **ನಾಗರಾಜು** ಮೈಸೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ

ಮೈಸೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ನಾಗರಾಜು ಮಾತನಾಡಿ, ಜೀವನ ನಿರ್ವಹಣೆ ಮಾಡುವುದು ಒಂದು ಕಲೆ. ಇಂದಿನ ಯುವ ಸಮೂಹಕ್ಕೆ ಜೀವನ ನಿರ್ವಹಣೆ ಮಾಡುವುದು ಕಷ್ಟಕರವಾಗುತ್ತಿದೆ. ಹೀಗಾಗಿ ಅಧ್ಯಯನ ಸಂಸ್ಥೆಗಳು ಜೀವನ ನಿರ್ವಹಣೆ ಮಾಡುವುದು ಒಂದು ಕಲೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿಕೊಡಬೇಕಿದೆ ಎಂದು ಹೇಳಿದರು.

ಈಗಿನ ಸ್ಥಿತಿಯಲ್ಲಿ ಎಂ.ಎ ಕನ್ನಡ ಹುಡುಗರಿಗೆ ಮುಂದೆ ಏನು ಮಾಡಬೇಕು ಎಂದು ತಿಳಿಯುತ್ತಿಲ್ಲ. ಪ್ರತಿದಿನ ನಿರಂತರವಾಗಿ ನಾನೇ ಅವರಿಗೆ ಕರೆಸಿ ಪಿಎಚ್.ಡಿ ಮಾಡಲು ಸೀಟ್ ಕೊಡಿ ಎಂದು ಹೇಳುವ ಸ್ಥಿತಿ ನಿರ್ಮಾಣವಾಗುತ್ತಿದೆ. ಕೆಸೆಟ್, ಪಿಎಚ್.ಡಿಗೆ ಅವರು ಸೀಮಿತವಾಗುತ್ತಿದ್ದಾರೆ. ಪಿಎಚ್.ಡಿ ಮಾಡಿ ಮುಂದೆ ಏನು ಮಾಡಬೇಕೆಂದು ಅವರಿಗೆ ತಿಳಿದಿರುವುದಿಲ್ಲ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಕನ್ನಡ ಕುವೆಂಪು ಅಧ್ಯಯನ ಸಂಸ್ಥೆಯ ಪ್ರೊ.ಎನ್.ಕೆ.ಲೋಲಾಕ್ಷಿ , ಕನ್ನಡ ಕುವೆಂಪು ಅಧ್ಯಯನ ಸಂಸ್ಥೆಯ ವಿಶ್ರಾಂತ ಪ್ರಾಧ್ಯಪಕರಾದ ಪ್ರೊ.ಎಸ್.ಸೋಮಶೇಖರಗೌಡ, ಪ್ರೊ.ಹಿ.ಶಿ.ರಾಮಚಂದ್ರೇಗೌಡ, ಪ್ರಕಾಶಕ ಓಂಕಾರಪ್ಪ, ಅಧ್ಯಾಪಕ ಡಾ.ಬಿ.ಕೆ.ಪುಟ್ಟನಂಜಯ ಇತರರು ಹಾಜರಿದ್ದರು.

# ಹೂಟಗಳ್ಳಿಯಲ್ಲಿ ಕನಕ ಜಯಂತಿ ಆಚರಣೆ

ಮೈಸೂರು: ತಾಲ್ಲೂಕಿನ ಹೂಟಗಳ್ಳಿ ಕೆಎಚ್‌ಬಿ ಕಾಲೋನಿಯಲ್ಲಿ ಶ್ರೀ ಕನಕ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಕನಕ ಜಯಂತಿಯನ್ನು ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ನೂತನ ವರ್ಷದ ಕ್ಯಾಲೆಂಡರ್ ಅನ್ನು ಬಿಡುಗಡೆ ಮಾಡಲಾಯಿತು ಹಾಗೂ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಹಾಗೂ ಡಿಗ್ರಿಯಲ್ಲಿ 90 ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು. ಶಾಸಕ ಡಿ.ರವಿಶಂಕರ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ತಾ.ಪಂ. ಮಾಜಿ ಅಧ್ಯಕ್ಷ ಕೂರ್ಗಳ್ಳಿ ಮಹದೇವ್, ಮಹಾನಗರಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ತಾ. ಪಂ. ಮಾಜಿ ಅಧ್ಯಕ್ಷ ತಮ್ಮಣ್ಣೆಗೌಡ, ಹಿನ್ಕಲ್ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಹೊನ್ನಪ್ಪ, ಶ್ರೀ ಕನಕ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎನ್.ಕೃಷ್ಣ, ಪ್ರಧಾನ ಕಾರ್ಯದರ್ಶಿ ಎಂ.ಎಸ್.ಹೇಮಂತ್ ಕುಮಾರ್, ಖಜಾಂಚಿ ಸಿ.ಮರೀಗೌಡ ಇತರರು ಉಪಸ್ಥಿತರಿದ್ದರು.



# ನಿವೇಶನಗಳ ಮಾರಾಟಕ್ಕೆ ಯತ್ನ: ದೂರು





**ಮೈಸೂರು:** ವಿಧಾನ ಪರಿಷತ್ತು ಮಾಜಿ ಸದಸ್ಯ, ಬಿಜೆಪಿ ಮುಖಂಡ ಸಿದ್ದರಾಜು ಅವರಿಗೆ ಸೇರಿರುವ ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ ನಿವೇಶನಗಳನ್ನು ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ಮಾರಾಟ ಮಾಡಲು ಯತ್ನಿಸಿದ್ದ ಪ್ರಕರಣ ಬೆಳಕಿಗೆ ಬಂದಿದೆ.

ಉಪನೋಂದಣಾಧಿಕಾರಿ ಕಚೇರಿ ಸಿಬ್ಬಂದಿಯ ಸಮಯ ಪ್ರಜ್ಞೆಯಿಂದಾಗಿ ನೋಂದಣಿ ಪ್ರಕ್ರಿಯೆ ತಪ್ಪಿದ್ದು, ನಾನೇ ಸಿದ್ದರಾಜು ಎಂದು ಹೇಳಿಕೊಂಡು ಕಚೇರಿಗೆ ಬಂದಿದ್ದ ಅಸಾಮಿ ತಲೆಮರೆಸಿಕೊಂಡಿದ್ದಾನೆ.

ಆಗಿದ್ದೇನು: ಮೈಸೂರು ತಾಲೂಕಿನ ಜಯಪುರ ಹೋಬಳಿ ಕೇರ್ಗಳ್ಳಿ ಗ್ರಾಮದ ಸರ್ವೇ ನಂಬರ್ 189, 203, 204/1, 205, 206/1,2,3, 207/1, 207/5, 208/5 ಮತ್ತು 291ರ ಸ್ವತ್ತಿನಲ್ಲಿ ವಸತಿ ಉದ್ದೇಶಕ್ಕಾಗಿ ಚಾಮುಂಡಿ ನೂರು ಬಡಾವಣೆ ಅಭಿವೃದ್ಧಿಪಡಿಸಲಾಗಿದೆ. ಇಲ್ಲಿ ಮಾಜಿ ಎಂಎಲ್ಸಿ ಸಿದ್ದರಾಜು ಅವರಿಗೆ ಸೇರಿದ ಕೆಲವು ನಿವೇಶನಗಳಿದ್ದು ಸದರಿ ನಿವೇಶನಗಳನ್ನು ನೋಂದಣಿ ಮಾಡಿಸಲು ಅನ್ಯ ವ್ಯಕ್ತಿಗಳು ಯತ್ನಿಸಿದ್ದಾರೆ. ಡಿ.23ರಂದು ಮೈಸೂರು ಪಶ್ಚಿಮ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ನಕಲಿ ದಾಖಲೆಗಳನ್ನು ಸಲ್ಲಿಸಿ ನಿವೇಶನಗಳ ನೋಂದಣಿಗೆ ಆರೋಪಿಗಳು ಯತ್ನಿಸಿದ್ದಾರೆ. ಈ ವೇಳೆ ಸಬ್ ರಿಜಿಸ್ಟ್ರಾರ್ ಕಚೇರಿ ಸಿಬ್ಬಂದಿ ನಿವೇಶನಗಳನ್ನು ನೋಂದಣಿ ಮಾಡಲು ಬಂದಿರುವವರು ಸಿದ್ದರಾಜು ಅವರು ಅಲ್ಲ, ಸಿದ್ದರಾಜು ಅವರ ಬದಲಿಗೆ ಬೇರೆಯವರು ಬಂದಿದ್ದಾರೆ ಎಂಬುದನ್ನು ಖಚಿತ ಪಡಿಸಿಕೊಂಡಿದ್ದಾರೆ. ಈ ವಿಚಾರ ಗೊತ್ತಾಗುತ್ತಿದ್ದಂತೆ ವಂಚಕರು ಸಬ್ ರಿಜಿಸ್ಟ್ರಾರ್ ಕಚೇರಿಯಿಂದ ಕಾಲ್ಕಿತ್ತಿದ್ದಾರೆ. ಆ ಬಳಿಕ ನಡೆದ ಘಟನೆಯನ್ನು ಸಿದ್ದರಾಜು ಅವರ ಗಮನಕ್ಕೆ ತರಲಾಗಿದೆ. ಈ ಹಿನ್ನೆಲೆಯಲ್ಲಿ ಸಬ್ ರಿಜಿಸ್ಟ್ರಾರ್ ಕಚೇರಿಗೆ ಭೇಟಿ ನೀಡಿದ ಸಿದ್ದರಾಜು, ಈ ಸಂಬಂಧ ಲಿಖಿತ ದೂರು ನೀಡಿದರು.

## ಪೊಲೀಸರಿಗೂ ದೂರು ನೀಡುತ್ತೇನೆ: ಸಿದ್ದರಾಜು

**ನನ್ನ ನಿವೇಶನಗಳನ್ನು ವಂಚಿಸಲು ಯತ್ನಿಸಿದ್ದ ಆರೋಪಿಗಳ ವಿರುದ್ಧ ಪೊಲೀಸರಿಗೆ ದೂರು ನೀಡುತ್ತೇನೆ ಎಂದು ಮಾಜಿ ಎಂಎಲ್ಸಿ ಸಿದ್ದರಾಜು ತಿಳಿಸಿದರು. ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, ನನಗೆ ಸೇರಿರುವ 20 ಕೋಟಿಗೂ ಹೆಚ್ಚು ಬೆಲೆ ಬಾಳುವ ಹಲವು ನಿವೇಶನಗಳನ್ನು ನಕಲಿ ದಾಖಲೆಗಳನ್ನು ಸೃಷ್ಟಿಸಿ ನೋಂದಣಿ ಮಾಡಲು ಪ್ರಯತ್ನಿಸಲಾಗಿದೆ. ಈ ಬಗ್ಗೆ ಉಪ ನೋಂದಣಾಧಾಕಾರಿಗಳ ಕಚೇರಿ ಸಿಬ್ಬಂದಿ ನನ್ನ ಗಮನಕ್ಕೆ ತಂದರು.**

**ಹೀಗಾಗಿ ಉಪ ನೋಂದಣಾಧಿಕಾರಿಗಳನ್ನು ಭೇಟಿ ಮಾಡಿ ಲಿಖಿತ ದೂರು ನೀಡಿದ್ದೇನೆ. ಈ ಬಗ್ಗೆ ಪೊಲೀಸರಿಗೂ ದೂರು ನೀಡುತ್ತೇನೆ ಎಂದರು.**

# ಮುಖ್ಯಕಾರ್ಯನಿರ್ವಾಹಕರ 2026ರ ದಿನದರ್ಶಿಕೆ ಬಿಡುಗಡೆ

**ಮೈಸೂರು:** ಬೆಂಗಳೂರಿನ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ಮೈಸೂರು ಪ್ರಾಂತೀಯ ಮುಖ್ಯ ಕಾರ್ಯನಿರ್ವಾಹಕರ ವಾರ್ಷಿಕ ಸಭೆಯಲ್ಲಿ 2026ರ ದಿನದರ್ಶಿಕೆಯನ್ನು ಬಿಡುಗಡೆ ಮಾಡಲಾಯಿತು.

ಸಂಘದ ಶಿಕ್ಷಣ ನಿಧಿ ಸಲಹಾ ಸಮಿತಿ ಸದಸ್ಯ ಹಾಗೂ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ನೂತನ ದಿನದರ್ಶಿಕೆ ಬಿಡುಗಡೆಗೊಳಿಸಿ ಮಾತನಾಡಿ, ನಾವೆಲ್ಲರೂ ಎಷ್ಟೇ ಕಾರ್ಯಕ್ರಮ ರೂಪಿಸಿದರೂ ಅದನ್ನು ಜಾರಿಗೊಳಿಸುವಲ್ಲಿ ಅಧಿಕಾರಿಗಳ ಪಾತ್ರ ಪ್ರಮುಖವಾಗಿದೆ. ಸಾಕಷ್ಟು ತರಬೇತಿ ಪಡೆದರೂ ಸಾಕಷ್ಟು ಸಂದೇಹಗಳಿರುತ್ತವೆ. ಆ ಕಾರಣಕ್ಕಾಗಿ ಮತ್ತೆ ಮತ್ತೆ ತರಬೇತಿಗಳನ್ನು ಮಾಡಲಾಗುತ್ತದೆ. ಒಂದು ನಿರ್ದಿಷ್ಟ ದಾರಿಯಲ್ಲಿ ಹೋಗುವ ನಿಟ್ಟಿನಲ್ಲಿ ತರಬೇತಿಗಳು ಸೂಕ್ತವಾಗಿವೆ. ಸರಳ ದಾರಿಯಲ್ಲಿ ಹೋಗುವ ಮನುಷ್ಯನ ಸಹಜ ಗುಣವಾಗಿದೆ. ಆದರೆ, ವ್ಯವಸ್ಥಿತವಾಗಿ ಹೋಗುವುದನ್ನು ಕಲಿಯಲು ಇಂತಹ ತರಬೇತಿಗಳು ಪೂರಕವಾಗಿರುವ ಕಾರಣಕ್ಕೆ 19 ವಿಧವಾದ ತರಬೇತಿ ನಡೆಸುತ್ತಿದ್ದೇವೆಂದರು.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ವೃತ್ತಿಪರ ನಿರ್ದೇಶಕ ಬಿ.ಮಹದೇವಸ್ವಾಮಿ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕ ಕೆ.ಶ್ರೀಧರ್, ಮೈಸೂರು, ಮಂಡ್ಯ ಮತ್ತು ಕೊಡಗು ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಎಸ್.ಆರ್.ನಾರಾಯಣರಾವ್ ಅತಿಥಿಗಳಾಗಿದ್ದರು. ಬ್ಯಾಂಕಿಂಗ್ ಕ್ಷೇತ್ರ ಪರಿಣಿತ ಕೃಷ್ಣಮೂರ್ತಿ, ಕಾರ್ಯಕ್ರಮದ ಆಯೋಜಕರಾದ ಗುರುಪ್ರಸಾದ್, ಸುರೇಶ್ ಇನ್ನಿತರರು ಉಪಸ್ಥಿತರಿದ್ದರು.




# ಪೌರಕಾರ್ಮಿಕರ ಕಾಣುವ ಮನಸ್ಥಿತಿ ಬದಲಾಗುತ್ತಿದೆ: ಜಿ.ಟಿ.ದೇವೇಗೌಡ




**ಮೈಸೂರು:** ಸಮಾಜದಲ್ಲಿ ಪೌರ ಕಾರ್ಮಿಕರನ್ನು ಗೌರವ, ಪ್ರೀತಿಯಿಂದ ಕಾಣುವಂತೆ ಬದಲಾಗಿದೆ. ನಮ್ಮಂತೆ ಪೌರ ಕಾರ್ಮಿಕರು ಎನ್ನುವ ಮನಸ್ಸು ಬಂದು ನೋಡುವ ವಾತಾವರಣ ಬೇರೆಯಾಗಿದೆ ಎಂದು ಶಾಸಕ ಜಿ.ಟಿ.ದೇವೇಗೌಡ ಹೇಳಿದರು.

ಕಡಕೊಳ ಪಟ್ಟಣ ಪಂಚಾಯಿತಿ ವತಿಯಿಂದ ಆಯೋಜಿಸಿದ್ದ ಪೌರ ಕಾರ್ಮಿಕರ ದಿನಾಚರಣೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿದ್ದವರನ್ನು ನೇರ ನೇಮಕಾತಿಯನ್ನಾಗಿ ಸರ್ಕಾರ ಮಾಡಿದೆ. ಇದರಲ್ಲಿ ಕಡಕೊಳದಲ್ಲಿ ಕೆಲಸ ಮಾಡುತ್ತಿದ್ದ ಪೌರ ಕಾರ್ಮಿಕರಿಗೂ ನೇರ ನೇಮಕಾತಿಯಲ್ಲಿ ನೇಮಕ ಮಾಡಿಕೊಂಡು ಆದೇಶ ಹೊರಡಿಸಲಾಗಿದೆ. ಇದಲ್ಲದೆ, ಕಾಯಂ ನೇಮಕಾತಿ ಮಾಡಿಕೊಂಡುಸರ್ಕಾರದ ಎಲ್ಲಾ ಸವಲತ್ತುಗಳು ದೊರೆಯುವಂತೆ ಮಾಡಲಾಗಿದೆ ಎಂದರು. ಪೌರ ಕಾರ್ಮಿಕರಿಗೆ ಇಂದು ಗೌರವ ಸಮರ್ಪಣೆ ಮಾಡಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಅತ್ಯಂತ ಪ್ರೀತಿಯಿಂದ ಕಾಣಲಾಗುತ್ತಿದೆ.

ಮನೆ ಮನೆಗೆ ತೆರಳಿ ಕಸ ಸಂಗ್ರಹಣೆ ಮಾಡುವ ಜತೆಗೆ ಬೀದಿಗಳನ್ನು ಸ್ವಚ್ಛತೆ ಮಾಡಿ ಯಾವುದೇ ದೂರುಗಳು ಬರದಂತೆ ಕೆಲಸ ನಿರ್ವಹಿಸುತ್ತಿರುವ ನಿಮ್ಮ ಸೇವೆ ಅನನ್ಯ ಎಂದರು.

ಕಬಿನಿಯಿಂದ ಕಡಕೊಳ ಪಟ್ಟಣ ಪಂಚಾಯತಿ ವ್ಯಾಪ್ತಿಯ ಗ್ರಾಮಗಳಿಗೆ ಲೇಔಟ್ ಗಳಿಗೆ ಸಮಗ್ರವಾಗಿ ಕುಡಿಯುವ ನೀರನ್ನು ಒದಗಿಸುವ ಕಾಮಗಾರಿ ಪ್ರಾರಂಭವಾಗಿದ್ದು, ಮುಂದಿನ ದಿನಗಳಲ್ಲಿ ಈ ಭಾಗದ ಎಲ್ಲಾ ಗ್ರಾಮಗಳಿಗೆ ಬಡಾವಣೆಗಳಿಗೆ ಒದಗಿಸಲಾಗುವುದು. ಕ್ಷೇತ್ರ ದೊಡ್ಡದಿದ್ದು ಶಕ್ತಿ ಮೀರಿ ಕೆಲಸ ಮಾಡುತ್ತಿದ್ದೇನೆಂದರು. ಪಟ್ಟಣ ಪಂಚಾಯಿತಿಮುಖ್ಯಾಧಿಕಾರಿ ಎಚ್.ಆರ್.ದೀಪಾ, ಮುಖಂಡರಾದ ಕಡಕೊಳ ನಾಗರಾಜು, ಪಟೇಲ್ ಜವರೇಗೌಡ, ಗೆಜ್ಜಗಳ್ಳಿ ಲೋಕೇಶ್, ಮಂಜುಳಾ ಮಂಜುನಾಥ್, ಶ್ರೀಕಂಠು, ಶಿವಕುಮಾರ್, ಹೊಸಹುಂಡಿ ರಮೇಶ್, ಕಡಕೊಳ ರಮೇಶ್,ಮಾದೇಶ್ ಮತ್ತಿತರರು ಹಾಜರಿದ್ದರು.

# ಒಳ ಮೀಸಲು ಹೋರಾಟಗಾರರ ಮೇಲಿನ ಕೇಸ್ ವಾಪಾಸ್‌ಗೆ ಆಗ್ರಹ





**ಮೈಸೂರು:** ಒಳ ಮೀಸಲಾತಿ ಸಂಪೂರ್ಣ ಜಾರಿಗಾಗಿ ಹಮ್ಮಿಕೊಂಡ ಹೋರಾಟದ ಭಾಗವಾಗಿ ಡಿ. 6 ರಂದು ವರುಣ ವ್ಯಾಪ್ತಿಯಲ್ಲಿ ಪಾದಯಾತ್ರೆ ಕೈಗೊಳ್ಳಲುದ್ದೇಶಿಸಿದ್ದವರ ಮೇಲೆ ವರುಣ ಠಾಣೆಯಲ್ಲಿ ದಾಖಲಿಸಿರುವ ಸುಳ್ಳು ಪ್ರಕರಣ ಹಿಂಪಡೆಯಬೇಕೆಂದು ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಹೋರಾಟ ಸಮಿತಿಯ ವಕೀಲ ಎಸ್. ಮಾರೆಪ್ಪ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಸಿಎಂ ಸ್ವಗ್ರಾಮ ಸಿದ್ದಾಮನ ಹುಂಡಿಯಿಂದ ಪಾದಯಾತ್ರೆ ಕೈಗೊಳ್ಳಬೇಕೆಂದಿದ್ದಾಗ ತಾವು ಯಾರೂ ಸಹಾ ಯಾರ ವಿರುದ್ಧವೂ ಧಿಕ್ಕಾರ ಕೂಗಲಿಲ್ಲ, ಇಲ್ಲವೇ ಯಾವುದೇ ವರದಿಯನ್ನೂ ವಿರೋಧಿಸಲಿಲ್ಲ. ಹೀಗಿದ್ದರೂ ರಾತ್ರೋರಾತ್ರಿ ಜಿಲ್ಲಾಧಿಕಾರಿಯಿಂದ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ, ಅದರ ಮಾಹಿತಿಯನ್ನು ತಮಗೂ ನೀಡದೇ, ಅದನ್ನು ಉಲ್ಲಂಘಿಸಿರುವುದಾಗಿ ಆರೋಪಿಸಿ ವಶಕ್ಕೆ ಪಡೆದು ಸುಳ್ಳು ಪ್ರಕರಣ ದಾಖಲಿಸಿದ್ದಾರೆ ಎಂದು ಆರೋಪಿಸಿದರು. ಅಲ್ಲದೆ, ಒಳ ಮೀಸಲಾತಿ ಸಂಪೂರ್ಣ ಜಾರಿಗೊಳಿಸಬೇಕು. ಇಲ್ಲದಿದ್ದರೆ ಕುರ್ಚಿ ಬಿಡಿ ಎಂಬ ಆಂದೋಲನ ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದರು.

ಶಿವರಾಯ ಅಕ್ಕರಕಿ, ಕನಿಕೇನಹಳ್ಳಿ ಕೃಷ್ಣಪ್ಪ, ಭಾನುಪ್ರಸಾದ್, ನರಸಿಂಹಮೂರ್ತಿ, ಗಂಗಯ್ಯ, ವೆಂಕಟರಮಣ ಮೊದಲಾದವರು ಇದ್ದರು.

# ಹೋಟೆಲ್ ಮ್ಯಾನೇಜರ್‌ನಿಂದ 30 ಸಾವಿರ ಲಂಚ ಪಡೆಯುತ್ತಿದ್ದಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದ ಎಸಿಪಿ!

**ಬೆಂಗಳೂರು:** ಬೆಂಗಳೂರಿನಲ್ಲಿ ಹೋಟೆಲ್ ಮ್ಯಾನೇಜರ್ ಒಬ್ಬರಿಂದ 30,000 ಲಂಚ ಪಡೆಯುತ್ತಿದ್ದಾಗ ಎಸಿಪಿಯೊಬ್ಬರು ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.



ಮಲ್ಲೇಶ್ವರಂ ಉಪವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಕೃಷ್ಣ ಮೂರ್ತಿ ಅವರನ್ನು ಅಧಿಕಾರಿಗಳು ಬಂಧಿಸಿದ್ದಾರೆ.

ರಾಜಾಜಿನಗರದಲ್ಲಿ ಹೋಟೆಲ್ ಮ್ಯಾನೇಜರ್ ಆಗಿರುವ ದೂರುದಾರ ಸಂಜಯ್ ಕುಮಾರ್, ಎಸಿಪಿ ನಿಗದಿತ ಸಮಯಕ್ಕಿಂತ ಹೆಚ್ಚು ಸಮಯ ಹೋಟೆಲ್ ತೆರೆದಿರಲು 50,000 ಲಂಚ ನೀಡುವಂತೆ ಪೀಡಿಸುತ್ತಿದ್ದಾರೆ ಎಂದು ಆರೋಪಿಸಿ ಲೋಕಾಯುಕ್ತರನ್ನು ಸಂಪರ್ಕಿಸಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.


ಸಂಜಯ್ ಕುಮಾರ್ ಆರೋಪಿಯನ್ನು ಸದ್ಯಕ್ಕೆ 30,000 ಸ್ವೀಕರಿಸುವಂತೆ ಮನವೊಲಿಸಿದ್ದರು. ಬುಧವಾರ ಹಣ ಸ್ವೀಕರಿಸುತ್ತಿದ್ದಾಗ, ಲೋಕಾಯುಕ್ತ ಅಧಿಕಾರಿಗಳು ಎಸಿಪಿಯನ್ನು ರೆಡ್ ಹ್ಯಾಂಡ್ ಆಗಿ ಬಂಧಿಸಿದರು ಎಂದು ಅವರು ಹೇಳಿದರು.

ತನಿಖೆ ಪ್ರಗತಿಯಲ್ಲಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

# ಮನಸ್ಸನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವುದೇ ಯಶಸ್ಸಿನ ಗುಟ್ಟು: ಡಾ.ಎಚ್.ಎಲ್.ಪುಷ್ಪ

## ಮುಕುತವಾಗಲಿ ಮನವು ಮತ್ತು ಒಣಮರಗಳ ಕಾಡು ಪುಸ್ತಕಗಳ ಬಿಡುಗಡೆ

**ರಾಮನಗರ:** ರಾಮನಗರ: ಇಂದಿನ ಜಾಗತಿಕ ಯುಗದಲ್ಲಿ ವಿಶ್ವದೊಂದಿಗೆ ಸ್ಪರ್ಧಿಸಿ ಗೆಲ್ಲಬೇಕಾದರೆ ನಮಗೆ ಸದೃಢವಾದ ಮನಸ್ಸಿರಬೇಕು. ಮನಸ್ಸನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವುದೇ ಯಶಸ್ಸಿನ ಗುಟ್ಟು ಎಂದು ಸಾಹಿತಿ ಡಾ.ಎಚ್.ಎಲ್ ಪಷ್ಪ ತಿಳಿಸಿದರು.




ಇಲ್ಲಿ ಜಾನಪದ ಲೋಕದಲ್ಲಿ ರಾಜಮಾರ್ಗ ಸಾಹಿತ್ಯ ಸಂಸ್ಕೃತಿ ಮತ್ತು ಸ್ವಾಸ್ಥ್ಯ ಟ್ರಸ್ಟ್ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಲೇಖಕ ಯೋಗೇಶ್ ಮಾಸ್ಟರ್ ಅವರ 'ಮುಕುತವಾಗಲಿ ಮನವು' ಹಾಗೂ 'ಒಣಮರಗಳ ಕಾಡು' ಎರಡು ಪುಸ್ತಕಗಳ ಬಿಡುಗಡೆ ಮಾಡಿ ಅವರು ಮಾತನಾಡಿದರು.

ನಮ್ಮ ಬಹುತೇಕ ಸಮಸ್ಯೆಗಳಿಗೆ ಮೂಲ ಕಾರಣ ಮನಸ್ಸೇ ಆಗಿರುತ್ತದೆ. ನಾವಿಂದು ಹಲವಾರು ಒತ್ತಡಗಳಿಂದ ಇಲ್ಲಸಲ್ಲದ ರೋಗಗಳನ್ನು ಆಹ್ವಾನಿಸಿಕೊಳ್ಳುತ್ತಿದ್ದೇವೆ. ಆದ್ದರಿಂದ ಎಲ್ಲರೂ ಮನಸ್ಸನ್ನು ಸ್ವಾಸ್ಥ್ಯವಾಗಿಟ್ಟುಕೊಳ್ಳಬೇಕು. ಉತ್ತಮವಾದ ಮಾನಸಿಕವಾದ ಆರೋಗ್ಯ ಕಾಪಾಡಿಕೊಳ್ಳಲು ಯೋಗ ಸಹಕಾರಿಯಾಗಿದೆ ಎಂದು ತಿಳಿಸಿದರು.

ಮನೋವಿಜ್ಞಾನದ ಬಗ್ಗೆ ಎಲ್ಲರೂ ತಿಳಿದುಕೊಳ್ಳುವ ಅವಶ್ಯಕತೆ ಇದೆ. ಮನೋರೋಗಗಳಿಂದ ದೂರವಿರಬೇಕು. ವಚನಕಾರರು ಸಹ ಮನಸ್ಸಿನ ನಿಯಂತ್ರಣ ಕುರಿತು ಹಲವು ವಚನಗಳನ್ನು ರಚಿಸಿದ್ದಾರೆ. ಮಾನಸಿಕ ಸ್ವಾಸ್ಥ್ಯ ಕಾಪಾಡಿಕೊಳ್ಳುವುದರ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು. ಪುಸ್ತಕಗಳನ್ನು ಕುರಿತು ಮನೋವೈದ್ಯಕೀಯ ಸಾಮಾಜಿಕ ಕಾರ್ಯಕರ್ತೆ ಎಸ್. ಪದ್ಮರೇಖಾ ಮಾತನಾಡಿ, ನಾವು ದೇಹದ ಆರೋಗ್ಯಕ್ಕೆ ಒತ್ತು ನೀಡುತ್ತಿದ್ದೇವೆಯೆ ಹೊರೆತು ಮಾನಸಿಕ ಆರೋಗ್ಯಕ್ಕೆ ಮಹತ್ವ ನೀಡುತ್ತಿಲ್ಲ. 2015ರ ವರದಿಯೊಂದ ಪ್ರಕಾರ 100 ರಲ್ಲಿ 10 ಮಂದಿ ಮಾನಸಿಕ ಖಾಯಿಲೆಗೆ ಒಳಗಾಗಿರುತ್ತಾರೆ. ನಕಾರಾತ್ಮಕ ಆಲೋಚನೆಗಳನ್ನು ಮಾಡುವುದನ್ನು ಬಿಟ್ಟು ಸಕಾರಾತ್ಮಕ ಆಲೋಚನೆಗಳನ್ನು ಮಾಡಬೇಕಾಗಿದೆ ಎಂದು ತಿಳಿಸಿದರು.

ಯೋಗೇಶ್ ಮಾಸ್ಟರ್ ಅವರು ತಮ್ಮ ಎರಡು ಕೃತಿಗಳಲ್ಲಿ ಹೊಸ ಪದಗಳನ್ನು ಬಳಸಿದ್ದಾರೆ. ಇಂದು ಬಿಡುಗಡೆಯಾದ ಪುಸ್ತಕಗಳು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳುವುದರ ಬಗ್ಗೆ ತಿಳಿಸಿಕೊಡುತ್ತವೆ ಎಂದು ತಿಳಿಸಿದರು.


ಲೇಖಕ ಅಗ್ನಿಶ್ರೀಧರ್ ಮಾತನಾಡಿ ಇಂದಿನ ದಿನಗಳಲ್ಲಿ ಮಾನಸಿಕ ರೋಗಕ್ಕೆ ಎಲ್ಲರೂ ತುತ್ತಾಗುತ್ತಿದ್ದಾರೆ. ರಾಜಕೀಯ ವ್ಯವಸ್ಥೆಯಿಂದ ಜನರು ಭ್ರಮನಿರಸನಗೊಂಡಿದ್ದಾರೆ. ಪ್ರಸ್ತುತ ಸಂದರ್ಭದಲ್ಲಿ ಎಲ್ಲರೂ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದು ಅವಶ್ಯಕವಾಗಿದೆ ಎಂದು ತಿಳಿಸಿದರು.

ಮನೋ ವೈದ್ಯ ಡಾ.ಸಿ.ಆರ್. ಚಂದ್ರಶೇಖರ್ ಮಾತನಾಡಿ, ಭಾರದಲ್ಲಿ ಇಂದು ಶೇ.40ರಷ್ಟು ಮಂದಿ ಮಧುಮೇಹದಿಂದ ಬಳಲುತ್ತಿದ್ದಾರೆ. ಒತ್ತಡ ಎನ್ನುವುದು ಹೆಚ್ಚಾಗುತ್ತಿದ್ದು ಯುವ ಸಮುದಾಯ ನಾನಾ ರೀತಿಯ ರೋಗಗಳಿಗೆ ಬಲಿಯಾಗುತ್ತಿದ್ದಾರೆ. ಜನರು ಒತ್ತಡ ರಹಿತ ಜೀವನ ನಡೆಸಿದರೆ ರೋಗಗಳಿಂದ ದೂರವಿರಬಹುದು ಎಂದು ತಿಳಿಸಿದರು.

ಮನುಷ್ಯ ಒಂಟಿಯಾಗಿರಬಾರದು. ಪ್ರಸ್ತುತ ಸಂದರ್ಭದಲ್ಲಿ ಮೊಬೈಲ್ ಅಪಾಯಕಾರಿ ಸಾಧನವಾಗಿ ಮಾರ್ಪಟ್ಟಿದೆ. ಜನರು ಸಮರ್ಪಕವಾದ ಜೀವನಶೈಲಿಯನ್ನು ಅಳವಡಿಸಿಕೊಳ್ಳದಿದ್ದರೆ ವಿವಿಧ ರೀತಿಯ ರೋಗಗಳಿಗೆ ತುತ್ತಾಗಬೇಕಾಗುತ್ತದೆ ಎಂದು ತಿಳಿಸಿದರು.

# ಗುರುರಾಯರ ಶ್ರೀಕ್ಷೇತ್ರದಲ್ಲಿ ಕು॥ ಅಭಿಜ್ಞ ಪಿ. ಕಶ್ಯಪ್ ನಾದ ನಮನ

**ಮಂತ್ರಾಲಯ:** ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಗುರುರಾಯರ ಮೂಲ ಬೃಂದಾವನ ಸನ್ನಿಧಾನವಿರುವ ಶ್ರೀಕ್ಷೇತ್ರ ಮಂತ್ರಾಲಯದಲ್ಲಿ ಬೆಂಗಳೂರಿನ ಬಿ.ಕೆ. ಪ್ರಸನ್ನಕುಮಾರ್ ಮತ್ತು ಶ್ರೀಮತಿ ವಿಜಯಲಕ್ಷ್ಮೀ ಅವರ ಸುಪುತ್ರಿ ಹಾಗೂ ವಿದುಷಿ ಶ್ರೀಮತಿ ಲಕ್ಷ್ಮೀ ವರುಣ್ ಮತ್ತು ವಿದುಷಿ ಶ್ರೀಮತಿ ವಿಜಯಾ ಭಟ್ ಅವರ ಶಿಷ್ಯೆ ಕು॥ ಅಭಿಜ್ಞ ಪಿ. ಕಶ್ಯಪ್ ಅವರು ಸಲ್ಲಿಸಿದ "ನಾದ ನಮನ" ಕಾರ್ಯಕ್ರಮದಲ್ಲಿ ಅಪರೋಕ್ಷ ಜ್ಞಾನಿಗಳಿಂದ ರಚಿಸಲ್ಪಟ್ಟ ಹಲವಾರು ಅಪರೂಪದ ಹರಿದಾಸರ ಪದಗಳನ್ನು ತಾರತಮ್ಯೋಕ್ತವಾಗಿ ಪ್ರಸ್ತುತಪಡಿಸಿದರು. ಇವರ ಗಾಯನಕ್ಕೆ ಪಿಟೀಲು ವಾದನದಲ್ಲಿ ವಿದ್ವಾನ್ ಶ್ರೀ ಎಸ್. ಶಶಿಧರ್ ಹಾಗೂ ಮೃದಂಗ ವಾದನದಲ್ಲಿ ವಿದ್ವಾನ್ ಶ್ರೀ ಶ್ರೀನಿವಾಸ್ ಅನಂತರಾಮಯ್ಯ ಸಹಕರಿಸಿದರು. ಸಂಚಾಲಕರು ಕಲಾವಿದರಿಗೆ ಅನುಗ್ರಹ ಸಂದೇಶ ಪತ್ರ ಮತ್ತು ಫಲಮಂತ್ರಾಕ್ಷತೆ ನೀಡಿ ಅನುಗ್ರಹಿಸಿದರು.



# ನಾಲ್ಕನೇ ವರ್ಷದ ಹನುಮ ಜಯಂತೋತ್ಸವ



**ಕೆ.ಆರ್.ನಗರ:** ಶ್ರೀ ಪೇಟೆ ಆಂಜನೇಯ ಸ್ವಾಮಿ ಯುವಕರ ಸಂಘದಿಂದ ಸಾಲಿಗ್ರಾಮ ಪಟ್ಟಣದಲ್ಲಿ ನಾಲ್ಕನೇ ವರ್ಷದ ಹನುಮ ಜಯಂತೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು.

ಪೇಟೆ ಆಂಜನೇಯನಿಗೆ ಸಂಘದ ಎಲ್ಲಾ ಪದಾಧಿಕಾರಿಗಳು ಭಾಸ್ಕರ್ ಸ್ವಾಮಿ ದೇವಸ್ಥಾನದ ಮುಖ್ಯ ಅರ್ಚಕ ಧನುರ್ದಾಸ್ ಐಯ್ಯಂಗಾರ್ ಮತ್ತು ಸಾರ್ವಜನಿಕರೊಂದಿಗೆ ಬೆಣ್ಣೆ ಅಲಂಕಾರ ಸೇರಿದಂತೆ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ನಡೆಸಿ ನಂತರ ಆಗಮಿಸಿದ ಸಾವಿರಾರು ಭಕ್ತರಿಗೆ ಅನ್ನದಾಸೋಹ ಕಾರ್ಯಕ್ರಮ ಏರ್ಪಡಿಸಿದರು. ಸರತಿ ಸಾಲಿನಲ್ಲಿ ನಿಂತು ಆಂಜನೇಯನ ದರ್ಶನ ಪಡೆದ ಭಕ್ತರು ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಅಂತರ ಗ್ರಾಮದಲ್ಲಿರುವ ವಿವಿಧ ಆಂಜನೇಯ ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸಿದ ಅವರು ಆಂಜನೇಯ ಮೂರ್ತಿ, ಉತ್ಸವ ಆಂಜನೇಯ, ಶ್ರೀ ರಾಮನ ಪ್ರತಿಮೆ, ಗಣಪತಿ ಪ್ರತಿಮೆ, ವೀರಾಂಜನೇಯನ ಪ್ರತಿಮೆ ಸೇರಿದಂತೆ ವಿವಿಧ ದೇವರ ಪ್ರತಿಮೆಗಳನ್ನು ತೆರೆದ ವಾಹನದಲ್ಲಿ ಕೂರಿಸಿ ಅಲಂಕರಿಸಿ ಚುಂಚನಕಟ್ಟೆ ರಸ್ತೆ ರಾಮನಾಥಪುರ ರಸ್ತೆ ಮಹಾವೀರ ರಸ್ತೆ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಗಿದೆ.

ಮೆರವಣಿಗೆಯಲ್ಲಿ ಭಾಗವಹಿಸಿದ ಭಕ್ತಾದಿಗಳು ತಮ್ಮ ಇಷ್ಟಾರ್ಥ ಪೂಜೆಯನ್ನು ಸಲ್ಲಿಸಿದರು. ವಿವಿಧ ಆಂಜನೇಯ ಸ್ವಾಮಿ ಯುವಕ ಸಂಘದವರು ಆಂಜನೇಯನ ಭಕ್ತಿಗೀತೆ ಹಾಡುಗಳಿಗೆ ಹೆಜ್ಜೆ ಹಾಕಿ ರಸ್ತೆ ಉದ್ದಕ್ಕೂ ಕುಣಿದು ಕುಪ್ಪಳಿಸಿದರು.ಅಂಜನೇಯನ ಭಕ್ತರು. ಮೆರವಣಿಗೆ ಉದ್ದಕ್ಕೂ ವಿವಿಧ ರೀತಿಯ ಪ್ರಸಾದ ವಿನಿಯೋಗ ಮಾಡಿದರು.ಮೇರವಣೆಯಲ್ಲಿ ಯಾವುದೇ ಗೊಂದಲ ವೃಷ್ಟಿ ಆಗದಂತೆ ಪಟ್ಟಣದ ಪೊಲೀಸರು ಬಿಗಿ ಬಂದೋಬಸ್ತ್ ಏರ್ಪಡಿಸಿದ್ದರು.

# 'ಸಹಕಾರ ಸಂಘವು ಭವಿಷ್ಯದ ದಿನಗಳಲ್ಲಿ ದೊಡ್ಡ ಸಾಧನೆಯ ಹೆಜ್ಜೆ ಇಡುವಂತಾಗಲಿ'

**ಮಂಡ್ಯ:** ಶ್ರೀ ವೀರಮಡಿವಾಳ ಮಾಚಿದೇವ ಸೌಹಾರ್ದ ಸಹಕಾರ ಸಂಘವು ಭವಿಷ್ಯದ ವರ್ಷಗಳಲ್ಲಿ ದೊಡ್ಡ ಸಾಧನೆಯ ಹೆಜ್ಜೆ ಇಡುವಂತಾಗಲಿ ಎಂದು ಎಲ್ಲರೊಳಗೊಂದಾಗು ಮಂಕುತಿಮ್ಮ ಟ್ರಸ್ಟ್‌ನ ಅಧ್ಯಕ್ಷ ಎಂ.ವಿನಯ್‌ಕುಮಾರ್ ಶುಭ ಹಾರೈಸಿದರು.



ಸುದ್ದಿಗೋಷ್ಠಿಯಲ್ಲಿ ಸಂಘದ 2026ರ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಸಂಘವು ಸಮಾಜದ ಒಳಿತಿಗೆ ಅಗತ್ಯವಿರುವ ಕೆಲಸ ಮಾಡುವಂತಾಗಲಿ. ಸದಸ್ಯರ ಸಂಖ್ಯೆ ದುಪ್ಪಟ್ಟಾಗಿ ಎಲ್ಲ ಸದಸ್ಯರ ಆರ್ಥಿಕ ಸಬಲೀಕರಣಕ್ಕೆ ಶ್ರಮಿಸಲೆಂದು ಆಶಯ ವ್ಯಕ್ತಪಡಿಸಿದರು.

ಸಂಘದ ಅಧ್ಯಕ್ಷ ಗುರುರಾಜ್ ಮಾತನಾಡಿ, ಕಳೆದ ಆರು ವರ್ಷಗಳಿಂದ ಸಂಘ ಉತ್ತಮವಾಗಿ ನಡೆಯುತ್ತಿದ್ದು, ಇದೀಗ 587 ಸದಸ್ಯರನ್ನು ಹೊಂದಿದೆ. ಆರ್ಥಿಕವಾಗಿ ಸದಸ್ಯರಿಗೆ ಸಾಕಷ್ಟು ನೆರವಾಗಿದ್ದು, ಎಲ್ಲ ಸಹಕಾರ ಸಂಘಗಳಿಗೆ ಸಮನಾಗಿ ಕೆಲಸ ಮಾಡುತ್ತಿದೆ ಎಂದರು.

ಸದಸ್ಯರಿಗೆ ಯಶಸ್ವಿನಿ ಯೋಜನೆಯನ್ನು ಸಂಘದಿಂದ ಒದಗಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಕೆ.ಆರ್.ಪೇಟೆ ಹಾಗೂ ಮಳವಳ್ಳಿ ತಾಲೂಕಿನಲ್ಲಿ ಸಮುದಾಯದವರ ಬೇಡಿಕೆಯಂತೆ ಘಟಕಗಳನ್ನು ತೆರೆಯುವ ಉದ್ದೇಶ ಹೊಂದಲಾಗಿದೆ ಎಂದು ಭರವಸೆ ನೀಡಿದರು.

ಗೋಷ್ಠಿಯಲ್ಲಿ ಸಂಘದ ಸಿಇಓ ಆಶಾ, ನಿರ್ದೇಶಕರಾದ ರಾಜು, ಮರಳಗಾಲ ಮಂಜುನಾಥ್, ನರಸಿಂಹಯ್ಯ, ಜಯಲಕ್ಷ್ಮೀ, ಮಂಜುನಾಥ್ ಇದ್ದರು.

# ಅಯೋಧ್ಯೆ: 30 ಕೋಟಿ ರೂ ಮೌಲ್ಯದ ರತ್ನಖಚಿತ ರಾಮನ ವಿಗ್ರಹ ದಾನ

**ಅಯೋಧ್ಯೆ:** ಅಯೋಧ್ಯೆಯ ರಾಮಲಲ್ಲಾ ದೇವಾಲಯ ಆವರಣದಲ್ಲಿ ಭವ್ಯವಾದ ಚಿನ್ನದ ವರ್ಣದ ಪ್ರತಿಮೆಯ ಸ್ಥಾಪನೆಗೆ ಅಯೋಧ್ಯೆ ಸಾಕ್ಷಿಯಾಗಲಿದೆ. ವಜ್ರಗಳು, ಪಚ್ಚೆಗಳು ಮತ್ತು ಇತರ ಅಮೂಲ್ಯ ರತ್ನಗಳಿಂದ ಕೂಡಿದ 10 ಅಡಿ ಎತ್ತರ, 8 ಅಡಿ ಅಗಲದ ಪ್ರತಿಮೆಯನ್ನು ಕರ್ನಾಟಕದ ಭಕ್ತರೊಬ್ಬರು ದಾನ ಮಾಡಿದ್ದು ನಿನ್ನೆ ಅಯೋಧ್ಯೆ ತಲುಪಿದೆ.

ಕರ್ನಾಟಕ ಮೂಲದ ದಾನಿಯೊಬ್ಬರು



ಅಯೋಧ್ಯೆಯ ಶ್ರೀರಾಮ ಮಂದಿರಕ್ಕೆ 30 ಕೋಟಿ ಮೌಲ್ಯದ ಚಿನ್ನದ ರಾಮನ ಮೂರ್ತಿಯನ್ನು ಕೊಡುಗೆ ನೀಡಿದ್ದಾರೆ. ವಜ್ರ, ಪಚ್ಚೆ ಮತ್ತು ಇತರ ಅಮೂಲ್ಯ ರತ್ನಗಳಿಂದ ಕೂಡಿದ 10 ಅಡಿ ಎತ್ತರ ಹಾಗೂ 8 ಅಡಿ ಅಗಲದ ರಾಮನ ಮೂರ್ತಿಯನ್ನು ದಾನ ನೀಡಿದ್ದಾರೆ.

ಆದರೆ ದಾನ ನೀಡಿದವರ ಮಾಹಿತಿ ಇನ್ನೂ ತಿಳಿದುಬಂದಿಲ್ಲ. ಕರ್ನಾಟಕ ಮೂಲದ ಅನಾಮಿಕ ಭಕ್ತರೊಬ್ಬರು ನೀಡಿದ್ದಾರೆ ಎಂದು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಸದಸ್ಯ ಡಾ. ಅನಿಲ್ ಮಿಶ್ರಾ ಹೇಳಿದ್ದಾರೆ.

ದಕ್ಷಿಣ ಭಾರತದ ಸಾಂಪ್ರದಾಯಿಕ ಶಿಲ್ಪಕಲಾ ಶೈಲಿಯಲ್ಲಿ ರಚಿಸಲಾದ ಈ ಪ್ರತಿಮೆಯ ಮೌಲ್ಯ ಅಂದಾಜು 25–30 ಕೋಟಿ ರೂ. ಎನ್ನಲಾಗಿದೆ. ಸದ್ಯ ಮೂರ್ತಿಯ ತೂಕವನ್ನು ಅಳೆಯಲಾಗುತ್ತಿದ್ದು, ಪ್ರಾಥಮಿಕ ಅಂದಾಜಿನ ಪ್ರಕಾರ ಸುಮಾರು ಐದು ಕ್ವಿಂಟಾಲ್‌ನಷ್ಟಿರಬಹುದು ಎನ್ನಲಾಗಿದೆ. ಸಂಪೂರ್ಣ ವಿವರಗಳನ್ನು ಶೀಘ್ರದಲ್ಲೇ ಹಂಚಿಕೊಳ್ಳಲಾಗುವುದು ಎಂದು ಹೇಳಿದ್ದಾರೆ.

# ದೇಶ ಕಂಡ ಸಭ್ಯನಾಯಕ 'ಅಟಲ್ ಬಿಹಾರಿ ವಾಜಪೇಯಿ'



ಭಾರತದ 13 ಮತ್ತು 16ನೇ ಪ್ರಧಾನ ಮಂತ್ರಿ ನಮ್ಮ ದೇಶವನ್ನು 6 ವರ್ಷ 80ದಿನಗಳವರೆಗೆ ಪ್ರಧಾನ ಮಂತ್ರಿಯಾಗಿದ್ದ ಭಾರತೀಯ ಜನತಾ ಪಕ್ಷದ ಪ್ರತಿನಿಧಿಯಾಗಿ ಉತ್ತಮವಾಗಿ ಆಡಳಿತ ನಡೆಸಿದ ನಾಯಕ ಶ್ರೀ ಅಟಲ ಬಿಹಾರಿ ವಾಜಪೇಯಿಯವರು. 1957ರಿಂದ ಭಾರತೀಯ ಜನಸಂಘ ಪ್ರತಿನಿಧಿಸುತ್ತ ಮುಂದುವರೆದು 1980ರಲ್ಲಿ ಭಾರತೀಯ ಜನತಾ ಪಕ್ಷವನ್ನು ಮುನ್ನಡೆಸಿದವರು 2 ಸದಸ್ಯರನ್ನು ಹೊಂದಿದ್ದ ಪಕ್ಷವನ್ನು ಸಿಂಗಲ್ ಲಾರ್ಜೆಸ್ಟ್ ಪಾರ್ಟಿಯ ನಾಯಕರಾಗಿ ಸಮ್ಮಿಶ್ರ ಸರಕಾರದ ಪ್ರಧಾನಮಂತ್ರಿಯಾಗಿ ಭಾರತದಲ್ಲಿ ಅನೇಕ ಉತ್ತಮ ಕಾರ್ಯಗಳನ್ನು ಜನಪರ ನೀತಿಗಳನ್ನು ತಂದ ಮಹಾನ್ ನಾಯಕ ವಾಜಪೇಯಿವರು ನಮ್ಮೆಲ್ಲರ ನಲ್ಮೆಯ ನಾಯಕರು ಡಿಸೆಂಬರ್ 25ರಂದು ಅವರ 102ನೇ ಹುಟ್ಟು ಹಬ್ಬದ ಸಂಭ್ರಮ.

ಶ್ರೀ ಅಟಲ ಬಿಹಾರಿ ವಾಜಪೇಯಿಯವರು ಜನಿಸಿದ್ದು 1924ರ ಡಿಸೆಂಬರ್ 25ರಂದು ಇವರ ಜನನ ಕಾನ್ಯಕುಬ್ಜ ಬ್ರಾಹ್ಮಣ ಪರಿವಾರದಲ್ಲಿ ಮಧ್ಯಪ್ರದೇಶದ ಗ್ವಾಲಿಯರ್ ನಗರದಲ್ಲಿ ಆಗಿತ್ತು. ಇವರ ತಂದೆ ಕೃಷ್ಣ ಬಿಹಾರಿ ವಾಜಪೇಯಿ ಮತ್ತು ತಾಯಿ ಕೃಷ್ಣಾದೇವಿ. ಇವರ ತಂದೆಯವರು ಶಾಲಾ ಅಧ್ಯಾಪಕರಾಗಿದ್ದವರು. ಇವರ ಪ್ರಥಮಿಕ ವಿದ್ಯಾಭ್ಯಾಸವು ಗ್ವಾಲಿಯರ್‌ನಲ್ಲಿ, ಪದವಿಯು ಕೂಡ ಗ್ವಾಲಿಯರ್‌ನಲ್ಲಿಯೇ ಆದರೂ ಸ್ನಾತಕೋತ್ತರ ಪದವಿಯನ್ನು ಕಾನ್ಪುರದಲ್ಲಿ ಆಗ್ರಾ ವಿಶ್ವವಿದ್ಯಾಲಯದ ಮೂಲಕ ಪಡೆಯುತ್ತಾರೆ. ಇವರು ಮೊದಲಿಗೆ ಆರ್ಯ ಸಮಾಜದ ಅನುಯಾಯಿಗಳಾಗಿದ್ದರು ನಂತರ 1940 ರಿಂದ ರಾಷ್ಟ್ರೀಯ ಸ್ವಯಂಸೇವಕ ಸಂಘದ ಕಾರ್ಯಕರ್ತರಾದರು 12ನೇ ವಯಸ್ಸಿನಲ್ಲಿಯೇ ಬಾಳಾ ಸಾಹೇಬ್ ಆಪ್ಟೆಯವರ ಪ್ರಭಾವಕ್ಕೆ ಒಳಗಾಗಿದ್ದರು. ದಿನ ದಯಾಳ್ ಉಪಾಧ್ಯಯರ ರಾಷ್ಟ್ರಧರ್ಮ ಪತ್ರಿಕೆ ಮತ್ತು ಪಾಂಚಜನ್ಯ ಪತ್ರಿಕೆಗಳಲ್ಲಿ ಕೆಲಸವನ್ನು ಕೂಡ ಮಾಡಿದ್ದರು. 1942ರ ಕ್ವಿಟ್ ಇಂಡಿಯಾ ಚಟುವಳಿಯಲ್ಲಿ ಕೂಡ ಭಾಗವಹಿಸಿ ಬಂಧನಕ್ಕೆ ಒಳಗಾಗಿದ್ದವರು.ಸ್ವಾತಂತ್ರ್ಯದ ನಂತರ ಭಾರತೀಯ ಜನಸಂಘದಿಂದ 1957ರಲ್ಲಿ ಲೋಕಸಭೆಗೆ ಚುನಾಯಿತ ಸದಸ್ಯರಾದರು. ಪಂಡಿತ ದೀನದಯಾಳ ಉಪಾಧ್ಯಯರ ಮರಣದ ನಂತರ ಜನಸಂಘದ ಜವಾಬ್ದಾರಿಯು ವಾಜಪೇಯಿಯವರ ಹೆಗಲಿಗೆ ಬಿದ್ದಿತು. ಜೀವನ ಪೂರ್ತಿ ವಿವಾಹಿತರಾಗಿ ರಾಷ್ಟ್ರಕ್ಕಾಗಿ ದೇಶದ ಜನತೆಗಾಗಿ ತಮ್ಮ ಜೀವನವನ್ನು ಮೀಸಲಾಗಿಟ್ಟರು.

ವಾಜಪೇಯಿಯವರ ಜೀವನ ಸಂಘರ್ಷ ರಾಜಕೀಯ ವಿಚಾರಗಳು ಪ್ರಚಲಿತವಾಗಿವೆ, ಆದರೆ ವಾಜಪೇಯಿಯವರ ಕವಿತ್ವ ಮತ್ತು ಅವರು ಎಷ್ಟು ದೊಡ್ಡ ಲೇಖಕರು ಎನ್ನುವುದು ಹೆಚ್ಚು ಚರ್ಚೆಯಾಗದ ವಿಷಯಗಳಾಗಿವೆ. ವಾಜಪೇಯಿಯವರ ಕವಿತೆಗಳಲ್ಲಿ ದೇಶಪ್ರೇಮ, ಆಶಾಭಾವನೆ, ಸಂಸ್ಕೃತಿಯ ಕುರಿತಾದ ಹೆಮ್ಮೆ, ಮಾನವೀಯ ಮೌಲ್ಯಗಳು, ಸಾಮಾಜಿಕ ಪ್ರಜ್ಞೆ ಎಲ್ಲಕ್ಕಿಂತ ಮಿಗಿಲಾಗಿ ಭವ್ಯಭಾರತದ ನಿರ್ಮಾಣದ ಕುರಿತಾದ ಕವನಗಳು ಅವರ ವ್ಯಕ್ತಿತ್ವದ ವೈಶಿಷ್ಟ್ಯವನ್ನು ತೆರೆದಿಡುತ್ತವೆ.

ವಾಜಪೇಯಿಯವರ ಭಾಷೆ ಅತ್ಯಂತ ಸರಳವಾದ ಭಾಷೆಯಾಗಿದ್ದರೂ ಅವರ ಭಾವೋದ್ವೇಗ ಮತ್ತು ಮನದ ತುಡಿತ ತುಮುಲಗಳಲ್ಲಿ ಮೃದುವಾದ ಭಾಷೆಯಿಂದ ಎಲ್ಲರ ಮನಮುಟ್ಟುವಂತೆ ತಮ್ಮ ದೇಶಾಭಿಮಾನವನ್ನು, ದೇಶಭಕ್ತಿಯನ್ನು, ಭಾರತೀಯ ಸಂಸ್ಕೃತಿ ಪರಂಪರೆ ಮತ್ತು ಪ್ರಾಚೀನತೆಯನ್ನು ಪ್ರದರ್ಶಿಸುವ ಅವರ ರಚನೆಗಳು ಮನಸ್ಸಿಗೆ ಆಪ್ಯಾಯವಾಗುವಂತೆ ಇದ್ದಿತು. ವಾಜಪೇಯಿಯವರ ರಚನೆಗಳು ದೇಶಭಕ್ತಿಯನ್ನು ಪ್ರದರ್ಶಿಸುತ್ತ ಜನರಿಗೆ ಬಡಿದೆಳಿಸಿ ರಾಷ್ಟ್ರ ನಿರ್ಮಾಣದ ಭಕ್ತಿಯ ಕಾರ್ಯಕ್ಕೆ ಕೈ ಬೀಸಿ ಕರೆಯುವಂತಿರುತ್ತಿದ್ದವು? ತಮ್ಮ ಅನುಭವ ಮತ್ತು ತತ್ವಗಳನ್ನು ಆಧಾರಿಸಿ ಉತ್ತಮ ಕವಿತೆಗಳನ್ನು ರಚಿಸಿದ್ದಾರೆ ಇವರ ಕೈದಿ ಕವಿರಾಜ್ ಕೀ ಕುಂಡಲಿಯಾ?, ಅಮರ್ ಆಗ್ ಹೈ, ಮೇರಿ ಇಕ್ಯಾವನ್ ಕವಿತಾಯೇ, ಕ್ಯಾ ಖೋಯಾ ಕ್ಯಾ ಪಾಯಾ ಇವುಗಳು ಕವಿತೆಗಳಾದರೆ, ನ್ಯಾಷನಲ್ ಇಂಟಿಗ್ರೇಷನ್, ನ್ಯೂ ಡೈಮೆನ್ಷ್ನ್ ಆಫ್ ಇಂಡಿಯಾಸ್ ಫಾರಿನ್ ಪಾಲಿಸಿ, ಘಟ್ ಬಂಧನ್ ಕಿ ರಾಜನೀತಿ, ಬಿಂದು ಬಿಂದು ವಿಚಾರ್, ಡಿಸಿಸಿವ್ ಡೇಸ್, ಸಂಕಲ್ಪಕಾಲ್ , ವಿಚಾರ್ ಬಿಂದು, ಇಂಡಿಯಾಸ್ ಪ್ರಾಸ್ಪೆಕ್ಟಿವ್ ಆನ್ ಆಸಿಯಾನ್ ದ ಏಷಿಯಾ ಪೆಸಿಫಿಕ್ ರಿಜನ್, ನಾ ದೈನ್ಯಯಮ್ ನಾ ಪಲಾಯನಮ್, ನಯೀ ಚುನೌತಿ ನಯಾ ಅವಸರ್ ಮೊದಲಾದ ರಾಜಕೀಯ ವಿಷಯಗಳ ಆಧಾರಿತ ಪುಸ್ತಕಗಳಾಗಿವೆ.



**ಮಾಧುರಿ ದೇಶಪಾಂಡೆ**

ವಾಜಪೇಯಿಯವರು ಸಮರ್ಥನಾಯಕರಾಗಿ ಪಕ್ಷವನ್ನು ಮುನ್ನಡೆಸಿದರು, ಸಮರ್ಥ ಪ್ರತಿಪಕ್ಷದ ನಾಯಕರಾಗಿ ದೇಶದ ಸಮಸ್ಯೆಗಳ ಪರವಾಗಿ ದನಿ ಎತ್ತಿದರು, ರಾಷ್ಟ್ರದ ಜನಪ್ರತಿನಿಧಿಯಾಗಿ ವಿಶ್ವದಲ್ಲಿ ದೇಶದ ಹೆಮ್ಮೆಯ ಪುತ್ರನಾಗಿ ಭಾರತದೇಶದ ಪ್ರತಿನಿಧಿಯಾಗಿ ಹೋದ ಕಡೆಗೆಲ್ಲ ಉತ್ತಮ ಭಾಷಣ ಮಾಡಿ ವಿರೋಧಿಗಳೂ ತಲೆದೂಗಿಸುವಂತಹ ಸಾಮರ್ಥ್ಯ ಹೊಂದಿದವರಾಗಿದ್ದರು. ದೇಶದ ಪ್ರಧಾನಮಂತ್ರಿಗಳಾಗಿದ್ದಾಗ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನಾ, ಸರ್ವ ಶಿಕ್ಷಾ ಅಭಿಯಾನ್, ಗಂಗಾ ಕಾವೇರಿ ಯೋಜನೆ, ಪೋಖರನ್ ಅಣು ಪರಮಾಣು ಪರೀಕ್ಷಣೆಯಂತಹ ಮಹತ್ವದ ಕಾರ್ಯಗಳನ್ನು ಕಾರ್ಗಿಲ್ ಯುದ್ಧ, ವಿಮಾನ ಹೈಜಾಕ್ ಮತ್ತು ಸಂಸತ್ತಿನ ಮೇಲೆ ದಾಳಿ ಮೊದಲಾದ ಸಂಕಟದ ಪರಿಸ್ಥಿತಿಗಳನ್ನು ಕೂಡ ಸಮರ್ಥವಾಗಿ ಎದುರಿಸಿದ ಧೀಮಂತನಾಯಕರಾಗಿದ್ದರು.

ಅವರ ಹಸನ್ಮುಖಿ ವ್ಯಕ್ತಿತ್ವ, ಶಾಂತ ಸ್ವಭಾವ ಎಲ್ಲರನ್ನೂ ಒಗ್ಗೂಡಿಸಿಕೊಂಡು ನಡೆಯುವ ಸಾಮರ್ಥ್ಯ ಅವರನ್ನು ವಿಶ್ವದಲ್ಲಿ ಅಜಾತ ಶತ್ರು ಎಂಬ ಗುರುತನ್ನು ಕೊಟ್ಟಿತ್ತು. ವಿರೋಧಿ ನಾಯಕರುಗಳು ಕೂಡ ಅಟಲ ಬಿಹಾರಿ ವಾಜಪೇಯಿಯವರ ವ್ಯಕ್ತಿತ್ವವನ್ನು ಶ್ಲಾಘಿಸುತ್ತಿದ್ದರು. ದೇಶಕಂಡ ಅದ್ಭುತ ನಾಯಕರತಲ್ಲಿ ಅಟಲ ಬಿಹಾರಿ ವಾಜಪೇಯಿಯವರ ಸ್ಮರಣೀಯರು

# ಸಂಜೀವಿನಿ ಮಾಸಿಕ ಸಂತೆ ಮಹಿಳೆಯರು ಉತ್ಪಾದಿಸಿದ ಉತ್ಪನ್ನಗಳ ಮಾರಾಟ ವೇದಿಕೆ



**ಕೆ ಆರ್ ಪೇಟೆ:** ಜಿಲ್ಲಾ ಪಂಚಾಯತ್ ಮಂಡ್ಯ, ತಾಲ್ಲೂಕು ಪಂಚಾಯತ್ ಕೆ.ಆರ್.ಪೇಟೆ, ಗ್ರಾಮ ಪಂಚಾಯತ್ ಬಲ್ಲೇನಹಳ್ಳಿ, ಕೌಶಲಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ಸಂಜೀವಿನಿ– ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ, ಶಂಭುಲಿಂಗೇಶ್ವರ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ ಇವರ ಸಹಯೋಗದೊಂದಿಗೆ ಬೂಕನಕೆರೆ ಹೋಬಳಿಯ ಬಲ್ಲೇನಹಳ್ಳಿ ಗ್ರಾಮದಲ್ಲಿ ಮಾಸಿಕ ಸಂತೆಯನ್ನು ಏರ್ಪಡಿಸಲಾಯಿತು.

ಮಾಸಿಕ ಸಂತೆಯು ಗ್ರಾಮೀಣ ಮಹಿಳಾ ಸ್ವ– ಸಹಾಯ ಸಂಘದ ಮಹಿಳೆಯರಿಗೆ ಉತ್ಪನ್ನಗಳನ್ನು, ತಯಾರಿಸುವ, ಮಾರಾಟ ಮಾಡುವ, ಒಂದು ವೇದಿಕೆಯಾಗಿದೆ.

ಶಂಭುಲಿಂಗೇಶ್ವರ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಮಾಸಿಕ ಸಂತೆ ಮೇಳದಲ್ಲಿ ತಾಲ್ಲೂಕಿನ 34 ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟದ ಸ್ವ–ಸಹಾಯ ಸಂಘದ ಮಹಿಳೆಯರು ಮನೆಯಲ್ಲಿ ಉತ್ಪಾದಿಸಿದ ದಿನ ಬಳಕೆಯ ವಸ್ತುಗಳು, ಆಹಾರ ಪದಾರ್ಥಗಳು, ಕರಕುಶಲ ವಸ್ತುಗಳು, ಸಾಂಪ್ರದಾಯಿಕ ಗಾಣದ ಎಣ್ಣೆ, ಅಪ್ಪಳ, ಪಿನಾಯಿಲ್, ಸ್ಯಾರಿಗಳು, ಮ್ಯಾಟ್ ಗಳು, ವಿವಿಧ ಬಗೆಯ ತಿಂಡಿ–ತಿನಿಸುಗಳು ಹಾಗೂ ತರಕಾರಿಗಳನ್ನು ಮಾರಾಟ ಮೇಳದಲ್ಲಿ ಪ್ರದರ್ಶನ ಮತ್ತು ಮಾರಾಟ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಕಾರ್ಯದರ್ಶಿ ಲೋಕೇಶ್, ಗ್ರಾಮ ಪಂಚಾಯತ್ ಅಧ್ಯಕ್ಷರು ಸೌಮ್ಯ, ಶಂಭುಲಿಂಗೇಶ್ವರ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ ಅಧ್ಯಕ್ಷರು ಕಲ್ಪನಾ, ಪದಾಧಿಕಾರಿ ವರಲಕ್ಷ್ಮಿ, ಬಲ್ಲೇನಹಳ್ಳಿ ಸಿ.ಎಚ್.ಓ ಚೇತನ್, ಸ.ಕಿ.ಪ್ರಾ.ಪಾಠ ಶಾಲೆಯ ಶಿಕ್ಷಕರು ಮೀನಾಕ್ಷಿ, ಎಂ.ಡಿ.ಸಿ.ಸಿ ಬ್ಯಾಂಕ್ ವ್ಯವಸ್ಥಾಪಕರು ಲೋಕೇಶ್, ತಾಲ್ಲೂಕು ಎನ್.ಆರ್.ಎಲ್.ಎಂ ಸಿಬ್ಬಂದಿಗಳಾದ ವಲಯ ಮೇಲ್ವಿಚಾರಕರು ನಂಜುಂಡಯ್ಯ, ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕರು

ಶರತ್.ಕೆ, ತಾಲ್ಲೂಕು ವ್ಯವಸ್ಥಾಪಕರು ಪ್ರದೀಪ್.ಜಿ.ಕೆ, ವಲಯ ಮೇಲ್ವಿಚಾರಕರು ಕೇಶವಮೂರ್ತಿ, ಡಿ.ಇ.ಓ ಲಾವಣ್ಯ, ತಾಲ್ಲೂಕು ಐ.ಇ.ಸಿ ಸಂಯೋಜಕರು ಶಿವರಾಂಜನ್, ಬಿ.ಆರ್.ಪಿ ಹೇಮಾ ಮತ್ತು ನಾಗಮ್ಮ, ಆರ್ಥಿಕ ಸಾಕ್ಷಾರತ ಸಂಯೋಜಕರು ಪ್ರಮೋದ್, ಬಜ್ ಇಂಡಿಯಾ ಸಿಬ್ಬಂದಿ ಸುನೀಲ್, ಗ್ರಾಮ ಪಂಚಾಯಿತಿ ಸದಸ್ಯರುಗಳು, ಹಾಗೂ ತಾಲ್ಲೂಕು ಒಕ್ಕೂಟಗಳ ಸಿಬ್ಬಂದಿಗಳಾದ ಎಂ.ಬಿ.ಕೆ, ಎಲ್.ಸಿ.ಆರ್.ಪಿ, ಕೃಷಿ ಸಖಿ, ಪಶು ಸಖಿ, ಗ್ರಾ.ಪಂ. ಬಿಲ್ ಕಲೆಕ್ಟಾರ್ ರವಿ, ಡಿ.ಇ.ಓ ರವೀಶ್, ನೀರು ಗಂಟಿಗಳು, ಗ್ರಾ.ಪಂ.ಸಿಬ್ಬಂದಿಗಳು ಮತ್ತು ಮಹಿಳಾ ಸ್ವ–ಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು.



ಕೆ.ಆರ್.ನಗರ: ತಾಲೂಕಿನ ಚನ್ನಂಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2026ನೇ ಸಾಲಿನ ದಿನದರ್ಶಿಕೆಯನ್ನು ಶ್ರೀ ಕ್ಷೇತ್ರ ಸಿಗಂದೂರು ಚೌಡೇಶ್ವರಿ ದೇವಸ್ಥಾನದ ಧರ್ಮದರ್ಶಿಗಳಾದ ಶ್ರೀ ಡಾ.ಎಸ್.ರಾಮಪ್ಪರವರು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಸಿ.ವೈ.ಅಭಿಲಾಶ್, ಉಪಾಧ್ಯಕ್ಷ ಶಂಕರನಾಯಕ, ನಿರ್ದೇಶಕರಾದ ತಮ್ಮೇಗೌಡ, ರಘುನಾಥ್, ಸೈಯದ್ ಇಸ್ರಾದ್, ಮಲ್ಲಿಕಾರ್ಜುನ, ಸಂಜಯ್ ಕುಮಾರ್, ಚಲುವಯ್ಯ ಇದ್ದರು.

# ಶಾಲಾ ಮಕ್ಕಳಲ್ಲಿ ದೈಹಿಕ ಆಕರ್ಷಣೆ... ಪರಿಣಾಮ ಮತ್ತು ಪರಿಹಾರಗಳು

ರಾಜ್ಯದ ಪ್ರತಿ ಜಿಲ್ಲೆ ಮತ್ತು ತಾಲೂಕುಗಳಲ್ಲಿ ಇರುವ ಹೆಣ್ಣು ಮಕ್ಕಳ ವಸತಿ ನಿಲಯದಲ್ಲಿ ಅಲ್ಲಲ್ಲಿ ಪುಟ್ಟ ಬಾಲಕಿಯರು ಗರ್ಭಿಣಿಯರಾಗಿರುವ ಮಕ್ಕಳನ್ನು ಹೆತ್ತಿರುವ ವಿಷಯಗಳನ್ನು ಮಾಧ್ಯಮಗಳಲ್ಲಿ ಓದುತ್ತಲೇ ಇದ್ದೇವೆ. ಆತಂಕಕ್ಕೆ ಈಡು ಮಾಡುವ ಇಂತಹ ಘಟನೆಗಳು ಇತ್ತೀಚೆಗೆ ಹೆಚ್ಚುತ್ತಿರಲು ಕಾರಣ ಮಕ್ಕಳಲ್ಲಿ ಇರುವ ಅಜ್ಞಾನವೇ ಕಾರಣ.

ಬಾಲ್ಯ ವಿವಾಹದಿಂದ ಆಗುವ ಅನಾಹುತಗಳ ಕುರಿತು ಕೂಡ ಅಲ್ಲಲ್ಲಿ ನೋಡುವ, ಕೇಳುವ, ಎಷ್ಟೋ ಬಾರಿ ಕೆಲ ಜನರು ಮೂಕ ಸಾಕ್ಷಿಗಳಾಗುವ ಪರಿಸ್ಥಿತಿ ಇರುತ್ತದೆ. ಸರ್ಕಾರ ಮತ್ತು ಸಂಬಂಧಪಟ್ಟ ಇಲಾಖೆಗಳು ಈ ನಿಟ್ಟಿನಲ್ಲಿ ಸಾಕಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದರೂ ಕೂಡ ಈ ರೀತಿಯ ಘಟನೆಗಳು ಆಗಲು ಕಾರಣ ಏನು??

ಇದೇನಿದು ಎತ್ತಣ ಮಾಮರ ಎತ್ತಣ ಕೋಗಿಲೆ ಎಲ್ಲಿಂದೆಲ್ಲಿಯ ಸಂಬಂಧ? ಎಂದು ನೀವು ಕೇಳಬಹುದು!

ಖಂಡಿತವಾಗಿಯೂ ಇವೆರಡಕ್ಕೂ ಮತ್ತಷ್ಟು ವಿಷಯಗಳು ಸಂಬಂಧಿಸಿವೆ. ಒಂದೆಡೆ ಆಸ್ಪತ್ರೆಗಳಲ್ಲಿ ಚಿಕ್ಕ ವಯಸ್ಸಿನ ಬಾಲಕಿಯರು ಮಕ್ಕಳನ್ನು ಹೆತ್ತು ಮಗು ಇಲ್ಲವೇ ತಾಯಿಯ ಮರಣವಾಗುತ್ತಿರುವುದನ್ನು ನಾವು ನೋಡುತ್ತಿದ್ದರೆ ಮತ್ತೊಂದೆಡೆ ಹೆಣ್ಣು ಮಕ್ಕಳು ಅರಿಯದ ವಯಸ್ಸಿನಲ್ಲಿ ದೈಹಿಕ ಆಕರ್ಷಣೆಗೆ ಒಳಗಾಗಿ ಅದನ್ನೇ ಪ್ರೀತಿ ಎಂದು ಭಾವಿಸಿ ತಮ್ಮ ಮನದೊಂದಿಗೆ ತನುವನ್ನು ಕೂಡ ಅರ್ಪಿಸಿ ಅದರ ಪರಿಣಾಮವಾಗಿ ಗರ್ಭಿಣಿಯರಾಗುತ್ತಿದ್ದಾರೆ. ಸಮಾಜ ಬಾಹಿರ ವಿವಾಹ ಬಾಹಿರ ಕೃತ್ಯ ಎಂಬ ಅರಿವಾಗುವ ಹೊತ್ತಿಗೆ ಸಮಯ ಮೀರಿ ಹೋಗಿರುತ್ತದೆ. ಇಂತಹ ಸಮಯದಲ್ಲಿ ಹೆಣ್ಣು ಮಕ್ಕಳನ್ನು ಮಡಿಲ ಕೆಂಡ ಎಂದು ಭಾವಿಸಿ, ಮತ್ತೆ ಕೆಲವೊಮ್ಮೆ ಜವಾಬ್ದಾರಿ ಕಳೆದುಕೊಳ್ಳಬೇಕು ಎಂಬ ಆಶಯದಿಂದ ಕಾನೂನಿಗೆ ವಿರುದ್ಧವಾದುದು ಎಂದು ಗೊತ್ತಿದ್ದರೂ ಕೂಡ ಚಿಕ್ಕ ವಯಸ್ಸಿನಲ್ಲಿಯೇ ಮದುವೆ ಮಾಡುವ ಸಾಹಸಕ್ಕೆ ಪಾಲಕರು ಇಳಿಯುತ್ತಾರೆ.

ಹೆಣ್ಣಿರಲಿ ಗಂಡಿರಲಿ ತಪ್ಪು ಯಾರಿಂದಲೇ ನಡೆದರೂ, ಪ್ರಕೃತಿ ಸಹಜವಾದ ಈ ಕ್ರಿಯೆಯ ಹೊಣೆಗಾರಿಕೆಯನ್ನು ಅನುಭವಿಸುವ ಜವಾಬ್ದಾರಿ ಹೆಣ್ಣು ಮಕ್ಕಳ ಮೇಲಿದೆ. ಎಲ್ಲದಕ್ಕೂ ಅಂತಿಮವಾಗಿ ಹೆಣ್ಣನ್ನೇ ಹೊಣೆಯಾಗಿಸುವ, ಜವಾಬ್ದಾರಿಯಾಗಿಸುವ, ಅಂತಿಮವಾಗಿ ಗುರಿಯಾಗಿಸುವ ಈ ಸಮಾಜದಲ್ಲಿ ಕೇವಲ ಬಾಲ್ಯ ವಿವಾಹ ನಿಷೇಧ ಮಾಡಿದರೆ ಸಾಲದು, ಸುರಕ್ಷಿತ ವಸತಿ ಸಹಿತ ಶಿಕ್ಷಣ ನೀಡಿದರೂ ಸಾಲದು ಬದಲಾಗಿ ಎಲ್ಲ ವಿದ್ಯಾರ್ಥಿಗಳಿಗೆ ಜೀವನ ಮೌಲ್ಯಗಳು ಹಾಗೂ ಲೈಂಗಿಕತೆಯ ಕುರಿತ ಅರಿವು ಮೂಡಿಸಬೇಕು.

ಜೀವನ ಮೌಲ್ಯಗಳು ನಾವು ನಮ್ಮ ಬದುಕಿನಲ್ಲಿ ಪರಿಪಾಲಿಸಲೇಬೇಕಾದ ಅಲಿಖಿತ ಸಂವಿಧಾನವಿದ್ದಂತೆ.

ಪಾಲಕರಿಂದ, ಕುಟುಂಬದಿಂದ, ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಎಲ್ಲ ಬಲ್ಲ ಮೂಲಗಳಿಂದ ದೊರೆಯುವ ಮೌಲ್ಯಗಳ ಪಾಠ ನಮ್ಮ ಬದುಕಿಗೆ ದಾರಿದೀಪವಾಗಲೇಬೇಕು.

ಯಾವ ರೀತಿ ದೇವರ ಗರ್ಭಗುಡಿಯಲ್ಲಿ ಎಲ್ಲರಿಗೂ





ಪ್ರವೇಶ ಇರುವುದಿಲ್ಲವೋ ಹಾಗೆಯೇ ನಮ್ಮ ಮೈಮನಗಳ ಗರ್ಭಗುಡಿಯಲ್ಲಿ ಯಾರಿಗೂ ಪ್ರವೇಶಕ್ಕೆ ಅವಕಾಶ ಕೊಡಬಾರದು ಎಂಬ ತಿಳುವಳಿಕೆಯನ್ನು ಮಕ್ಕಳಲ್ಲಿ ಮೂಡಿಸಬೇಕು.... ವಿಶೇಷವಾಗಿ ಈ ವಯಸ್ಸಿನಲ್ಲಿ ಉಂಟಾಗುವ ದೈಹಿಕ ಆಕರ್ಷಣೆಗಳ ನಿರ್ವಹಣೆಯನ್ನು ಮಾಡುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಗಳ ಕುರಿತು ಮಕ್ಕಳಲ್ಲಿ ಅರಿವನ್ನು ಮೂಡಿಸಬೇಕು.

ಈ ಹಿಂದಿನಂತೆ ಕೂಡು ಕುಟುಂಬಗಳು ನಮ್ಮಲ್ಲಿ ಇಲ್ಲವಾದರೂ ಆ ಕೌಟುಂಬಿಕ ಮೌಲ್ಯಗಳು ಉಳಿದುಕೊಂಡಿವೆ. ಉದ್ಯೋಗ, ವ್ಯವಹಾರ ನಿಮಿತ್ತ ತಮ್ಮ ಕುಟುಂಬದಿಂದ ದೂರವಾಗಿ ಬೇರೆಯ ಊರುಗಳಲ್ಲಿ ನೆಲೆಸಿರುವ ದಂಪತಿಗಳು ತಮ್ಮ ಮಕ್ಕಳಿಗೆ ಕೌಟುಂಬಿಕ ಮೌಲ್ಯಗಳ ಅರಿವಿನ ಜೊತೆಗೆ ಸಂಬಂಧಗಳಲ್ಲಿ ಇರುವ ಸೌಹಾರ್ದ ಭಾವದ ಮಾರ್ದವತೆಯ ಅರಿವನ್ನು, ಜವಾಬ್ದಾರಿಯನ್ನು ಮೂಡಿಸಬೇಕು.

ಚಿಕ್ಕಂದಿನಿಂದಲೇ ಮಕ್ಕಳಿಗೆ ಸಾಮಾಜಿಕ ನೀತಿ, ನಿಯಮಾವಳಿಗಳ ಕುರಿತು ಭಯವನ್ನಲ್ಲ!! ಎಚ್ಚರಿಕೆಯನ್ನು ಮೂಡಿಸಬೇಕು.

ಮಕ್ಕಳನ್ನು ತೀರಾ ಮುಚ್ಚಟೆಯಾಗಿ ಬೆಳೆಸದೆ ಸಮಾಜದ ಆಗುಹೋಗುಗಳ ಪರಿಣಾಮಗಳ ಅರಿವನ್ನು ಹೊಂದಿರುವ ರೀತಿಯಲ್ಲಿ ಬೆಳೆಸಬೇಕು. ತಪ್ಪು ಸರಿಗಳ ಪರಿಕಲ್ಪನೆ ಮಕ್ಕಳಲ್ಲಿ ಮೂಡಲೇಬೇಕು. ಯಾವುದೇ ವಿಷಯದ ಕುರಿತು ಮಕ್ಕಳು ಪಾಲಕರ ನಾಳ ಕೇಳುವ ನಿಟ್ಟಿನಲ್ಲಿ ಮಕ್ಕಳೊಂದಿಗೆ ಮಾತನಾಡುವಷ್ಟು ತಾಳ್ಮೆ, ಸಮಯ ಮತ್ತು ವ್ಯವಧಾನವನ್ನು ಹೊಂದಿರಬೇಕು.

ಮಕ್ಕಳು ಪಾಲಕರನ್ನು ಪ್ರಶ್ನಿಸುವ ಬದಲು ಗೂಗಲ್ ನ ಮೊರೆ ಹೋದರೆ ಅದು ಒಂದು ರೀತಿಯಲ್ಲಿ 'ಗಣಪನನ್ನು ಮಾಡು ಎಂದರೆ ಅವರಪ್ಪನನ್ನು ಮಾಡಿದಂತೆ ' ಆಗುತ್ತದೆ. ಮಕ್ಕಳು ತಿಳಿದುಕೊಳ್ಳಬೇಕಾದ ವಿಷಯಕ್ಕಿಂತ ನೂರು ಪಟ್ಟು ಹೆಚ್ಚು ವಿಷಯಗಳ ಕುರಿತು ಅನವಶ್ಯಕ ಕುತೂಹಲ, ಆಸಕ್ತಿ ಹುಟ್ಟಿಸುವಂತಹ ವಿಷಯ ನಿರೂಪಣೆಯನ್ನು ಶ್ರವಣ, ದೃಶ್ಯ ಮಾಧ್ಯಮಗಳಲ್ಲಿ ಪಡೆಯಬಹುದು. ಇಲ್ಲಿ ಎಷ್ಟೋ ಬಾರಿ ಮನವನ್ನು ಅರಳಿಸುವ ಬದಲಾಗಿ ಕೆರಳಿಸುವ ರೀತಿಯಲ್ಲಿ ವಿಷಯಗಳು ಮಕ್ಕಳಿಗೆ ತಲುಪಬಹುದು.... ಇದಕ್ಕೆ ಬದಲಾಗಿ ಪಾಲಕರು ತಮ್ಮ ಇತಿ ಮಿತಿಯಲ್ಲಿ ವಿಷಯಗಳನ್ನು ವೈಜ್ಞಾನಿಕವಾಗಿ ವಿವರಿಸಬಹುದು.

ಶಾಲೆಗಳಲ್ಲಾದರೂ ಅಷ್ಟೇ... ಗಂಡು ಮಕ್ಕಳಿಗೆ ಹಾಗೂ ಹೆಣ್ಣು ಮಕ್ಕಳಿಗೆ ಹೈಸ್ಕೂಲು ಹಾಗೂ ಕಾಲೇಜು ಹಂತದಲ್ಲಿ ಕೂಡ ಯಾವುದೇ ರೀತಿಯ ಲೈಂಗಿಕ ಶಿಕ್ಷಣದ ಅರಿವನ್ನು ಮೂಡಿಸುವ ತರಬೇತಿಗಳು ಇಲ್ಲ. ಅವರು ಕೇಳುವ, ಅರಿಯುವ ವಿಷಯಗಳು ಅವರಂತೆಯೇ ಇರುವ ಅಬೋಧ ಸ್ನೇಹಿತರ ಕಪೋಲ ಕಲ್ಪಿತ ವಿಷಯಗಳಾಗಿರುವುದು ಪರಿಸ್ಥಿತಿಯ ಗಂಭೀರತೆಯನ್ನು ತೋರುತ್ತದೆ.

ಅವಿಭಕ್ತ ಕುಟುಂಬಗಳಲ್ಲಿ... ನಮಗೆ ದೊರೆಯದ್ದು ನಮ್ಮ ಮಕ್ಕಳಿಗಾದರೂ ದೊರೆಯಲಿ ಎಂಬ ಭಾವದಲ್ಲಿ ಮಕ್ಕಳು ಕೇಳುವ ಮುನ್ನವೇ ಅವರಿಗೆ ಎಲ್ಲವನ್ನು ಕೊಡ ಮಾಡುವ ಪಾಲಕರು, ಅವಶ್ಯಕತೆಗಿಂತ ಅನವಶ್ಯಕವಾದ ಆಹಾರ ಪದಾರ್ಥಗಳಲ್ಲಿ ಆಸಕ್ತಿಯನ್ನು ಹುಟ್ಟಿಸುವ ಮಾಧ್ಯಮಗಳು ಹಾಗೂ ಅಂತಹ ಪದಾರ್ಥಗಳ ಸೇವನೆಯಿಂದ ಹೆಚ್ಚುವರಿ ಹಾರ್ಮೋನುಗಳ ಬಿಡುಗಡೆಯಾಗಿ ಪ್ರಾಪ್ತ ವಯಸ್ಸಿಗೆ ಮುನ್ನವೇ ಹದಿವಯಸ್ಸಿನ ಹಸಿ–ಬಿಸಿ ಕಲ್ಪನೆಗಳನ್ನು ಮೂಡಿಸಿಕೊಳ್ಳುವ ಮಕ್ಕಳು ಪಾಲಕರಿಗೆ ಸಮಸ್ಯೆಯಾಗಿದ್ದಾರೆ. ಇನ್ನು ಶಾಲೆಯ ಕೆಲಸಗಳಿಗೆ ಬೇಕೇ ಬೇಕು ಎಂದು ಹಠ ಮಾಡಿ ಕೊಂಡುಕೊಳ್ಳುವ ಮೊಬೈಲ್, ಟ್ಯಾಬ್ ನಂತಹ ಗ್ಯಾಜೆಟ್ ಗಳು ಕೂಡ ಮಕ್ಕಳ ಮನಸ್ಸನ್ನು ಕೆಡಿಸುತ್ತಿವೆ. ಪ್ರೈವೆಸಿ ಎಂಬ ಹೆಸರಿನಲ್ಲಿ ಎಲ್ಲದಕ್ಕೂ ಪಾಸ್ವರ್ಡ್ ಇಟ್ಟು ಅದು ಯಾರ ಕೈಗೂ ಸಿಗದಂತೆ ಎಚ್ಚರ ವಹಿಸುವ ಮಕ್ಕಳು ಹಾದಿ ತಪ್ಪಲು ಮತ್ತಿನ್ನೇನು ಬೇಕು?

ಸಾಮಾಜಿಕವಾಗಿ ಎಲ್ಲ ವಿಷಯಗಳಿಂದ ದೂರವಾಗಿರುವ ಕುಟುಂಬಗಳ ಮಕ್ಕಳು, ಕೌಟುಂಬಿಕ ಕಲಹ, ಪಾಲಕರ ವಿಚ್ಛೇದನದ ಭೀತಿ, ಬಡತನ ಬೇರೊಬ್ಬರ ಐಷಾರಾಮಿ ಬದುಕನ್ನು ಕಂಡು ಹಾಗೆಯೇ ಇರಬೇಕೆಂದು ಆಶಿಸುವ ಮಕ್ಕಳು, ಪ್ರಸ್ತುತ ಸಮಾಜ ಇರುವುದೇ ಹೀಗೆ ಎಂಬ ಭ್ರಾಂತಿಯನ್ನು ಹುಟ್ಟು ಹಾಕುವ ಸಾಮಾಜಿಕ ಜಾಲತಾಣಗಳು, ಬೇರೊಬ್ಬರ ತಲೆ ಹೊಡೆದು ಆಸ್ತಿ ಮಾಡಿ ಅದನ್ನು ಅನುಭವಿಸುವುದೇ ಬದುಕಿನ ಮಹತ್ವದ ಸಾಧನೆ, ಮಚ್ಚು ಲಾಂಗುಗಳನ್ನು ಕೈಯಲ್ಲಿ ಹಿಡಿದು ತಿರುಗುವವನೇ ನಿಜವಾದ ಹೀರೋ, ಮನದ ಕಾಮನೆಗಳನ್ನು ಬಡಿದೆಬ್ಬಿಸುವ ಹಸಿ ಬಿಸಿ ಪ್ರಣಯದ ದೃಶ್ಯಗಳನ್ನು ಬಿಂಬಿಸುವ ಚಲನಚಿತ್ರಗಳು.... ಇವುಗಳ ಪರಿಣಾಮವಾಗಿ ಮಕ್ಕಳು ನೈತಿಕತೆಯ ಪರಿಧಿಯನ್ನು ದಾಟಿ ಹಾಳಾಗಿ ಹೋಗುತ್ತಿದ್ದಾರೆ.

ಮಕ್ಕಳಿಗಾಗಿ ಆಸ್ತಿ ಮಾಡುವುದಕ್ಕಿಂತ ಹೆಚ್ಚಿನ ಜವಾಬ್ದಾರಿ ಮಕ್ಕಳಿಗಾಗಿ ಉತ್ತಮ ಮೌಲ್ಯಯುತ ಬದುಕನ್ನು ಕಟ್ಟಿ ಕೊಡುವುದು ಆಗಿದೆ. ಪರಿಹಾರ ನಮ್ಮ ಕೈಯಲ್ಲಿಯೇ ಇದ್ದರೂ ಅದಷ್ಟು ಸುಲಭ ಸಾಧ್ಯವಿಲ್ಲ ಎಂಬ ಮಾತುಗಳು ಪಾಲಕರದ್ದಾಗಿವೆ...ನಿಜ! ಆದರೆ ಪ್ರಯತ್ನ ಪಡುವುದರಲ್ಲಿ ತಪ್ಪಿಲ್ಲ ಅಲ್ಲವೇ ?

- **ಪಾಲಕರ ( ತಂದೆ ಮತ್ತು ತಾಯಿ ) ನಡುವಿನ ಸೌಹಾರ್ದ ಸಂಬಂಧ ಮಕ್ಕಳಲ್ಲಿ ಧೈರ್ಯವನ್ನು, ಆತ್ಮವಿಶ್ವಾಸವನ್ನು ಮೂಡಿಸುತ್ತದೆ. ಅಭದ್ರತೆಯ ನೆಲೆಯಲ್ಲಿ ಮಕ್ಕಳು ತಪ್ಪು ಹಾದಿಗೆ ಎಳಸುವುದು ಹೆಚ್ಚು.**
- **ಮಾಧ್ಯಮಿಕ ಶಾಲೆಯಿಂದಲೇ ಮಕ್ಕಳಿಗೆ ನಮ್ಮ ದೇಹದ ಕುರಿತು ವೈಜ್ಞಾನಿಕ ವಿವರಣೆಯ ಜೊತೆಗೆ ಅವುಗಳ ಕಾರ್ಯ ವ್ಯಾಪ್ತಿಯ ಕುರಿತು ಅರಿವು ಮೂಡಿಸಬೇಕು. ಹದಿಹರೆಯದ ಅಲ್ಲಲ್ಲ.... ಹತ್ತರಿಂದ ಇಪ್ಪತ್ತರ ವಯಸ್ಸಿನವರೆಗಿನ ದೈಹಿಕ, ಮಾನಸಿಕ, ಪ್ರಚೋದನೆಗಳ ನಿರ್ವಹಣೆಯ ನಿಟ್ಟಿನಲ್ಲಿ ಮಕ್ಕಳನ್ನು ಹಾಡು, ನೃತ್ಯ, ನಾಟಕ, ಸಂಗೀತ, ಕ್ರೀಡೆ ಮುಂತಾದ ಚಟುವಟಿಕೆಗಳಲ್ಲಿ ತೊಡಗಿಸಬೇಕು. ದೈಹಿಕ ಮತ್ತು ಮಾನಸಿಕ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವ ಮಕ್ಕಳ ಮನಸ್ಸಿನಲ್ಲಿ ಹರೆಯದ ಹುಚ್ಚು ಕೋಡಿಯಂತಹ ಭಾವನಾತ್ಮಕ ಒತ್ತಡಗಳು ಹರಿದುಹೋಗುತ್ತವೆ.**
- **ಸುಳ್ಳೇ ಆದರೂ ಸರಿ ನಾಟಕ, ನೃತ್ಯ, ಹಾಡುಗಳಲ್ಲಿ ನವರಸಗಳನ್ನು ಅಭಿನಯಿಸುವ, ಪ್ರದರ್ಶಿಸುವ ಮೂಲಕ ಮಕ್ಕಳ ಭಾವನೆಗಳ ಕಟ್ಟು ಸಹಜವಾಗಿ ಮತ್ತು ಸರಿಯಾದ ರೀತಿಯಲ್ಲಿ ಒಡೆದು ಹೋಗುವ ಕಾರಣ ಇಂತಹ ಚಟುವಟಿಕೆಗಳಲ್ಲಿ ಮಕ್ಕಳನ್ನು ತೊಡಗಿಸುವುದು ಅತ್ಯವಶ್ಯಕ.**

ಈ ರೀತಿಯ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವ ಮಕ್ಕಳು ನಿಧಾನವಾಗಿ ಶಿಸ್ತು, ಸಂಯಮ, ಶ್ರದ್ಧೆ ಹಾಗೂ ತಾಳ್ಮೆಯನ್ನು ಬದುಕಿನಲ್ಲಿ ರೂಡಿಸಿಕೊಳ್ಳುತ್ತಾರೆ. ಭಾವನಾತ್ಮಕ ಮತ್ತು ವಾಸ್ತವ ಜಗತ್ತಿನ ನಡುವಿನ ಅಂತರವನ್ನು ಕಂಡುಕೊಳ್ಳುತ್ತಾರೆ. ಬದುಕೇ ಬೇರೆ ಭಾವನೆಗಳೇ ಬೇರೆ ಎಂಬ ಅರಿವನ್ನು ಹೊಂದುತ್ತಾರೆ.

- **ಸಹವಾಸ.... ಸಮಾನ ಮನಸ್ಕರ ಸಹವಾಸಕ್ಕಿಂತ ಬದುಕಿನಲ್ಲಿ ಉತ್ತಮ ಗುರಿ, ಶ್ರದ್ಧೆ ಹೊಂದಿರುವ ಸ್ನೇಹಿತರ ಜೊತೆಗೆ ಸ್ನೇಹವನ್ನು ಇಟ್ಟುಕೊಳ್ಳುವುದು ಒಳ್ಳೆಯದು ಎಂಬುದನ್ನು ಮಕ್ಕಳಿಗೆ ಮನವರಿಕೆ ಮಾಡಿಕೊಡಬೇಕು. ಹೂವಿನ ಜೊತೆ ನಾರು ಕೂಡ ಸ್ವರ್ಗಕ್ಕೆ ಹೋಗುತ್ತದೆ ಎಂದು ಹೇಳುತ್ತಾರಲ್ಲವೇ ಹಾಗೆಯೇ ಉತ್ತಮರ ಒಡನಾಟ ಬದುಕಿನಲ್ಲಿ ಉನ್ನತವಾದದನ್ನು ಸಾಧಿಸಲು ಅವಶ್ಯಕ ಎಂಬುದನ್ನು ಮಕ್ಕಳಿಗೆ ಮನಗಾಣಿಸಬೇಕು.**
- **ನುರಿತ ತಜ್ಞ ವೈದ್ಯರಿಂದ, ಸಮಾಲೋಚಕರಿಂದ ಲೈಂಗಿಕ ಶಿಕ್ಷಣದ ಅರಿವನ್ನು ಮೂಡಿಸಬೇಕು. ದೇಹ ಮತ್ತು ಮನಸ್ಸುಗಳ ಶುಚಿತ್ವವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವ ಕುರಿತು ಮಕ್ಕಳಿಗೆ ಅರಿವನ್ನು ಮೂಡಿಸಬೇಕು.**

ತಮ್ಮ ಮನದಲ್ಲಿ ಮೂಡುತ್ತಿರುವ ಭಾವನೆಗಳನ್ನು ಯಾವ ರೀತಿ ನಿಯಂತ್ರಿಸುವ ಹಾಗೂ ಅವುಗಳನ್ನು ಸಮರ್ಥವಾಗಿ ನಿರ್ವಹಿಸುವ ಹೊಣೆಗಾರಿಕೆಯ ಅರಿವನ್ನು ಮೂಡಿಸಬೇಕು.

ಒಂದೊಮ್ಮೆ ತಪ್ಪು ಮಾಡಿದ್ದೆ ಆದರೆ ಅದರ ಪರಿಣಾಮಗಳ ಅರಿವನ್ನು ಕೂಡ ಗೊತ್ತು ಪಡಿಸಬೇಕು.

ಇದೆಲ್ಲದರ ಹೊರತಾಗಿಯೂ ನಮ್ಮ ನೆಲದ ಕಾನೂನಿನ ಕುರಿತು ಪಾಲಕರು ಮತ್ತು ಶಿಕ್ಷಕರ ಜವಾಬ್ದಾರಿ ಇರಲೇಬೇಕು. ಪ್ರೊಟೆಕ್ಷನ್ ಆಫ್ ಚೈಲ್ಡ್ ಫ್ರಮ್ ಸೆಕ್ಷುಯಲ್ ಆಫೆನ್ಸಸ್ (ಕಔಅಖಔ) ಕಾಯ್ದೆಯ ಅರಿವನ್ನು ಮಕ್ಕಳಿಗೆ ಮೂಡಿಸಬೇಕು.

ಮಕ್ಕಳ ಮೇಲೆ ನಡೆಯುವ ಲೈಂಗಿಕ ಶೋಷಣೆಯ ಕುರಿತು ಮುಕ್ತವಾಗಿ ಅವರೊಂದಿಗೆ ಮಾತನಾಡುವ ಚರ್ಚಿಸುವ ಸಮಾಲೋಚಿಸುವ ಅಗತ್ಯತೆ ಹಿಂದೆಂದಿಗಿಂತಲೂ ಈಗ ಹೆಚ್ಚಾಗಿದೆ. ಅರಿವಿಗೆ ಬರುವ ಮುನ್ನವೇ ಸಂಭವಿಸಬಹುದಾದ ಅಪರಾಧಗಳ ಸುಳಿಯಲ್ಲಿ ಮಕ್ಕಳು ಸಿಲುಕಿ ಒದ್ದಾಡಬಾರದು ಅಲ್ಲವೇ?

ಈ ನಿಟ್ಟಿನಲ್ಲಿ ಬುದ್ಧಿಜೀವಿಗಳು, ಸಾಮಾಜಿಕ ಮನ ಶಾಸ್ತ್ರ ಪರಿಣತರು, ಶಿಕ್ಷಣ ತಜ್ಞರೊಂದಿಗೆ ಸರಕಾರಗಳು ಸಮಾಲೋಚನೆ ಮಾಡಿ ಮುಂದುವರೆಯಬೇಕು. ಮಕ್ಕಳ ಭವಿಷ್ಯಕ್ಕೆ ಹೊಸ ಹಾದಿಯನ್ನು ತೋರಬೇಕು ಎಂಬ ಆಶಯದೊಂದಿಗೆ



**ವೀಣಾ ಹೇಮಂತ್ ಗೌಡ ಪಾಟೀಲ್**
ಮುಂಡರಗಿ ಗದಗ್

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,